
RNI.KAR/KAN/2009/31934 ಬೆಂಗಳೂರು ಸಂಪುಟ: 16 ಸಂಚಿಕೆ: 74 ಪುಟ: 06 ಬುಧವಾರ 12-02-2025

Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu Honourary Editor: Venkatesh



ಆ ನಟಿಗಾಗಿ ಪ್ರಾಣವನ್ನೇ ಕೊಡಲು ಮುಂದಾಗಿದ್ರಂತೆ!

'ಸ್ಲೋ ಮೋಷನ್' ಇಲ್ಲದೆ ರಜನಿ ಇಲ್ಲ

ಫೋಟೋಶೂಟ್ ಮೂಲಕ ವೀಣಾ ಪ್ರತ್ಯಕ್ಷ ಪುಟ 6

## ಹೂಡಿಕೆದಾರರ ಸಮಾವೇಶದಲ್ಲಿ ಉದ್ಯಮ ಪರಿಣಿತರ ಒಕ್ಕೊರಲ ಅಭಿಪ್ರಾಯ

# ಪ್ರತಿಭೆ, ಸಾಮರ್ಥ್ಯ ಸೃಷ್ಟಿಸುವ ಜರೂರಿದೆ

**ಬೆಂಗಳೂರು:** 'ನಾವು ಸೆಮಿಕಂಡಕ್ಟರ್ ಕ್ಷೇತ್ರದ ಸಹಿತ ಎಲ್ಲಾ ಕೈಗಾರಿಕಾ ವಲಯಗಳಿಗೆ ಸಂಬಂಧಿಸಿದಂತೆ ಬರೀ ಬಂಡವಾಳ ಆಕರ್ಷಿಸುವ ಬಗ್ಗೆ ಮಾತನಾಡುತ್ತಿರುತ್ತೇವೆ. ಆದರೆ, ವಾಸ್ತವವಾಗಿ ನಾವು ಪ್ರತಿಭೆ ಮತ್ತು ಸಾಮರ್ಥ್ಯ ಎರಡನ್ನೂ ಸೃಷ್ಟಿಸುವ ಜರೂರಿದೆ. ಇದು ಸಾಧ್ಯವಾದರೆ, ಬಂಡವಾಳದ ಹರಿವು ತನ್ನಿಂತಾನೇ ಆಗುತ್ತದೆ.'



ಇದು ಜಾಗತಿಕ ಹೂಡಿಕದಾರರ ಸಮಾವೇಶದಲ್ಲಿ ಬುಧವಾರ ನಡೆದ 'ಸೆಮಿಕಂಡಕ್ಟರ್ ಕ್ರಾಂತಿಯಲ್ಲಿ ಭಾರತದ ನಾಯಕತ್ವದ ಸರದಿ' ಕುರಿತು ನಡೆದ ಗೋಷ್ಠಿಯಲ್ಲಿ ಮಾತನಾಡಿದ ಉದ್ಯಮ ಪರಿಣತರಾದ ಟೆಕ್ಸಾಸ್ ಇನ್ಸ್ಟ್ರುಮೆಂಟ್ಸ್ ಸಿಇಒ ಸಂತೋಷಕುಮಾರ್, ಎನ್‌ಎಕ್ಸ್‌ಪಿ ಸೆಮಿಕಂಡಕ್ಟರ್ಸ್ ಉಪಾಧ್ಯಕ್ಷ ಹಿತೇಂದ್ರ ಗಾರ್ಗ್ ಮತ್ತು ಗ್ಲೋಬಲ್ ಫ್ಯಾಬ್ ಎಂಜಿನಿಯರಿಂಗ್ ಸೊಲ್ಯೂಷನ್ಸ್ ಕಂಪನಿಯ ವ್ಯವಸ್ಥಾಪಕ ನಿರ್ದೇಶಕ ಜಿತೇಂದ್ರ ಛಡ್ಡಾ ಒಕ್ಕೊರಲಿನಿಂದ ವ್ಯಕ್ತಪಡಿಸಿದ ಕಳಕಳಿಯಾಗಿತ್ತು.

ಮೊದಲಿಗೆ ಮಾತನಾಡಿದ ಸಂತೋಷ ಕುಮಾರ್, 'ಸೆಮಿಕಂಡಕ್ಟರ್ ಕ್ಷೇತ್ರದಲ್ಲಿ ಮುಂದಿನ ಹತ್ತು ವರ್ಷಗಳು ಭಾರತದ್ದಾಗಿವೆ. ಈ ಅವಧಿಯಲ್ಲಿ ಈ ಕ್ಷೇತ್ರದ ಈಗಿನ 40 ಬಿಲಿಯನ್ ಡಾಲರ್ ವಹಿವಾಟು 400 ಬಿಲಿಯನ್ ಡಾಲರ್ ಮೀರಲಿದೆ. ಆದರೆ, ನಮ್ಮ ಶಿಕ್ಷಣ ರಂಗದಲ್ಲಿ ಗುಣಮಟ್ಟದ ಬೋಧಕರು, ಸಂಶೋಧನೆ ಮತ್ತು ಪ್ರಾಯೋಗಿಕ ಕಲಿಕೆ ಮೂರರ ಕಡೆಗೂ ಆದ್ಯ ಗಮನ ಕೊಡಬೇಕು. ಶಿಕ್ಷಣ ಸಂಸ್ಥೆಗಳಲ್ಲಿ ಸರಕಾರವು ರಾಷ್ಟ್ರೀಯ ಸಮಸ್ಯೆಗಳನ್ನು ಮುಂದಿಟ್ಟು, ಅವುಗಳಿಗೆ ದಕ್ಷ ಪರಿಹಾರ ಕಂಡುಹಿಡಿಯುವಂತಹ ಸಂಶೋಧನಾ ಚಟುವಟಿಕೆಗಳನ್ನು ಪ್ರೋತ್ಸಾಹಿಸಬೇಕಾದ ಜರೂರಿದೆ' ಎಂದು ವಾಸ್ತವ ಪರಿಸ್ಥಿತಿಯತ್ತ ಗಮನ ಸೆಳೆದರು.

ದೇಶವನ್ನು ಇನ್ನು ಕೆಲವೇ ವರ್ಷಗಳಲ್ಲಿ 5 ಟ್ರಿಲಿಯನ್ ಡಾಲರ್ ಮೌಲ್ಯದ ಆರ್ಥಿಕತೆಯಾಗಿ ಬೆಳೆಸುವ ಗುರಿ ನಮ್ಮ ಮುಂದಿದೆ. ಇದರಲ್ಲಿ 3 ಟ್ರಿಲಿಯನ್ ಡಾಲರ್ ಇಎಸ್ಡಿಎಂ ವಲಯದ ಕೊಡುಗೆಯೇ ಆಗಿರಲಿದೆ. ಆದರೆ, ಅವಕಾಶಗಳು ಕೇವಲ ಭಾರತಕ್ಕೆ ಮಾತ್ರ ಇರುವುದಿಲ್ಲ. ಬದಲಿಗೆ ಅವು ಎಲ್ಲ ದೇಶಗಳಿಗೂ ಲಭ್ಯವಿರುತ್ತವೆ. ಅವು ನಮ್ಮದಾಗಬೇಕೆಂದರೆ ಗುಣಮಟ್ಟದ ಶಿಕ್ಷಣ ವ್ಯವಸ್ಥೆಯ ಕಡೆಗೆ ಗಮನ ಕೊಡಬೇಕು ಎಂದು ಅವರು ಪ್ರತಿಪಾದಿಸಿದ್ದಾರೆ.ಜಿತೇಂದ್ರ ಛಡ್ಡಾ ಮಾತನಾಡಿ, ಸೆಮಿಕಂಡಕ್ಟರ್ ಕ್ಷೇತ್ರದ ಚಿಪ್ ವಿನ್ಯಾಸದಲ್ಲಿ ಭಾರತದ ಪಾಲು ಶೇಕಡ 25ರಷ್ಟಿದೆ. ಆದರೆ, ಉತ್ಪಾದನೆಯಲ್ಲಿ ನಾವು ಹಿಂದಿದ್ದೇವೆ. ಇನ್ನು 5-10 ವರ್ಷಗಳಲ್ಲಿ ಕೃತಕ ಬುದ್ಧಿಮತ್ತೆ ಎಲ್ಲ ಕ್ಷೇತ್ರಗಳನ್ನೂ ಆವರಿಸಿಕೊಳ್ಳಲಿದೆ. ಆಗ 15-20 ಮಿಲಿಯನ್ ಡಾಲರ್ ಹೂಡಿಕೆಯಲ್ಲಿ 'ಪರ್ಸನಲ್ ಡಿಸೈನ್' ಪರಿಣತಿಯು ಮುನ್ನೆಲೆಗೆ ಬರಲಿದೆ. ಪುಟ 2

## ನಾವೀನ್ಯತೆಗಳ ಭವಿಷ್ಯ ಪ್ರದರ್ಶನ, 40ಕ್ಕೂ ಹೆಚ್ಚು ಕಂಪನಿ ಭಾಗಿ



**ಬೆಂಗಳೂರು:** ಜಾಗತಿಕ ಹೂಡಿಕೆದಾರರ ಸಮಾವೇಶದಲ್ಲಿ ಯುವಜನರ ಗಮನ ಸೆಳೆಯುತ್ತಿರುವುದೆಂದರೆ, ನಾಳಿನ ನಮ್ಮ ಜಗತ್ತಿನಲ್ಲಿ ವಿವಿಧ ಕ್ಷೇತ್ರಗಳಲ್ಲಿ ನಿರ್ಣಾಯಕ ಪಾತ್ರ ವಹಿಸಲಿರುವ ನಾವೀನ್ಯತೆ. ಇದನ್ನು ಗಮನದಲ್ಲಿ ಇಟ್ಟುಕೊಂಡು ಏರ್ಪಡಿಸಿರುವ 'ಫ್ಯೂಚರ್ ಆಫ್ ಇನ್ನೋವೇಶನ್' ಎಕ್ಸ್-ಪೋಗೆ ಉಪ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಮತ್ತು ಬೃಹತ್ ಹಾಗೂ ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಜತೆಯಾಗಿ ಬುಧವಾರ ಚಾಲನೆ ನೀಡಿದರು.

ಬಳಿಕ ಶಿವಕುಮಾರ್ ಮತ್ತು ಪಾಟೀಲ ಇಬ್ಬರೂ ಕರ್ನಾಟಕ ಪೆವಿಲಿಯನ್, ಟೊಯೋಟಾ, ಎಂಬೆಸಿ ಗ್ರೂಪ್, ರಾಜ್ಯ ಪ್ರವಾಸೋದ್ಯಮ, ಡ್ರೋನ್ ತಂತ್ರಜ್ಞಾನದ ವೈಶಿಷ್ಟ್ಯಪೂರ್ಣ ಮಜಲುಗಳನ್ನು ಕುತೂಹಲದಿಂದ ವೀಕ್ಷಿಸಿ, ಅವುಗಳ ಬಗ್ಗೆ ಮಾಹಿತಿ ಪಡೆದುಕೊಂಡರು. ಜತೆಗೆ ಕೃಷಿಕ್ಷೇತ್ರದಲ್ಲಿ ಮಹತ್ತರ ಬದಲಾವಣೆ ಹೊತ್ತು ತರಲಿವೆ ಎನ್ನಲಾಗುತ್ತಿರುವ ಅಗ್ರಿ-ಟೆಕ್ ಮತ್ತು ವೈದ್ಯಕೀಯ ಕ್ಷೇತ್ರದಲ್ಲಿ ರೋಗಪತ್ತೆ ಮತ್ತು ಚಿಕಿತ್ಸೆಗಳನ್ನು ಸುಲಭವಾಗಿಸುವ ಆರೋಗ್ಯಸೇವೆಗಳ ತಂತ್ರಜ್ಞಾನಗಳ ಬಗ್ಗೆಯೂ ಅವರು ತಿಳಿದುಕೊಂಡರು.

ಪ್ರದರ್ಶನ ಕುರಿತು ಮಾತನಾಡಿದ ಸಚಿವ ಎಂ ಬಿ ಪಾಟೀಲ, 'ಇದರಲ್ಲಿ 40ಕ್ಕೂ ಪುಟ 2



ಜಪಾನ್ ದೇಶದ ಭಾರತದ ರಾಯಬಾರಿ ಕೀಚಿ ಒನೊ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಕಾವೇರಿ ನಿವಾಸದಲ್ಲಿ ಭೇಟಿಯಾಗಿ ಚರ್ಚಿಸಿದರು.

## 'ಆತ್ಮಹತ್ಯೆ ಭಾಗ್ಯ' ಖಂಡಿಸಿ ವಿಪಕ್ಷ ನಾಯಕರ ಪ್ರತಿಭಟನೆ

**ಬೆಂಗಳೂರು:** ರಾಜ್ಯದ ಕಾಂಗ್ರೆಸ್ ಸರಕಾರವು ಸರಕಾರಿ ಅಧಿಕಾರಿಗಳಿಗೆ ಆತ್ಮಹತ್ಯೆ ಭಾಗ್ಯ ಕರುಣಿಸಿದೆ ಎಂದು ಆಕ್ಷೇಪಿಸಿ ವಿಪಕ್ಷ ನಾಯಕರು ಇಂದು ವಿಧಾನಸೌಧದ ಎದುರು ಪ್ರತಿಭಟನೆ ನಡೆಸಿದರು.

ವಿಪಕ್ಷ ನಾಯಕ ಆರ್.ಅಶೋಕ್ ಮತ್ತು ವಿಧಾನ ಪರಿಷತ್ತಿನ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಈ ವಿನೂತನ ಮಾದರಿಯ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು. ಆರ್.ಅಶೋಕ್ ಅವರು 'ಸಿದ್ದು ಸರಕಾರದಲ್ಲಿ ಅಧಿಕಾರಿಗಳಿಗೆ ಆತ್ಮಹತ್ಯೆ ಭಾಗ್ಯ' ಎಂಬ ಘೋಷಣೆಯುಳ್ಳ ಭಿತ್ತಿಪತ್ರ ಹಿಡಿದಿದ್ದರು. ಛಲವಾದಿ ನಾರಾಯಣಸ್ವಾಮಿ ಅವರು 'ನಿಷ್ಠಾವಂತ ಅಧಿಕಾರಿಗಳಿಗೆ ರಕ್ಷಣೆ ಕೊಡಿ' ಎಂಬ ಭಿತ್ತಿಪತ್ರ ಹಿಡಿದು ಪಾಲ್ಗೊಂಡರು.

ನಿಷ್ಠಾವಂತ ಅಧಿಕಾರಿಗಳು ಕೆಲಸ ಮಾಡಲು ಆಗದ ಪರಿಸ್ಥಿತಿ ಇದೆ ಎಂದು ಅಶೋಕ್ ಅವರು ಆಕ್ಷೇಪ ವ್ಯಕ್ತಪಡಿಸಿದರು. ವಾಲ್ಮೀಕಿ ನಿಗಮದ ಅಧಿಕಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಸಬ್ ಇನ್ಸ್‌ಪೆಕ್ಟರ್



ಒಬ್ಬರು ಪ್ರಾಣ ಕಳಕೊಂಡಿದ್ದಾರೆ. ನಿರಂತರವಾಗಿ ಸರಣಿ ರೀತಿ ಆತ್ಮಹತ್ಯೆ ನಡೆಯುತ್ತಿದೆ. ಬೆದರಿಸುವ ಕೆಲಸ ಮುಂದುವರೆದಿದೆ ಎಂದು ಟೀಕಿಸಿದರು. ಗೃಹ ಸಚಿವರು ಮತ್ತು ಮುಖ್ಯಮಂತ್ರಿಗಳು ಇದರ ಕುರಿತು ಚಕಾರ ಎತ್ತಿಲ್ಲ ಎಂದು ದೂರಿದರು.

ಸಿ.ಟಿ.ರವಿ ಅವರ ವಿಷಯದಲ್ಲಿ ಯಾಕೆ ಕಾನೂನು ರೀತಿ ಬಿಟ್ಟು ಕ್ರಮ ಕೈಗೊಂಡಿದ್ದೀರಿ ಎಂದು ಕೇಳಿದರು. ನಿನ್ನೆಯ ಎರಡು ಪ್ರಮುಖ ಘಟನೆಗಳಲ್ಲಿ ಯಾರನ್ನು ಬಂಧಿಸಿದ್ದೀರಿ ಎಂದು ಪ್ರಶ್ನಿಸಿದರು. 500- 600 ಜನ ಠಾಣೆ ಮೇಲೆ ದಾಳಿ ಮಾಡಿದ್ದಾರೆ ಎಂದು ಟೀಕಿಸಿದರು.

ರಾಜ್ಯದಲ್ಲಿ ಹಿಂದೂಗಳಿಗೆ ಒಂದು ಕಾನೂನು, ಮುಸ್ಲಿಮರಿಗೆ ಇನ್ನೊಂದು ಕಾನೂನೇ ಎಂದು ಕೇಳಿದರು. ಸರಕಾರ ಪೊಲೀಸರ ವಿರುದ್ಧ ಮಾತನಾಡಿದರೆ ಅವರ ಆತ್ಮಸ್ಥೈರ್ಯ ಉಳಿಯುವುದು ಹೇಗೆ ಎಂದರು.

ಛಲವಾದಿ ನಾರಾಯಣಸ್ವಾಮಿ ಅವರು ಮಾತನಾಡಿ, ಸರಕಾರದ ಹಾಗೂ ರಾಜ್ಯದ ಗಮನ ಸೆಳೆಯಲು ಪುಟ 2

## ಎಸ್‌ಎಸ್‌ಎಲ್‌ಸಿ ಪೂರ್ವ ಸಿದ್ಧತಾ ಪರೀಕ್ಷೆ ಪರಿಷ್ಕೃತ ವೇಳಾಪಟ್ಟಿ ಪ್ರಕಟ

**ಬೆಂಗಳೂರು:** 2024-25ನೇ ಸಾಲಿನ ರಾಜ್ಯಮಟ್ಟದ ಎಸ್ ಎಸ್ ಎಲ್ ಸಿ ಪೂರ್ವಸಿದ್ಧತಾ ಪರೀಕ್ಷೆಯ ಪರಿಷ್ಕತ ವೇಳಾಪಟ್ಟಿಯನ್ನು ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ಪ್ರಕಟಿಸಿದೆ. ದಿನಾಂಕ 25-02-2025ರಿಂದ 04-03-2025 ರವರೆಗೆ ಎಸ್ ಎಸ್ ಎಲ್ ಸಿ ಪೂರ್ವಸಿದ್ಧತಾ ಪರೀಕ್ಷೆ ನಡೆಯಲಿದ್ದು ಸದರಿ ಪೂರ್ವ ಸಿದ್ಧತಾ ಪರೀಕ್ಷೆಯ ಕೆಲವು ವಿಷಯಗಳ ಸಮಯವನ್ನು ಮಾರ್ಪಾಡು ಮಾಡಿ, ಪರಿಷ್ಕತ ವೇಳಾಪಟ್ಟಿಯನ್ನು ಮಂಡಳಿಯ ಜಾಲತಾಣದಲ್ಲಿ ಪ್ರಕಟಿಸಲಾಗಿದೆ. ಎಲ್ಲಾ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಪುಟ 2

## ಆರೋಪಿಗಳ ವಿರುದ್ಧ ಮುಲಾಜಿಲ್ಲದೆ ಕ್ರಮ

**ಬೆಂಗಳೂರು:** ಮೈಸೂರಿನ ಉದಯಗಿರಿ ಪೊಲೀಸ್ ಠಾಣೆಯ ಮೇಲೆ ಕಲ್ಲೆಸೆತ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ್ದು ಆರೋಪಿಗಳ ವಿರುದ್ದ ಮುಲಾಜಿಲ್ಲದೆ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದರು.

ಈ ಬಗ್ಗೆ ಬುಧವಾರ ಮಾತನಾಡಿದ ಗೃಹ ಸಚಿವ ಡಾ.ಜಿ.ಪರಮೇಶ್ವರ್, ಪೊಲೀಸ್ ಠಾಣೆ ಮೇಲೆ ಕಲ್ಲೆಸೆದರೇ ಸುಮ್ಮನೆ ಇರಲು ಆಗಲ್ಲ. ಆರೋಪಿಗಳ ಬಂಧನಕ್ಕೆ ಸೂಚನೆ ನೀಡಿದ್ದೇನೆ. ಪ್ರಕರಣವನ್ನ ಗಂಭೀರವಾಗಿ ಪರಿಗಣಿಸಲಾಗಿದೆ. ಯಾರೇ ತಪ್ಪು ಮಾಡಿದರೂ ಮುಲಾಜಿಲ್ಲದೆ ಕ್ರಮ ಕೈಗೊಳ್ಳಲಾಗುತ್ತದೆ ಎಂದು ತಿಳಿಸಿದರು ಪುಟ 2

## ಊಹಾಪೋಹದ ವದಂತಿಗಳಿಗೆ ಬ್ರೇಕ್ ಹಾಕಿ

**ಕಲಬುರಗಿ:** ಊಹಾಪೋಹಗಳನ್ನೇ ಸತ್ಯ ಎಂದು ಬಿಂಬಿಸದಿರಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಬುಧವಾರ ಹೇಳಿದ್ದಾರೆ.

ಊಹಾಪೋಹಾದ ವದಂತಿಗಳಿಗೆ ಮಹತ್ವ ನೀಡದೇ ವರದಿಗಾರಿಕೆ ಮಾಡಿ. ಅಂತೆ ಕಂತೆಗಳನ್ನು ಬಿಟ್ಟು ನೈಜತೆಯನ್ನು ಜನತೆಗೆ ತಿಳಿಸಿ ಎಂದು ತಿಳಿಸಿದರು.

ನಾನು ಅಧ್ಯಕ್ಷ ಸ್ಥಾನದಲ್ಲಿದ್ದೇನೆ. ಎಲ್ಲಾ ಕಾಂಗ್ರೆಸ್ ಕಾರ್ಯಕರ್ತರಿಗೂ ನಾನು ಸಮನಾಗಿ ಕಾಣುತ್ತೇನೆ. ಯಾರೇ ಬಂದರೂ ಅವರೊಂದಿಗೆ ನಾನು ಗಂಟೆಗಟ್ಟಲೇ ಮಾತನಾಡುತ್ತೇನೆ. ಇದನ್ನೂ ತಮಗೆ ಹೇಗೆ ಬೇಕೋ ಹಾಗೆ ಬಿಂಬಿಸುವುದು ಸರಿ ಅಲ್ಲ



ಎಂದು ಅವರು ಹೇಳಿದರು.

ರಾಜ್ಯದಿಂದ ಅನೇಕ ಸಚಿವರು ಬಂದು ಭೇಟಿಯಾಗುತ್ತಾರೆ, ಸತೀಶ್ ಬರುತ್ತಾರೆ, ಪರಮೇಶ್ವರ್ ಬರ್ತಾರೆ, ಶಿವಕುಮಾರ್ ಬರ್ತಾರೆ, ಸಿದ್ದರಾಮಯ್ಯನೂ ಬರುತ್ತಾರೆ, ಕರ್ನಾಟಕದವರು ಎಂಬ ಕಾರಣಕ್ಕೆ ಅವರೊಂದಿಗೆ ಹೆಚ್ಚು ಸಮಯ ಮಾತಾಡುತ್ತೇನೆ,

ಅದನ್ನೇ ಮುಂದಿಟ್ಟುಕೊಂಡು ಏನೆಲ್ಲ ಬರೆಯಬೇಡಿ ಎಂದು ಹೇಳಿದರು. ಒಡಿಶಾದಲ್ಲಿ ಪಿಸಿಸಿ ಅಧ್ಯಕ್ಷರ ಬದಲಾವಣೆ ಮಾಡಿ ಬಂದಿದ್ದೇನೆ. ಅಲ್ಲಿ ಹಿಂದುಳಿದ ವರ್ಗದವರು ಪಿಸಿಸಿ ಅಧ್ಯಕ್ಷರಾಗಿದ್ದಾರೆ. ಬೇರೆ ರಾಜ್ಯಗಳಲ್ಲೂ ಕೆಲವೇ ದಿನಗಳಲ್ಲಿ ಅಧ್ಯಕ್ಷರ ಬದಲಾವಣೆ ಆಗುತ್ತೆ. ಈ ಬಗ್ಗೆ ನಿರ್ದಿಷ್ಟವಾಗಿ ನಾನು ಹೇಳಲು ಆಗಲ್ಲ. ನಾವು ಪುಟ 2

## ಕೋವಿಡ್ ಅಕ್ರಮ: ಕೋರ್ಟ್‌ಗೆ ವರದಿ

**ಬೆಂಗಳೂರು:** ಕೋವಿಡ್ - 19 ಎರಡನೇ ಅಲೆ ಸಂದರ್ಭದಲ್ಲಿ ದುಬಾರಿ ದರಕ್ಕೆ ಪಿಪಿಇ ಕಿಟ್‌ಗಳನ್ನು ಪೂರೈಸಿದ ಆರೋಪ ಸಂಬಂಧ ಪ್ರುಡೆಂಟ್ ಮ್ಯಾನೇಜ್‌ಮೆಂಟ್ ಸೊಲ್ಯೂಷನ್ ಹಾಗೂ ಲಾಜ್ ಎಕ್ಸ್‌ಪೋರ್ಟ್ ಲಿಮಿಟೆಡ್ ಕಂಪನಿಗಳ ವಿರುದ್ಧದ ವರದಿಯನ್ನು ಸರ್ಕಾರ ಹೈಕೋರ್ಟ್‌ಗೆ ಸಲ್ಲಿಸಿದೆ. ಪಿಪಿಇ ಕಿಟ್ ಪೂರೈಸಿದ ಈ ಎರಡು ಖಾಸಗಿ ಸಂಸ್ಥೆಗಳ ಪರ ಏಕಸದಸ್ಯ ಪೀಠ ನೀಡಿದ್ದ ಆದೇಶ ರದ್ದು ಕೋರಿ ರಾಜ್ಯ ಸರ್ಕಾರ ಸಲ್ಲಿಸಿದ ಮೇಲ್ಮನವಿಯು ಮುಖ್ಯ ನ್ಯಾಯಮೂರ್ತಿ ಎನ್.ವಿ. ಅಂಜಾರಿಯಾ ಹಾಗೂ ನ್ಯಾ. ಎಂ.ಐ ಅರುಣ್ ಅವರಿದ್ದ ಏಕಸದಸ್ಯ ಪೀಠದ ಮುಂದೆ ಮಂಗಳವಾರ ವಿಚಾರಣೆಗೆ ಬಂದಿತ್ತು. ಸರ್ಕಾರದ ಪರ ಹಾಜರಾಗಿದ್ದ ಹೆಚ್ಚುವರಿ



ಅಡ್ವೋಕೇಟ್ ಜನರಲ್ ರೂಬೆನ್ ಜಾಕಬ್, " ಕೋವಿಡ್ ಮೊದಲ ಅಲೆ ಸಂದರ್ಭದಲ್ಲಿಪಿಪಿಇ ಕಿಟ್‌ಗಳನ್ನು ಪೂರೈಸಲು ಪ್ರೂಡೆಂಟ್ ಮ್ಯಾನೇಜ್‌ಮೆಂಟ್ ಸೊಲ್ಯೂಷನ್ ಹಾಗೂ ಲಾಜ್ ಎಕ್ಸ್‌ಪೋರ್ಟ್ ಲಿಮಿಟೆಡ್ ಕಂಪನಿಗಳು ಟೆಂಡರ್ ಪಡೆದುಕೊಂಡಿದ್ದವು. ಆದರೆ, ಎರಡನೇ ಅಲೆ ಸಂದರ್ಭದಲ್ಲಿಹೊಸದಾಗಿ ಟೆಂಡರ್‌ನಲ್ಲಿ ಪಾಲ್ಗೊಳ್ಳದೇ ಅಧಿಕಾರಿಗಳ ಜತೆ ಶಾಮೀಲಾಗಿ ಪುಟ 2

## ಉದಯಗಿರಿ ಗಲಭೆ: ಪೊಲೀಸರ ತಪ್ಪಿಲ್ಲ

**ಮೈಸೂರು:** ಉದಯಗಿರಿ ಗಲಭೆ ಪೊಲೀಸರದ್ದು ಯಾವುದೇ ತಪ್ಪಿಲ್ಲ. ಪೊಲೀಸರು ಸರಿಯಾಗಿ ಕೆಲಸ ಮಾಡಿ ಪರಿಸ್ಥಿತಿ ನಿಭಾಯಿಸಿದ್ದಾರೆ. ಪೊಲೀಸರು ಗಾಯಗೊಂಡರೂ ಸಮಯ ಪ್ರಜ್ಞೆಯಿಂದ ಕೆಲಸ ಮಾಡಿದ್ದಾರೆ. ನಾನು ನಮ್ಮ ಪೊಲೀಸರ ಪರವಾಗಿಯೇ ಇದ್ದೇನೆ ಎಂದು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್) ಹೇಳಿದ್ದಾರೆ.

ಉದಯಗಿರಿ ಗಲಭೆಗೆ ಪೊಲೀಸರ ಕರ್ತವ್ಯಲೋಪ ಕಾರಣ ಎಂಬ ಸಚಿವ ಕೆಎಸ್ ರಾಜಣ್ಣ ಹೇಳಿಕೆ ಮೈಸೂರಿನಲ್ಲಿ ಪ್ರತಿಕ್ರಿಯಿಸಿದ ಅವರು, ರಾಜಣ್ಣ ಅವರ ಮಾತಿಗೆ ಮುಖ್ಯಮಂತ್ರಿಗಳು ಉತ್ತರ ಕೊಡುತ್ತಾರೆ. 8-10 ದಿನದಲ್ಲಿ ಮುಖ್ಯಮಂತ್ರಿಗಳೇ ಪ್ರತಿಕ್ರಿಯೆ ಕೊಡುತ್ತಾರೆ. ಮೈಸೂರಿನ ನೆಲದಲ್ಲಿ ನಿಂತು ಹೇಳ್ತಿದ್ದೇನೆ, ಪೊಲೀಸರದ್ದು ತಪ್ಪಿಲ್ಲ. ಎಲ್ಲಾ ಮಾಹಿತಿ ಪಡೆದಿದ್ದೇನೆ, ಪೊಲೀಸರು ಅನಾಹುತ ತಪ್ಪಿಸಿದ್ದಾರೆ ಎಂದರು.

ಕಲ್ಲು ಎಸೆದಿರುವವರೆಲ್ಲರೂ 14, 15 ವರ್ಷದ ಹುಡುಗರು. ಮುಖಂಡರ ಮಾತನ್ನೂ ಅವರು ಕೇಳಿಲ್ಲ. ಹಿರಿಯರು ಮತ್ತು ಮುಖಂಡರೂ ಸೇರಿ ಗಲಭೆ ಕಂಟ್ರೋಲ್ ಮಾಡಿದ್ದಾರೆ. ಪೊಲೀಸರಿಗಾದರೆ ಪ್ರೊಟೆಕ್ಷನ್ ಇತ್ತು, ಅಲ್ಲಿದ್ದ ಜನರಿಗೆ ಇರಲಿಲ್ಲ. ಪೊಲೀಸರು ಗಲಭೆ ಮಾಡಿದವರ ಪತ್ತೆ ಮಾಡುವ ಕೆಲಸ ಮಾಡುತ್ತಿದ್ದಾರೆ. ಪೊಲೀಸರು ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಂಡು ಅರೆಸ್ಟ್ ಮಾಡುತ್ತಾರೆ ಎಂದು ಹೇಳಿದರು.

ಮೆಟ್ರೋ ಪ್ರಯಾಣ ದರ ಏರಿಕೆ ವಿಚಾರದಲ್ಲಿ ಮಾತ್ರವಲ್ಲ, ಬಿಜೆಪಿ ಎಲ್ಲ ವಿಚಾರಗಳಲ್ಲೂ ರಾಜಕೀಯ ಮಾಡುತ್ತಿದೆ. ಮೆಟ್ರೋ



ಪ್ರಯಾಣ ದರ ಏರಿಕೆ ವಿಚಾರ ಕೇಂದ್ರ ವ್ಯಾಪ್ತಿಗೆ ಬರುತ್ತೆ. ದರ ಏರಿಕೆಗೆ ನೇಮಿಸಿರುವ ಮುಖ್ಯಸ್ಥರು ಅದನ್ನು ನಿರ್ಧಾರ ಮಾಡ್ತಾರೆ. ಮೆಟ್ರೋ ಪ್ರಯಾಣ ದರ ಇಳಿಕೆ ಮಾಡುವುದು ನಮ್ಮ ಕೈಯಲ್ಲಿ ಇಲ್ಲ ಎಂದರು.

ಸಹಕಾರ ಸಚಿವ ಕೆ.ಎನ್.ರಾಜಣ್ಣ ದೆಹಲಿ ಪ್ರವಾಸ ವಿಚಾರವಾಗಿ ಮಾತನಾಡಿದ ಡಿಕೆ ಶಿವಕುಮಾರ್, ಅವರು ದೊಡ್ಡವರು, ನಾನು ದೊಡ್ಡವರ ಬಗ್ಗೆ ಮಾತನಾಡಲ್ಲ. ರಾಜಣ್ಣ ನಮ್ಮ ಪಕ್ಷದ ಹಿರಿಯ ನಾಯಕರು. ಕೆ.ಎನ್.ರಾಜಣ್ಣ ಬಗ್ಗೆ ನಾನೇನು ಪ್ರತಿಕ್ರಿಯೆ ಕೊಡಲಿ ಹೇಳಿ? ಎಂದು ಪ್ರಶ್ನಿಸಿದರು.

## ಇವಿಎಂ ಡೇಟಾ ಡಿಲೀಟ್ ಮಾಡಬೇಡಿ; ಸುಪ್ರೀಂ

**ನವದೆಹಲಿ:** ಇವಿಎಂಗಳಲ್ಲಿ ಚಿಹ್ನೆ ಲೋಡಿಂಗ್ ಘಟಕಗಳನ್ನು ಪರಿಶೀಲಿಸಲು ಕೋರಿ ಸಲ್ಲಿಸಲಾದ ಅರ್ಜಿಗಳ ಕುರಿತು ಅಳವಡಿಸಿಕೊಂಡ ಕಾರ್ಯವಿಧಾನವನ್ನು ವಿವರಿಸಲು ಸುಪ್ರೀಂ ಕೋರ್ಟ್ ಬುಧವಾರ ಭಾರತೀಯ ಚುನಾವಣಾ ಆಯೋಗಕ್ಕೆ ಸೂಚಿಸಿದೆ.

ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ಮತ್ತು ನ್ಯಾಯಮೂರ್ತಿ ದೀಪಂಕರ್ ದತ್ತ ಅವರನ್ನೊಳಗೊಂಡ ವಿಶೇಷ ನ್ಯಾಯಪೀಠವು ಪರಿಶೀಲನಾ ಪ್ರಕ್ರಿಯೆಯ ಸಮಯದಲ್ಲಿ ಡೇಟಾವನ್ನು ಡಿಲೀಟ್ ಮಾಡುವುದನ್ನು ಅಥವಾ ಮರುಲೋಡ್ ಮಾಡಬೇಡಿ ಎಂದು ಚುನಾವಣಾ ಆಯೋಗಕ್ಕೆ ಸೂಚಿಸಿದೆ.

ಚುನಾವಣೆಯ ಮತ ಎಣಿಕೆ ಮುಗಿದ ಬಳಿಕ ಇವಿಎಂಗಳಿಂದ ಡೇಟಾವನ್ನು ಡಿಲೀಟ್ ಮಾಡಬಾರದು ಎಂದು ಕೋರಿ ಸಲ್ಲಿಸಲಾದ ಅರ್ಜಿಯ ಬಗ್ಗೆ ಸುಪ್ರೀಂ ಕೋರ್ಟ್ ಇಂದು ವಿಚಾರಣೆ ನಡೆಸಿತು. ಈ ವೇಳೆ ಇವಿಎಂನಿಂದ ಯಾವುದೇ ಡೇಟಾವನ್ನು ಡಿಲೀಟ್ ಮಾಡಬೇಡಿ ಎಂದು ಕೋರ್ಟ್ ಸೂಚಿಸಿದೆ. ಚುನಾವಣೆ ಬಳಿಕ ಇವಿಎಂ ಮೆಮೊರಿ ಮತ್ತು ಮೈಕ್ರೋಕಂಟ್ರೋಲರ್ ಬರ್ನ್ ಮಾಡುವ ಪ್ರಕ್ರಿಯೆಯ ಕುರಿತು ಚುನಾವಣಾ ಆಯೋಗ ಸುಪ್ರೀಂ ಕೋರ್ಟ್‌ಗೆ ಮಾಹಿತಿ ನೀಡಬೇಕೆಂದು ಸೂಚನೆ ನೀಡಲಾಗಿದೆ.



ಒಂದು ಇವಿಎಂ ಅನ್ನು ಪರಿಶೀಲಿಸಲು 40,000 ರೂ. ಶುಲ್ಕ ವಿಧಿಸಲಾಗಿದೆ ಎಂದು ಚುನಾವಣಾ ಆಯೋಗಕ್ಕೆ ತಿಳಿಸಿದ ನಂತರ ಪರಿಶೀಲನೆಯ ವೆಚ್ಚದ ಬಗ್ಗೆಯೂ ನ್ಯಾಯಪೀಠವು ಕಳವಳ ವ್ಯಕ್ತಪಡಿಸಿತು. 40,000 ರೂ. ವೆಚ್ಚವನ್ನು ಕಡಿಮೆ ಮಾಡಿ, ಅದು ತುಂಬಾ ಹೆಚ್ಚಾಗಿದೆ ಎಂದು ನ್ಯಾಯಪೀಠ ಹೇಳಿದೆ.

ಕಳೆದ ವರ್ಷ ಮೇ 1ರಿಂದ ಚಿಹ್ನೆ ಲೋಡಿಂಗ್ ಘಟಕಗಳನ್ನು ಸೀಲ್ ಮಾಡಿ ಕಂಟೇನರ್‌ನಲ್ಲಿ ಭದ್ರಪಡಿಸಬೇಕು. ಚುನಾವಣಾ ಫಲಿತಾಂಶಗಳ ಘೋಷಣೆಯ ನಂತರ 45 ದಿನಗಳವರೆಗೂ ಇವಿಎಂಗಳೊಂದಿಗೆ ಸ್ಟ್ರಾಂಗ್ ರೂಂನಲ್ಲಿ ಸಂಗ್ರಹಿಸಬೇಕು ಎಂದು ಸುಪ್ರೀಂ ಕೋರ್ಟ್ ನಿರ್ದೇಶಿಸಿದೆ.

ಮೊದಲ ಪುಟದಿಂದ

## ಸಾಮರ್ಥ್ಯ ಸೃಷ್ಟಿಸುವ ಜರೂರಿದೆ

ಜಗತ್ತಿನ ದೊಡ್ಡದೊಡ್ಡ ಆರ್ಥಿಕತೆಗಳೆಲ್ಲವೂ ಸೆಮಿಕಂಡಕ್ಟರ್ ಕ್ಷೇತ್ರವನ್ನೇ ನೆಚ್ಚಿಕೊಂಡಿವೆ. ಈಗ ತೈವಾನ್ ಮತ್ತು ಜಪಾನಿನಲ್ಲಿ ಸೆಮಿಕಂಡಕ್ಟರ್ ಚಿಪ್ ಉತ್ಪಾದನೆ ಸಮೃದ್ಧವಾಗಿದೆ. ನಮ್ಮಲ್ಲಿನ್ನೂ ಸೆಮಿಕಂಡಕ್ಟರ್ ವಲಯಕ್ಕೆ ಇಂಬು ಕೊಡುವಂತಹ ಕಾರ್ಯ ಪರಿಸರ ಪೂರ್ಣ ಪ್ರಮಾಣದಲ್ಲಿ ಸೃಷ್ಟಿಯಾಗಿಲ್ಲ ಎಂದು ಅಭಿಪ್ರಾಯಪಟ್ಟರು.

ಹಿತೇಶ್ ಗಾರ್ಗ್ ಮಾತನಾಡಿ, '20 ವರ್ಷಗಳ ಹಿಂದೆ ನಮ್ಮಲ್ಲಿ ಎನ್.ಎಫ್.ಸಿ.(ನಿಯರ್ ಫೀಲ್ಡ್ ಕಮ್ಯುನಿಕೇಶನ್) ತಂತ್ರಜ್ಞಾನ ಬಂದಾಗ ಅದಕ್ಕೆ ಬಳಕೆದಾರರೇ ಇರಲಿಲ್ಲ. ಇದಕ್ಕಾಗಿ ನಾವು ಹತ್ತು ವರ್ಷ ಕಾಯಬೇಕಾಯಿತು. ಆದರೆ ಈಗ ಬೆಂಗಳೂರಿನಲ್ಲೇ ನ್ಯಾನೊ ಮೀಟರ್ ಲೆಕ್ಕದಲ್ಲಿ ಚಿಪ್ ವಿನ್ಯಾಸಗಳು ಸಿದ್ಧವಾಗುತ್ತಿವೆ. ಇದೇ ತಂತ್ರಜ್ಞಾನದ ಶಕ್ತಿ. ಕರ್ನಾಟಕದ ವಿಶ್ವವಿದ್ಯಾಲಯಗಳು, ಕಾಲೇಜು ಮತ್ತು ನವೋದ್ಯಮಗಳಲ್ಲಿ ಸೆಮಿಕಂಡಕ್ಟರ್ ಕ್ಷೇತ್ರದ ಬೆಳವಣಿಗೆಗೆ ಅಪಾರ ಅವಕಾಶಗಳಿವೆ ಎಂದು ನುಡಿದರು.

ಭಾರತ ಮತ್ತು ಅದರಲ್ಲೂ ಕರ್ನಾಟಕ ಸಾಫ್ಟ್‌ವೇರ್ ಆಡುಂಬೊಲಗಳಾಗಿವೆ. ಬೆಂಗಳೂರಿನಲ್ಲಂತೂ ಎಲೆಕ್ಟ್ರಾನಿಕ್ಸ್ ವಲಯದಲ್ಲಿ ತುಂಬಾ ಸಂಶೋಧನೆಗಳು ನಡೆಯುತ್ತಿವೆ. ಆದರೆ ಇವುಗಳಿಗೆ ತಕ್ಕಂತಹ ಮಾರುಕಟ್ಟೆಯನ್ನು ಸೃಷ್ಟಿಸುವ ಅನ್ವಯಿಕತೆಯ ಕೊರತೆ ನಮ್ಮಲ್ಲಿ ಕಾಣುತ್ತಿದೆ. ಇದರ ಜೊತೆಗೆ ಹೆಚ್ಚುಹೆಚ್ಚು ಸಹಭಾಗಿತ್ವಕ್ಕೆ ಉತ್ತೇಜನ ಸಿಗುವಂತಾಗಬೇಕು. ಇದಿಲ್ಲದೆ ಹೋದರೆ, ಉದ್ಯಮದ ಬೆಳವಣಿಗೆ ಕುಂಟುತ್ತ ಸಾಗುತ್ತದೆ ಎಂದು ಅವರು ಕಳವಳ ವ್ಯಕ್ತಪಡಿಸಿದರು.

ಲ್ಯಾಮ್ ರೀಸರ್ಚ್ ಉನ್ನತಾಧಿಕಾರಿ ರಂಗೇಶ್ ಗೋಷ್ಠಿಯನ್ನು ನಿರ್ವಹಿಸಿದರು

## 40ಕ್ಕೂ ಹೆಚ್ಚು ಕಂಪನಿ ಭಾಗಿ

ಹೆಚ್ಚು ಕಂಪನಿಗಳು ಭಾಗವಹಿಸಿವೆ. ಈ ಪೈಕಿ ಜಾಗತಿಕ ಮಟ್ಟದ ಕಂಪನಿಗಳು ಮತ್ತು ಪ್ರವರ್ಧಮಾನಕ್ಕೆ ಬರುತ್ತಿರುವ ನವೋದ್ಯಮಗಳೆರಡೂ ಇವೆ. ಡ್ರೋನ್, ಬಾಹ್ಯಾಕಾಶ, ಕೃಷಿ, ಆರೋಗ್ಯ, ಉತ್ಪಾದನಾ ವಲಯ, ವೈಮಾಂತರಿಕ್ಷ, ರಕ್ಷಣೆ ಮುಂತಾದ ಕ್ಷೇತ್ರಗಳಲ್ಲಿ ಮುಂಚೂಣಿಗೆ ಬರುತ್ತಿರುವ ಆಧುನಿಕ ತಂತ್ರಜ್ಞಾನ ಧಾರೆಗಳನ್ನು ಇಲ್ಲಿ ನೋಡಬಹುದು' ಎಂದರು.

ಮುಖ್ಯವಾಗಿ ಇಲ್ಲಿ ಮರುಬಳಕೆ ಇಂಧನ, ಸೆಮಿಕಂಡಕ್ಟರ್, ವಿದ್ಯುಚ್ಚಾಲಿತ ವಾಹನಗಳು ಮತ್ತು ಸುಸ್ಥಿರ ಉತ್ಪಾದನೆಗೆ ಹೆಸರಾದ ಕಂಪನಿಗಳು ಪಾಲ್ಗೊಂಡಿವೆ. ಜೊತೆಗೆ ರಾಜ್ಯದ ಸಾಧನೆಗಳನ್ನು ಬಿಂಬಿಸುವ ಪ್ರತ್ಯೇಕ 'ಕರ್ನಾಟಕ ಪೆವಿಲಿಯನ್' ಕೂಡ ಇದೆ. ಪಾಲ್ಗೊಂಡಿರುವ ಕಂಪನಿಗಳಲ್ಲಿ ಜಿ.ಇ ಹೆಲ್ತ್ ಕೇರ್, ಹೀರೋ ಫ್ಯೂಚರ್ ಎನರ್ಜೀಸ್, ರಿವರ್ ಮೊಬಿಲಿಟಿ, ಸರಳಾ ಏವಿಯೇಶನ್, ಗೆಲಾಕ್ಸಿ ಸ್ಪೇಸ್, ಲ್ಯಾಮ್ ರೀಸರ್ಚ್ ಪ್ರಮುಖವಾಗಿವೆ. 'ಕರ್ನಾಟಕ ಪೆವಿಲಿಯನ್'ನಲ್ಲಿ ಕ್ವಿನ್ ಸಿಟಿ, ಫ್ಲೈಯಿಂಗ್ ವೆಡ್ಜ್, ಬೆಲ್ಲಾಟ್ರಿಕ್ಸ್, ಸ್ಕೈಸರ್ವ್, ಫ್ಲಕ್ಸ್ ಆಟೋ ಮುಂತಾದ ಉದ್ಯಮಗಳಿವೆ.

## ವಿಪಕ್ಷ ನಾಯಕರ ಪ್ರತಿಭಟನೆ

ಈ ಪ್ರದರ್ಶನ ಮಾಡಿದ್ದೇವೆ. ವಿಪಕ್ಷ ನಾಯಕರ ಜವಾಬ್ದಾರಿ ನಿರ್ವಹಿಸುತ್ತಿದ್ದೇವೆ ಎಂದು ತಿಳಿಸಿದರು.

ಸರಕಾರ ಉತ್ತರ ಕೊಡುತ್ತಿಲ್ಲ; ನಾವೀಗ ಜನರಿಂದ ಉತ್ತರ ಬಯಸುವಂತಾಗಿದೆ ಎಂದು ಹೇಳಿದರು. ಕೆಂಗಲ್ ಹನುಮಂತಯ್ಯನವರು ವಿಧಾನಸೌಧ ಕಟ್ಟಿಸುವಾಗ 'ಸರಕಾರದ ಕೆಲಸ ದೇವರ ಕೆಲಸ' ಎಂಬ ದೊಡ್ಡ ವಿಷಯವನ್ನಿಟ್ಟು ಇದನ್ನು ನಿರ್ಮಿಸಿದ್ದಾರೆ. ಹೆಣ್ಮಗಳಿಗೆ ಅವಾಚ್ಯ ಶಬ್ದಗಳಿಂದ ನಿಂದಿಸುವುದು ದೇವರ ಕೆಲಸವೇ? ನಾವು ಹೇಳಿದಂತೆ ನಡೆದುಕೊಳ್ಳದಿದ್ದರೆ ಲಾರಿ ಹತ್ತಿಸುತ್ತೇವೆ ಎಂದು ಬೆದರಿಸುವುದು ದೇವರ ಕೆಲಸವೇ? ವಾಲ್ಮೀಕಿ ನಿಗಮದಲ್ಲಿ 187 ಕೋಟಿ ನುಂಗಿದ್ದಾಗಿ ಹೇಳಿದಾಗ 87 ಕೋಟಿ ಮಾತ್ರ ನುಂಗಿದ್ದಾಗಿ ಹೇಳುವುದು ದೇವರ ಕೆಲಸವೇ ಎಂದು ಕೇಳಿದರು.

ಆತ್ಮಹತ್ಯೆ ಮಾಡಿಕೊಂಡ ಅಧಿಕಾರಿಗಳು ಬರೆದಿಟ್ಟ ಹೆಸರುಗಳನ್ನು ಮರೆಮಾಚಿದ್ದು ದೇವರ ಕೆಲಸವೇ ಎಂದು ಅವರು ಪ್ರಶ್ನೆಯನ್ನು ಮುಂದಿಟ್ಟರು.

## ವದಂತಿಗಳಿಗೆ ಬ್ರೇಕ್ ಹಾಕಿ

ಒಂದೊಂದು ರಾಜ್ಯಗಳಲ್ಲಿ ಬದಲಾವಣೆ ಮಾಡುತ್ತಿದ್ದೇವೆ. ಒಂದೆರಡು ದಿನದಲ್ಲಿ ಮತ್ತೆ ಒಂದೆರಡು ರಾಜ್ಯಗಳಲ್ಲಿ ಬದಲಾವಣೆ. 8 ದಿನಗಳಲ್ಲಿ ಎಲ್ಲಾ ಬದಲಾವಣೆ ಮುಗಿಯುತ್ತೆ ಎಂದು ಹೇಳಿದರು.

## ವೇಳಾಪಟ್ಟಿ ಪ್ರಕಟ

ಎಸ್ ಎಸ್ ಎಲ್ ಸಿ ಪೂರ್ವಸಿದ್ಧತಾ ಪರೀಕ್ಷೆಯ ವೇಳಾಪಟ್ಟಿಯನ್ನು ಮಂಡಳಿಯ ಜಾಲತಾಣ ತಿತಿತಿ.ಇಜಚಿಥ.ಇಚಿಡಿಟಿಚಿಣಚಿಞಚಿ. ರಿಠತ.ಟಿ ಇಲ್ಲಿ ಪಡೆದುಕೊಂಡು, ತಮ್ಮ ಶಾಲಾ ಸೂಚನಾ ಫಲಕದಲ್ಲಿ ಪ್ರಕಟಿಸುವಂತೆ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ಸೂಚಿಸಿದೆ. ಫೆಬ್ರವರಿ 25 ರಂದು ಪ್ರಥಮ ಭಾಷೆ ಕನ್ನಡ, ಫೆ. 27 ರಂದು ಗಣಿತ, ಫೆಬ್ರವರಿ 28 ರಂದು ದ್ವಿತೀಯ ಭಾಷೆ (ಇಂಗ್ಲಿಷ್, ಕನ್ನಡ), ಮಾರ್ಚ್ 1 ರಂದು ಹಿಂದಿ ಅಥವಾ ತೃತೀಯ ಭಾಷೆ, ಮಾರ್ಚ್ 3ರಂದು ವಿಜ್ಞಾನ, ಮಾರ್ಚ್ 4 ರಂದು ಸಮಾಜ ವಿಜ್ಞಾನ ಪರೀಕ್ಷೆ ಇರಲಿದೆ. ಮೊದಲ 3 ಪರೀಕ್ಷೆ ಬೆಳಗ್ಗೆ 10ರಿಂದ ಮಧ್ಯಾಹ್ನ 1.15ರ ವರೆಗೆ ನಡೆಯಲಿವೆ. ಅನಂತರದ 3 ಪರೀಕ್ಷೆಗಳು ಮಧ್ಯಾಹ್ನ 2 ಗಂಟೆಯಿಂದ ಸಂಜೆ 5 ಅಥವಾ 5.15ರ ವರೆಗೆ ನಡೆಯಲಿವೆ ಎಂದು ಎಂದು ಮಂಡಳಿ ಅಧ್ಯಕ್ಷರು ತಿಳಿಸಿದ್ದಾರೆ.

## ಮುಲಾಜಿಲ್ಲದೆ ಕ್ರಮ

ಶಾಸಕ ಸಂಗಮೇಶ್ ಪುತ್ರನಿಂದ ಮಹಿಳಾ ಅಧಿಕಾರಿ ಬೆದರಿಕೆ ಆರೋಪ ಕುರಿತು ಪ್ರತಿಕ್ರಿಯಿಸಿದ ಡಾ.ಜಿ.ಪರಮೇಶ್ವರ್, ಬಸವೇಶ್ ಪಾತ್ರವಿದ್ದರೇ ಪೊಲೀಸರು ಎಫ್ ಐಆರ್ ದಾಖಲಿಸಲಿದ್ದಾರೆ. ತುರ್ತು ವರದಿ ನೀಡಲು ಡಿವೈಎಸ್ಪಿಗೆ ಸೂಚನೆ ನೀಡಿದ್ದೇನೆ ಎಂದರು.

## ಕೋವಿಡ್ ಅಕ್ರಮ: ಕೋರ್ಟ್‌ಗೆ ವರದಿ

ಈ ಎರಡು ಕಂಪನಿಗಳು ಆರೋಗ್ಯ ಇಲಾಖೆಗೆ ಪಿಪಿಇ ಕಿಟ್‌ಗಳನ್ನು ಪೂರೈಸಿವೆ. ಆದರೆ, ಪ್ರತಿ ಪಿಪಿಇ ಕಿಟ್‌ಗೆ 400 ರೂ. ಮೂಲ ಬೆಲೆ ಇದ್ದರೆ, 1,312 ರೂ.ಗೆ ಪೂರೈಸಿದ್ದಾರೆ. ಈ ಸಂಬಂಧ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ತನಿಖೆ ನಡೆಸಿದ್ದು, ಅಕ್ರಮ ಪತ್ತೆ ಮಾಡಿದ್ದಾರೆ " ಎಂದರು. ಈ ನಡುವೆ, ಕೋವಿಡ್ ಹಗರಣದ ತನಿಖೆಗೆ ರಧಿಚಿಧಿಸಧಿಲಾಧಿಗಿದ್ದ ನಿವೃತ್ತ ನ್ಯಾಯಮೂರ್ತಿ ಜಾನ್ ಮೈಕೆಲ್ ಕುನ್ಹಾ ನೇತೃತ್ವದ ಆಯೋಗ ಪ್ರುಧಿಡೆಂಟ್ ಮ್ಯಾನೇಜ್‌ಮೆಂಟ್ ಸೊಲ್ಯೂಷನ್ ಹಾಗೂ ಲಾಜ್ ಎಕ್ಸ್‌ಪೋರ್ಟ್ ಲಿಮಿಟೆಡ್ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಸಧಿಲ್ಲಿಧಿಸಿಧಿದ್ದ ವರದಿಯನ್ನು ಸಧಿರಧಿಕಾರ ಮುಚ್ಚಿದ ಲಕೋಟೆಯಲ್ಲಿನ್ಯಾಯಾಲಯಕ್ಕೆ ಸಲ್ಲಿಸಿತು. ವರದಿಯ ಲಕೋಟೆಯನ್ನು ತೆರೆದ ನ್ಯಾಯಪೀಠ, ಆ ವರದಿಯ ಪ್ರತಿಯನ್ನು ಖಾಸಗಿ ಸಂಸ್ಥೆಗಳ ಪರ ವಕೀಲರಿಗೆ ನೀಡುವಂತೆ ಹೆಚ್ಚುವರಿ ಅಡ್ವೊಕೇಟ್ ಜನರಲ್‌ಗೆ ಸೂಚಿಸಿತು. ಅಲ್ಲದೆ, ವರದಿಗೆ ಪ್ರತಿಕ್ರಿಯೆ ಸಲ್ಲಿಸುವಂತೆ ಖಾಸಗಿ ಸಂಸ್ಥೆಗಳ ಪರ ವಕೀಲರಿಗೆ ಸೂಚಿಸಿ ವಿಚಾರಣೆಯನ್ನು ಮಾ.3ಕ್ಕೆ ಮುಂದೂಡಿತು.

ಕೋವಿಡ್ ಸಂದರ್ಭದಲ್ಲಿಪಿಪಿಇ ಕಿಟ್‌ಗಳನ್ನು ಪೂರೈಸಿದ ಬಿಲ್ ಮೊತ್ತ ಪಾವತಿಸಲು ಸರ್ಕಾರಕ್ಕೆ ನಿರ್ದೇಶನ ನೀಡುವಂತೆ ಕೋರಿ ಖಾಸಗಿ ಕಂಪನಿಗಳು ಹೈಕೋರ್ಟ್ ಮೆಟ್ಟಿಲೇರಿದ್ದವು. ಆರು ವಾರಗಳಲ್ಲಿಬಾಕಿ ಬಿಲ್ ಮೊತ್ತ 38.26 ಕೋಟಿ ರೂ. ಪಾವತಿಸುವಂತೆ ಏಕಸದಸ್ಯ ಪೀಠ 2024ರ ಏ.10ಕ್ಕೆ ಆದೇಶ ನೀಡಿತ್ತು. ಅದನ್ನು ಪ್ರಶ್ನಿಸಿ ರಾಜ್ಯ ಸರ್ಕಾರ ಮೇಲ್ಮನವಿ ಸಲ್ಲಿಸಿದೆ.

# ಉದಯಗಿರಿ ಕಲ್ಲು ತೂರಾಟ: ಮೌಲ್ವಿ, 70 ಮಂದಿಗೆ ಶೋಧ

**ಮೈಸೂರು:** ಸಾಮಾಜಿಕ ಜಾಲತಾಣದಲ್ಲಿ ಮುಸ್ಲಿಂ ಸಮುದಾಯದ ಬಗ್ಗೆ ಅವಹೇಳನಕಾರಿ ಪೋಸ್ಟ್ ಹಾಕಿದ್ದ ಸಂಬಂಧ ಉದ್ವಿಗ್ನಗೊಂಡಿದ್ದ ಉದಯಗಿರಿ ಬಡಾವಣೆಯಲ್ಲಿ ಪರಿಸ್ಥಿತಿ ಬೂದಿ ಮುಚ್ಚಿದ ಕೆಂಡದಂತಿದ್ದು, ಬಿಗಿ ಪೊಲೀಸ್ ಬಂದೋಬಸ್ತ್ ಮುಂದುವರೆಸಲಾಗಿದೆ.

ಉದಯಗಿರಿ ಪೊಲೀಸ್ ಠಾಣೆಯ ಸುತ್ತಮುತ್ತ ಇರುವ ಸಿಸಿಟಿವಿ ದೃಶ್ಯಾವಳಿಗಳನ್ನು ವಶಕ್ಕೆ ಪಡೆದುಕೊಂಡು ಪರಿಶೀಲಿಸಿರುವ ಪೊಲೀಸರು, 70ಕ್ಕೂ ಹೆಚ್ಚು ಕಿಡಿಗೇಡಿಗಳ ಬಂಧನಕ್ಕೆ ಬಲೆ ಬೀಸಿದ್ದಾರೆ. ಘಟನಾ ಸ್ಥಳದಲ್ಲಿ ಆರಕ್ಕೂ ಹೆಚ್ಚು ಕೆಎಸ್‌ಆರ್‌ಪಿ ತುಕಡಿಗಳು ಹಾಗೂ ಎಂಟಕ್ಕೂ ಹೆಚ್ಚು ಪೊಲೀಸ್ ಇನ್ಸ್‌ಪೆಕ್ಟರ್ ಭದ್ರತಾ ಕರ್ತವ್ಯಕ್ಕೆ ನಿಯೋಜನೆಗೊಂಡಿದ್ದಾರೆ.

ಈ ನಡುವೆ ಮುಷ್ತಾಕ್ ಮಕ್ಬೋಲಿ ಎಂಬಾತ ಸೋಷಿಯಲ್ ಮೀಡಿಯಾದಲ್ಲಿ ನಿರಂತರವಾಗಿ ಪ್ರಚೋದನಕಾರಿ ವಿಡಿಯೋ ಹಂಚಿದ್ದು, ಇದು ಉದಯಗಿರಿ ಠಾಣಾ ವ್ಯಾಪ್ತಿಯಲ್ಲಿ ಮತ್ತಷ್ಟು ಗೊಂದಲ ಸೃಷ್ಟಿಮಾಡುತ್ತಿದೆ.

ಹೀಗಾಗಿ ಪೊಲೀಸರು ಅಲರ್ಟ್ ಆಗಿದ್ದು, ಮಕ್ಬೋಲಿ ಬಂಧನಕ್ಕೆ ಬಲೆ ಬೀಸಿದ್ದಾರೆ. ಮುಸ್ಲಿಮರನ್ನು ಗುರಿ ಮಾಡಲಾಗುತ್ತಿದೆ. ಎಲ್ಲರೂ ಒಗ್ಗಟ್ಟಾಗಿ ನಿಲ್ಲಿ. ಸುರೇಶ್ ಹೆಸರಿನ ಹರಾಮಿ ನನ್ನ ಮಾಲೀಕನ ಬಗ್ಗೆ ಕೆಟ್ಟದಾಗಿ ಪೋಸ್ಟ್ ಮಾಡಿದ್ದಾನೆ. ಆತನನ್ನು ಕೂಡಲೇ ಬಂಧಿಸಿ. ಆತನನ್ನು ನೇಣಿಗೆ ಹಾಕಬೇಕು, ಮರಣದಂಡನೆ ವಿಧಿಸಬೇಕು' ಎಂದು ವಿಡಿಯೋದಲ್ಲಿ ಹೇಳಲಾಗಿದೆ. ಗಲಭೆಗೂ ಮುನ್ನ ಈ ವಿಡಿಯೋ ಹರಿಬಿಡಲಾಗಿದೆ ಎನ್ನಲಾಗುತ್ತಿದೆ.

ಪ್ರತಿಭಟನಾ ನಿರತರನ್ನು ಚದುರಿಸಿದ ಬಳಿಕ ಪರಿಸ್ಥಿತಿ ಸಹಜವಾಗುತ್ತಿದ್ದಂತೆ ಠಾಣೆ ಆವರಣ ಸೇರಿದಂತೆ ಸುತ್ತಲಿನ ರಸ್ತೆಗಳಲ್ಲಿ ಪರಿಶೀಲನೆ ನಡೆಸಿದ ಪೊಲೀಸರು, ಕಲ್ಲು ತೂರಾಟದ ವೇಳೆ ಬಿದ್ದ ರಾಶಿ ಗಟ್ಟಲೆ ಕಲ್ಲುಗಳನ್ನು ಚೀಲದಲ್ಲಿ ಸಂಗ್ರಹಿಸಿದರು. ಪೊಲೀಸ್ ವಾಹನಗಳ ಮೇಲೂ ಬಿದ್ದ ಕಲ್ಲುಗಳನ್ನು ಮಹಜರು ನಡೆಸಿ ವಶಪಡಿಸಿಕೊಂಡರು.



**ಪ್ರಕರಣ ಸಿಸಿಬಿಗೆ:** ಮುಸ್ಲಿಂ ಸಮುದಾಯದ ಬಗ್ಗೆ ಅವಹೇಳನಕಾರಿಯಾಗಿ ಪೋಸ್ಟ್ ಮಾಡಿದ ಸಂಬಂಧ ದಾಖಲಾದ ಪ್ರಕರಣ ಮತ್ತು ಠಾಣೆ ಎದುರು ನಡೆದ ಪ್ರತಿಭಟನೆ ವೇಳೆ ಕಲ್ಲು ತೂರಾಟ ನಡೆಸಿದ ಘಟನೆ ಸಂಬಂಧ ಉದಯಗಿರಿ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಪ್ರಕರಣದ ತನಿಖೆಯನ್ನು ಮೈಸೂರು ನಗರ ಪೊಲೀಸ್ ಆಯುಕ್ತರು ಸಿಸಿಬಿಗೆ ವಹಿಸಿದ್ದಾರೆ. ಘಟನೆ ಸಂಬಂಧ ಫೆ.10 ರಾತ್ರಿ ಮತ್ತು ಮರುದಿನ ಬೆಳಗ್ಗೆ ದಾಖಲಾದ ಪ್ರಕರಣದ ತೀವ್ರ ತನಿಖೆಗಾಗಿ ಸಿಸಿಬಿಗೆ ವಹಿಸಲಾಗಿದೆ.

ಪ್ರಕರಣದ ಹಿನ್ನಲೆದೆಹಲಿ ಚುನಾವಣೆಗೆ ಸಂಬಂಧಿಸಿದಂತೆ ಸಾಮಾಜಿಕ ಜಾಲತಾಣದಲ್ಲಿ ಅವಹೇಳನಕಾರಿ ಪೋಸ್ಟ್ ಹಾಕಿದ್ದ ವಿಚಾರ ವೈರಲ್ ಆಗುತ್ತಿದ್ದಂತೆ ಉದಯಗಿರಿ ಠಾಣೆ ಪೊಲೀಸರು ಪ್ರಕರಣ ದಾಖಲಿಸಿ, ಆತನನ್ನು ಬಂಧಿಸಿದ್ದರು. ಆದರೆ, ಆತನಿಗೆ ನ್ಯಾಯಾಲಯದಲ್ಲಿ ಜಾಮೀನು ಬೇಗನೆ ದೊರೆಯಲಿದ್ದು, ಪೊಲೀಸರೇ ಸಹಕಾರ ನೀಡಲಿದ್ದಾರೆ ಎನ್ನುವ ವದಂತಿಯಿಂದ ಸಾವಿರಾರು ಜನರು ಸೋಮವಾರ ರಾತ್ರಿ ಉದಯಗಿರಿ ಠಾಣೆಯ ಎದುರು ಜಮಾಯಿಸಿ ಪ್ರತಿಭಟನೆ ನಡೆಸಿದ್ದರು.

ಪೊಲೀಸ್ ಅಧಿಕಾರಿಗಳು ಮಾಡಿದ ಮನವಿಗೆ ಕ್ಯಾರೆ ಎನ್ನದಿದ್ದಾಗ ಲಘು ಲಾಠಿ ಪ್ರಹಾರ ನಡೆಸಿ ಚದುರಿಸಿದ್ದರು. ಈ ವೇಳೆ ದುಷ್ಕರ್ಮಿಗಳು ಏಕಾಏಕಿ ಕಲ್ಲು ತೂರಾಟ ನಡೆಸಿದ್ದರಿಂದ ಪರಿಸ್ಥಿತಿ ಉದ್ವಿಗ್ನಗೊಂಡಿತ್ತು.

# ಭಾರತೀಯ ಸೇನೆಯ ಅವಹೇಳನ ಆರೋಪ ರಾಹುಲ್ ಗಾಂಧಿಗೆ ಲಕ್ನೋ ಕೋರ್ಟ್ ಸಮನ್ಸ್

**ನವದೆಹಲಿ:** 2022ರಲ್ಲಿ ನಡೆದಿದ್ದ ಭಾರತ್ ಜೋಡೋ ಯಾತ್ರೆಯ ಸಂದರ್ಭದಲ್ಲಿ ಭಾರತೀಯ ಸೇನೆಯನ್ನು ಅವಹೇಳನ ಮಾಡಿದ ಆರೋಪಕ್ಕೆ ಸಂಬಂಧಿಸಿದಂತೆ ಲೋಕಸಭೆಯ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಅವರಿಗೆ ಲಕ್ನೋ ನ್ಯಾಯಾಲಯ ಸಮನ್ಸ್ ಜಾರಿ ಮಾಡಿದೆ.

ಮಾರ್ಚ್ 24 ರಂದು ವಿಚಾರಣೆಗೆ ಹಾಜರಾಗುವಂತೆ ರಾಹುಲ್ (ಖಚ್ಟಿಣಟ ಉಚಿಟಿಜಞು) ಅವರಿಗೆ ಎಸಿಜೆಎಂ ನ್ಯಾಯಾಲಯದ ನ್ಯಾಯಾಧೀಶ ಅಲೋಕ್ ವರ್ಮಾ ನಿರ್ದೇಶನ ನೀಡಿದ್ದಾರೆ. ಸೇನಾ ಕರ್ನಲ್ ಹುದ್ದೆಗೆ ಸಮನಾದ ಹುದ್ದೆ ಹೊಂದಿದ್ದ ಬಾರ್ಡರ್ ರೋಡ್ ಆರ್ಗನೈಸೇಷನ್ ಮಾಜಿ ನಿರ್ದೇಶಕ ಉದಯ್ ಶಂಕರ್ ಶ್ರೀವಾಸ್ತವ ಎಂಬುವರ ಪರವಾಗಿ ವಕೀಲ ವಿವೇಕ್ ತಿವಾರಿ ಅವರು ದೂರು ದಾಖಲಿಸಿದ್ದಾರೆ.

ಭಾರತ– ಚೀನಾ ಸೇನೆಗಳ ನಡುವಿನ ಘರ್ಷಣೆಯ ಕುರಿತು ಡಿಸೆಂಬರ್ 16, 2022 ರಂದು ರಾಹುಲ್ ಡಿಸೆಂಬರ್ 9, 2022ರಂದು ನೀಡಿದ ಹೇಳಿಕೆಗಳು ಭಾರತೀಯ ಸೇನೆಯನ್ನು ಅವಹೇಳನ ಮಾಡುವಂತಿದ್ದು, ಮಾನಹಾನಿಕರವಾಗಿವೆ ಎಂದು ತಿವಾರಿ ಆರೋಪಿಸಿದ್ದಾರೆ.



ಅರುಣಾಚಲ ಪ್ರದೇಶದಲ್ಲಿ ಚೀನಾದ ಸೈನಿಕರು ಭಾರತೀಯ ಸೇನಾ ಸಿಬ್ಬಂದಿಯನ್ನು ಥಳಿಸುತ್ತಿದ್ದಾರೆ ಎಂಬ ರಾಹುಲ್ ಅವರ ಹೇಳಿಕೆಯು ವ್ಯಾಪಕ ಚರ್ಚೆ ಮತ್ತು ರಾಜಕೀಯ ವಿವಾದಕ್ಕೆ ಕಾರಣವಾಗಿತ್ತು ಎಂದು ಅರ್ಜಿಯಲ್ಲಿ ತಿಳಿಸಲಾಗಿದೆ.

ವಾಸ್ತವಿಕ ನಿಯಂತ್ರಣ ರೇಖೆಯಲ್ಲಿ ಚೀನಾ ನಡೆಸಿದ್ದ ಕೃತ್ಯಗಳನ್ನು ಮುಂದೆ ಮಾಡಿ ಕೇಂದ್ರ ಸರ್ಕಾರವನ್ನು ರಾಹುಲ್ ಟೀಕಿಸಿದ್ದರು.

ಕೇಂದ್ರ ಗೃಹ ಸಚಿವ ಮತ್ತು ಬಿಜೆಪಿ ಮಾಜಿ ಅಧ್ಯಕ್ಷ ಅಮಿತ್ ಶಾ ಅವರನ್ನು ಕೊಲೆ ಆರೋಪಿ ಎಂದು ಕರೆದಿದ್ದಕ್ಕಾಗಿ ರಾಹುಲ್ ಗಾಂಧಿ ವಿರುದ್ಧ ದಾಖಲಾಗಿದ್ದ ಕ್ರಿಮಿನಲ್ ಮಾನನಷ್ಟ ಮೊಕದ್ದಮೆಯನ್ನು ಜನವರಿಯಲ್ಲಿ ಸುಪ್ರೀಂ ಕೋರ್ಟ್ ತಡೆಹಿಡಿದಿದ್ದನ್ನು ಇಲ್ಲಿ ನೆನೆಯಬಹುದು.

ಜಾರ್ಖಂಡ್‌ನಲ್ಲಿ ನಡೆದಿದ್ದ ಸಭೆಯೊಂದರಲ್ಲಿ ಮಾರ್ಚ್ 18, 2018ರಂದು ಬಿಜೆಪಿಯನ್ನು ಟೀಕಿಸುವ ಭಾಷಣವನ್ನು ಗಾಂಧಿ ಮಾಡಿದ್ದಾರೆ ಎಂದು ಬಿಜೆಪಿ ಮುಖಂಡನ ನವೀನ್ ಝಾ ದೂರು ದಾಖಲಿಸಿದ್ದರು. ಭಾಷಣದ ವೇಳೆ ಅಂದಿನ ಗೃಹ ಸಚಿವ ಅಮಿತ್ ಶಾ ಅವರು ಕೊಲೆ ಆರೋಪಿ ರಾಹುಲ್ ಹೇಳಿದ್ದರು ಎಂಬುದಾಗಿ ದೂರಿನಲ್ಲಿ ತಿಳಿಸಲಾಗಿತ್ತು.

# ಬಿಜೆಪಿ ಅಕ್ರಮಗಳ ವಿರುದ್ಧ ಅಣ್ಣಾ ಹಜಾರೆ ಧ್ವನಿ ಎತ್ತುತ್ತಿಲ್ಲ

**ಪುಣೆ:** ಹಿರಿಯ ಸಾಮಾಜಿಕ ಕಾರ್ಯಕರ್ತ ಅಣ್ಣಾ ಹಜಾರೆ ಅವರು 2014ರ ನಂತರ ಬಿಜೆಪಿ ನೇತತ್ವದ ಸರ್ಕಾರಗಳ ಅಕ್ರಮಗಳ ವಿರುದ್ಧ ಧ್ವನಿ ಎತ್ತಲಿಲ್ಲ ಎಂದು ಶಿವಸೇನೆ (ಯುಬಿಟಿ) ಸಂಸದ ಸಂಜಯ್ ರಾವುತ್ ಆರೋಪಿಸಿದ್ದಾರೆ.

ಅರವಿಂದ್ ಕೇಜ್ರಿವಾಲ್ ಮತ್ತು ಮನೀಶ್ ಸಿಸೋಡಿಯಾ ಮತ್ತಿತರರು ಅಣ್ಣಾ (ಹಜಾರೆ) ಅವರನ್ನು ಮಹಾತರನ್ನಾಗಿ ಮಾಡಿದರು. ಅವರಿಲ್ಲದಿದ್ದರೆ, ಅಣ್ಣಾ ದೆಹಲಿಯನ್ನು ನೋಡಲಾಗಲಿಲ್ಲ ಅಥವಾ ರಾಮ್ ಲೀಲಾ ಮತ್ತು ಜಂತರ್ ಮಂತರ್ (ಭ್ರಷ್ಟಾಚಾರದ ವಿರುದ್ಧ ಪ್ರತಿಭಟಿಸಲು) ಭೇಟಿ ನೀಡಲು ಸಾಧ್ಯವಿರಲಿಲ್ಲ ಎಂದು ಮುಂಬೈನಲ್ಲಿ ಸುದ್ದಿಗಾರರೊಂದಿಗೆ ಮಾತನಾಡುತ್ತಾ ರಾವತ್ ಹೇಳಿದ್ದಾರೆ.

2014ರ ನಂತರ ಬಿಜೆಪಿ ಆಡಳಿತದಲ್ಲಿರುವ ಕೇಂದ್ರ ಮತ್ತು ಮಹಾರಾಷ್ಟ್ರದಲ್ಲಿ ಅಕ್ರಮಗಳ ಸ್ಫೋಟ ಸಂಭವಿಸಿದೆ, ಆದರೆ ಅಣ್ಣಾ ಒಂದೇ ಒಂದು ಮಾತನ್ನೂ ಆಡಲಿಲ್ಲ ಎಂದು ರಾಜ್ಯಸಭಾ ಸದಸ್ಯ ಹೇಳಿದರು. ಟೀಕೆಗೆ ಪ್ರತಿಕ್ರಿಯಿಸಿದ ಹಜಾರೆ, ನಿರ್ದಿಷ್ಟ ಕನ್ನಡಕವನ್ನು ಧರಿಸಿದ ವ್ಯಕ್ತಿಯು ಜಗತ್ತನ್ನು ಅದಕ್ಕೆ ತಕ್ಕಂತೆ ನೋಡುತ್ತಾನೆ ಎಂದು ಹೇಳಿದರು.

# ಹಂತಕ ಬಾಗಪ ಹತ್ಯೆ

**ವಿಜಯಪುರ:** ಭೀಮಾತೀರದಲ್ಲಿ ಮತ್ತೆ ನೆತ್ತರು ಹರಿದಿದೆ. ನಟೋರಿಯಸ್ ಹಂತಕ ಬಾಗಪ್ಪನ ಬರ್ಬರವಾಗಿ ಹತ್ಯೆಯಾಗಿದೆ. ಕೊಡಲಿಯಿಂದ ಬಾಗಪ್ಪನ ಮೇಲೆ ದುಷ್ಕರ್ಮಿಗಳು ಅಟ್ಯಾಕ್ ಮಾಡಿ ಹತ್ಯೆ ಮಾಡಿದ್ದಾರೆ.

ಗುಂಡು ಸದ್ದು ಕೂಡ ಸ್ಥಳೀಯರಿಗೆ ಕೇಳಿಸಿದೆ ಎನ್ನಲಾಗಿದೆ. ಸದ್ಯ ಸ್ಥಳಕ್ಕೆ ಗಾಂಧಿಚೌಕ್ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ನಗರದ ಮದೀನಾ ನಗರದಲ್ಲಿ ಬಾಡಿಗೆಗೆ ಬಾಗಪ್ಪ ವಾಸವಿದ್ದ. ರಾತ್ರಿ 9:30 ರ ಸುಮಾರಿಗೆ ಆಟೋದಲ್ಲಿ ನಾಲ್ಕೈದು ದುಷ್ಕರ್ಮಿಗಳಿಂದ ಕೃತ್ಯ ನಡೆದಿದೆ ಎನ್ನಲಾಗಿದೆ. ಊಟ ಮಾಡಿ ಮನೆ ಎದುರು ಬಾಗಪ್ಪ ವಾಕಿಂಗ್ ಮಾಡ್ತಿದ್ದ ವೇಳೆ ಹತ್ಯೆಯಾಗಿದೆ. ಊಟ ಮಾಡಿಕೊಂಡು ಮನೆ ಎದುರು ಅಡ್ಡಾಡುತ್ತಿದ್ದ ವೇಳೆ ಮಾರಕಾಸ್ತ್ರ ಹಾಗೂ ಬಂದೂಕಿನಿಂದ ಗುಂಡು ಹಾರಿಸಿ ಹತ್ಯೆ ಮಾಡಿದ್ದಾರೆ.

ಎಷ್ಟು ಜನರು ಬಂದಿದ್ದರು ಎಂಬ ಬಗ್ಗೆ ನಿಖರ ಮಾಹಿತಿ ಇಲ್ಲ. ಮನೆಯವರು ನೀಡಿದ ಮಾಹಿತಿ ಆಧರಿಸಿ ಹೇಳ್ತಿದ್ದೇನೆ. ಕರೆಂಟ್ ಕಟ್ ಮಾಡಿ ಹತ್ಯೆ ಮಾಡಿದ್ದ ಬಗ್ಗೆ ಮಾಹಿತಿ ಇಲ್ಲ. ಸಂಬಂಧಿಕರ ಬಗ್ಗೆ ಸಂಪೂರ್ಣ ಮಾಹಿತಿ ಇಲ್ಲ ಎಂದು ಎಸ್ಪಿ ಲಕ್ಷ್ಮಣ ನಿಂಬರಗಿ ಸ್ಪಷ್ಟಪಡಿಸಿದ್ದಾರೆ.ಬಾಗಪ್ಪ ಮೇಲೆ 10 ಕೇಸ್‌ಗಳಿವೆ. ಈ ಪೈಕಿ 6 ಮರ್ಡರ್ ಕೇಸ್ ಇವೆ. 1993 ರಿಂದ ಬಾಗಪ್ಪನ ಕ್ರಿಮಿನಲ್ ಹಿಸ್ಟರಿ ಶುರುವಾಗಿದೆ. 2016–17ರಲ್ಲಿ ಬಾಗಪ್ಪನ ಮೇಲೆ ಸೆಕ್ಯೂರಿಟಿ ಕೇಸ್ ಹಾಕಲಾಗಿತ್ತು. ಸದ್ಯ ಎಲ್ಲ ಆಯಾಮಗಳಲ್ಲಿ ಕಾರ್ಯಾಚರಣೆ ನಡೆಯುತ್ತಿದೆ. ಜಿಲ್ಲಾ ಪೊಲೀಸ್ ಟೀಂ ತಂಡವಾಗಿ ಕೆಲಸ ಮಾಡ್ತಿದೆ ಎಂದು ತಿಳಿಸಿದ್ದಾರೆ.

# 173 ಕೋಟಿ ಮೌಲ್ಯದ ಡ್ರಗ್ಸ್ ಸೀಜ್

**ಐಜ್ವಾಲ್:** ಮಿಜೋರಾಂನ ಚಂಫೈ ಜಿಲ್ಲೆಯ ಭಾರತ–ಮ್ಯಾನಾರ್ ಗಡಿಯಲ್ಲಿ 173.73 ಕೋಟಿ ರೂಪಾಯಿ ಮೌಲ್ಯದ ಮೆಥಾಂಫೆಟಮೈನ್ ಮಾತ್ರೆಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಅಸ್ಸಾಂ ರೈಫಲ್ಸ್ ಹೇಳಿಕೆಯಲ್ಲಿ ತಿಳಿಸಿದೆ. ಬಂದ ಖಚಿತ ಸುಳಿವಿನ ಮೇರೆಗೆ ಅಸ್ಸಾಂ ರೈಫಲ್ಸ್ ಮತ್ತು ಮಿಜೋರಾಂ ಪೊಲೀಸರು ಜಂಟಿಯಾಗಿ ಫೆಬ್ರವರಿ 9 ರಂದು ಝೋಖಾವ್ತಾರ್‌ನ ಗಡಿ ದಾಟುವ ಸ್ಥಳದಲ್ಲಿ ಕೋಟ್ಯಂತರ ಮೌಲ್ಯದ ಡ್ರಗ್ಸ್ ವಶಪಡಿಸಿಕೊಂಡರು ಎಂದು ಅದು ಹೇಳಿದೆ. ಜಂಟಿ ತಂಡವು ಅಕ್ರಮ ಸಾಗಣೆಯನ್ನು ಸಾಗಿಸುತ್ತಿರುವ ಶಂಕಿತ ವ್ಯಕ್ತಿಗಳನ್ನು ಗುರುತಿಸಿ ಅವರನ್ನು ತಡೆದಿದೆ ಎಂದು ಹೇಳಿಕೆಯಲ್ಲಿ ಮಾಹಿತಿ ನೀಡಲಾಗಿದೆ.ದಾಳಿ ವೇಳೆ ಡ್ರಗ್ಸ್ ಸಾಗಿಸುತ್ತಿದ್ದವರು ಸರಕುಗಳನ್ನು ಸ್ಥಳದಲ್ಲೇ ಬಿಟ್ಟು ಓಡಿಹೋದರು ಎನ್ನಲಾಗಿದೆ. 173.73 ಮೌಲ್ಯದ ಸರಕುಗಳನ್ನು ಹೆಚ್ಚಿನ ತನಿಖೆ ಮತ್ತು ಕಾನೂನು ಪ್ರಕ್ರಿಯೆಗಳಿಗಾಗಿ ಪೊಲೀಸರು ವಶಪಡಿಸಿಕೊಂಡಿದ್ದಾರೆ ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ.

# ಆರ್ಟ್ ಆಫ್ ಲಿವಿಂಗ್‌ನ ಅಂತಾರಾಷ್ಟ್ರೀಯ ಮಹಿಳಾ ಸಮಾವೇಶದಲ್ಲಿ ರಾಷ್ಟ್ರಪತಿ ಮುರ್ಮು

**ಬೆಂಗಳೂರು:** ಆರ್ಟ್ ಆಫ್ ಲಿವಿಂಗ್‌ನ 10ನೇ ಅಂತಾರಾಷ್ಟ್ರೀಯ ಮಹಿಳಾ ಸಮಾವೇಶದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮುರವರ ಉಪಸ್ಥಿತಿಯೊಂದಿಗೆ ಇನ್ನೂ ವಿವಿಧ ಕ್ಷೇತ್ರಗಳಾದ ರಾಜಕೀಯ, ವಾಣಿಜ್ಯ, ಕಲೆ ಮತ್ತು ಸಾಮಾಜಿಕ ಕ್ಷೇತ್ರಗಳ ಪ್ರಮುಖ ಮಹಿಳೆಯರು ಭಾಗವಹಿಸಲಿದ್ದಾರೆ. ಆರ್ಟ್ ಆಫ್ ಲಿವಿಂಗ್ ಆಯೋಜಿಸಿರುವ ಈ ಐತಿಹಾಸಿಕ ಸಮಾವೇಶದಲ್ಲಿ 60ಕ್ಕೂ ಹೆಚ್ಚು ವಕ್ತಾರರು ಹಾಗೂ 500ಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗಿಯಾಗಲಿದ್ದಾರೆ.

ಸುಮಾರು ಎರಡು ದಶಕಗಳಿಂದ ನಡೆದು ಬಂದಿರುವ ಈ ವೇದಿಕೆಯಲ್ಲಿ ಸುಮಾರು 115 ದೇಶಗಳಿಂದ 463 ವಕ್ತಾರರು ಹಾಗೂ 6,000ಕ್ಕೂ ಹೆಚ್ಚು ಪ್ರತಿನಿಧಿಗಳು ಸೇರಿದ್ದಾರೆ. ಈ ವರ್ಷ, ರಾಷ್ಟ್ರಪತಿಯವರ ಜೊತೆಗೆ ಕರ್ನಾಟಕದ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್, ಕೇಂದ್ರ ಸಚಿವೆ ಅನ್ನಪೂರ್ಣಾ ದೇವಿ, ಸಂಸದರಾದ ಶೋಭಾ ಕರಂದ್ಲಾಜೆ, ಮಾಜಿ ವಿದೇಶಾಂಗ ಮತ್ತು ಸಂಸ್ಕೃತಿ ಸಚಿವೆ ಮೀನಾಕ್ಷಿ ಲೇಖಿ, ಕಾರ್ಮಿಕ ಮತ್ತು ಸಣ್ಣ–ಮಧ್ಯಮ ಉದ್ಯಮಗಳ ರಾಜ್ಯ ಸಚಿವರಾದ ಶೋಭಾ ಕರಂದ್ಲಾಜೆ, ಕಾಮನ್ವೆಲ್ತ್ ಸಚಿವರಾದ ಪ್ಯಾಟ್ರಿಸಿಯಾ ಸ್ಕಾಟ್‌ಲ್ಯಾಂಡ್, ಜಪಾನ್‌ನ ಮಾಜಿ ಪ್ರಧಾನಿಯವರ ಪತ್ನಿಯಾದ ಅಕಿ ಅಬೆ, ಚಲನಚಿತ್ರ ನಿರ್ದೇಶಕಿ ಅಶ್ವಿನಿ ಅಯ್ಯರ್ ತಿವಾರಿ, ಹಿರಿಯ ನಟಿಯರಾದ ಹೇಮಾ ಮಾಲಿನಿ ಮತ್ತು ಶರ್ಮಿಳಾ ಟಾಗೋರ್, ಬಾಲಿವುಡ್ ನಟಿಯರಾದ ಸಾರಾ ಅಲಿ ಖಾನ್ ಮತ್ತು ಸೊನಾಕ್ಷಿ ಸಿನ್ಹಾ, ಮತ್ತು ಉದ್ಯಮದ ನಾಯಕರಾದ ರಾಧಿಕಾ ಗುಪ್ತಾ ಮತ್ತು ಕನಿಕಾ ಟೆಕ್ರೀವಾಲ್ ಉಪಸ್ಥಿತರಿರುತ್ತಾರೆ.

ಅಂತಾರಾಷ್ಟ್ರೀಯ ಮಹಿಳಾ ಸಮಾವೇಶದ ಅಧ್ಯಕ್ಷತೆ ವಹಿಸಿರುವವರು ಭಾನುಮತಿ ನರಸಿಂಹನ್, ಅವರು ಗುರುದೇವ ಶ್ರೀ ಶ್ರೀ ರವಿಶಂಕರ್ ಅವರ ಸಹೋದರಿಯಾಗಿ ಆರ್ಟ್ ಆಫ್ ಲಿವಿಂಗ್ ಅಡಿಯಲ್ಲಿ ಮಹಿಳಾ ಕಲ್ಯಾಣ ಮತ್ತು ಮಕ್ಕಳ ಕಲ್ಯಾಣ ಕಾರ್ಯಕ್ರಮಗಳನ್ನು ಮುನ್ನಡೆಸುತ್ತಿದ್ದಾರೆ. ಶಾಂತಿಯುತ, ಹಿಂಸಾಮುಕ್ತ ಜಗತ್ತನ್ನು ರೂಪಿಸುವ ಗುರುದೇವರ ಕನಸನ್ನು ಧ್ಯೇಯವಾಗಿಸಿಕೊಂಡಿರುವ ಅವರು, ಶಿಕ್ಷಣ, ಪರಿಸರ ಸುಸ್ಥಿರತೆ, ಮತ್ತು ಮಹಿಳಾ ಸಬಲೀಕರಣದ ಮೂಲಕ ಸಾಮಾಜಿಕ ಪರಿವರ್ತನೆಗೆ ಕಳೆದ ನಾಲ್ಕು ದಶಕಗಳಿಂದ ಸೇವೆ ಸಲ್ಲಿಸಿದ್ದಾರೆ.

"ಜಸ್ಟ್ ಬಿ" ಎಂಬ ಥೀಮ್ನೊಂದಿಗೆ ಈ ಸಮಾವೇಶ ನಡೆಯಲಿದ್ದು, ಗುರುದೇವ ಶ್ರೀ ಶ್ರೀ ರವಿಶಂಕರವರ ಕವನದಿಂದ ಸ್ಫೂರ್ತಿ ಪಡೆದಿರುತ್ತದೆ. ನಾಯಕತ್ವ, ಸ್ವ–ಅನ್ವೇಷಣೆ ಹಾಗೂ ಸಬಲೀಕರಣದ ಕುರಿತಂತೆ ಆಳವಾದ ಚರ್ಚೆಗಳು ನಡೆಯಲಿವೆ.

## ರಾಜ್ಯಸಭೆಗೆ ಕಮಲ್ ಹಾಸನ್

**ಚೆನ್ನೈ:** ಬಹುಭಾಷ ನಟ, ಉಲಗನಾಯಕ ಕಮಲ್ ಹಾಸನ್ ಅವರನ್ನು ರಾಜ್ಯಸಭೆಗೆ ಕಳುಹಿಸಲು ದ್ರಾವಿಡ ಮುನ್ನೇತ್ರ ಕಳಗಂ (ಡಿಎಂಕೆ) ಮುಂದಾಗಿದೆ. ರಾಜ್ಯಸಭಾ ಚುನಾವಣೆಯ ಮುಂದಿನ ಸುತ್ತು ಜುಲೈ 2025 ರಲ್ಲಿ ನಡೆಯಲಿದೆ. ಮೂಲಗಳ ಪ್ರಕಾರ, ತಮಿಳುನಾಡು ಸಚಿವ ಪಿ.ಕೆ.ಶೇಖರ್ ಬಾಬು, ಬುಧವಾರ ಕಮಲ್ ಹಾಸನ್ ಅವರನ್ನು ಅವರ ಚೆನ್ನೈ ನಿವಾಸದಲ್ಲಿ ಭೇಟಿಯಾಗಿ ಈ ಬಗ್ಗೆ ಚರ್ಚಿಸಿದರು ಎನ್ನಲಾಗಿದೆ. ಕಮಲ್ ಹಾಸನ್ ಅವರ ಮಕ್ಕಳ್ ನೀಧಿ ಮಯ್ಯಂ (ಎಂಎನ್‌ಎಂ) 2024 ರ ಲೋಕಸಭಾ ಚುನಾವಣೆಗೆ ಪ್ರಚಾರಕ್ಕಾಗಿ ಡಿಎಂಕೆ ನೇತೃತ್ವದ ಮೈತ್ರಿಕೂಟದೊಂದಿಗೆ ಕೈಜೋಡಿಸಿತ್ತು. ಮೈತ್ರಿಯ ಭಾಗವಾಗಿ ಈ ವರ್ಷದ ರಾಜ್ಯಸಭಾ ಚುನಾವಣೆಯಲ್ಲಿ ಎಂಎನ್‌ಎಂ ಒಂದು ಸ್ಥಾನವನ್ನು ಗಳಿಸಿತ್ತು.

## ರಾಮ ಮಂದಿರದ ಪ್ರಧಾನ ಅರ್ಚಕ ದಾಸ್ ನಿಧನ

**ಲಕ್ನೋ:** ಅಯೋಧ್ಯೆಯ ರಾಮಜನಭೂಮಿ ದೇವಸ್ಥಾನದ ಮುಖ್ಯ ಅರ್ಚಕ ಮಹಂತ್ ಸತ್ಯೇಂದ್ರ ದಾಸ್ (85) ಅವರು ನಿಧನರಾಗಿದ್ದಾರೆ. ಬ್ರೈನ್ ಸ್ಟ್ರೋಕ್‌ಗೆ ಒಳಗಾದ ಅವರು ಸಂಜಯ್ ಗಾಂಧಿ ಪೋಸ್ಟ್ ಗ್ರಾಜುಯೇಟ್ ಇನ್‌ಸ್ಟಿಟ್ಯೂಟ್ ಆಫ್ ಮೆಡಿಕಲ್ ಸೈನ್ಸಸ್ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಚಿಕಿತ್ಸೆ ವಿಫಲವಾಗಿ ಕೊನೆಯುಸಿರೆಳೆದಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. 20ನೇ ವಯಸ್ಸಿನಿಂದಲೂ ದೇವಾಲಯದ ಅರ್ಚಕರಾಗಿ ಸೇವೆ ಸಲ್ಲಿಸಿದರು. ನಿರ್ವಾಣಿ ಅಖಾಡದಿಂದ ಬಂದ ದಾಸ್, ಅಯೋಧ್ಯೆಯ ಅತ್ಯಂತ ಸುಲಭವಾಗಿ ಪ್ರವೇಶಿಸಬಹುದಾದ ಸಂತರಲ್ಲಿ ಒಬ್ಬರಾಗಿದ್ದರು ಮತ್ತು ಅಯೋಧ್ಯೆ ಮತ್ತು ರಾಮ ಮಂದಿರದ ಬೆಳವಣಿಗೆಗಳ ಬಗ್ಗೆ ಮಾಹಿತಿ ಬಯಸುತ್ತಿರುವ ದೇಶಾದ್ಯಂತದ ಅನೇಕ ಮಾಧ್ಯಮ ಪ್ರತಿನಿಧಿಗಳಿಗೆ ಹತ್ತಿರವಾಗಿದ್ದರು.ಡಿಸೆಂಬರ್ 6, 1992 ರಂದು ಬಾಬರಿ ಮಸೀದಿಯನ್ನು ಕೆಡವಿದಾಗಲೂ ಮುಖ್ಯ ಅರ್ಚಕರಾಗಿ ಕೆಲಸ ಮಾಡುತ್ತಿದ್ದರು.ತಾತ್ಕಾಲಿಕ ಟೆಂಟ್ ಅಡಿಯಲ್ಲಿ ರಾಮ್ ಲಲ್ಲಾ ವಿಗ್ರಹಕ್ಕೆ ಪೂಜೆ ಸಲ್ಲಿಸುತ್ತಿದ್ದರು. ಸಿಎಂ ಯೋಗಿ ಆಧಿತ್ಯ ನಾಥ್ ,ವಿಶ್ವ ಹಿಂದೂ ಪರಿಷತ್ತಿನ ಅಯೋಧ್ಯೆ ಮೂಲದ ವಕ್ತಾರ ಶರದ್ ಶರ್ಮಾ ದಾಸ್ ಸೇರಿ ಹಲವಾರು ಗಣ್ಯರು ಸಂತಾಪ ಸೂಚಿಸಿದ್ದಾರೆ.

## ದಲ್ಲಾಳಿಗಳ ಕಮೀಷನ್; ಲೋಕಾಯುಕ್ತರು ಗರಂ

**ಹಾವೇರಿ:** ನಗರದ ಶಿವಲಿಂಗೇಶ್ವರ ತರಕಾರಿ ಮಾರುಕಟ್ಟೆ ಸೇರಿದಂತೆ ಬುಧವಾರ ಬೆಳ್ಳಂಬೆಳಗ್ಗೆ ವಿವಿಧ ಸ್ಥಳಗಳಿಗೆ ಭೇಟಿ ನೀಡಿದ ಉಪ ಲೋಕಾಯುಕ್ತ ನ್ಯಾಯಮೂರ್ತಿ ಬಿ.ವೀರಪ್ಪ ಅವರು ಸಾರ್ವಜನಿಕರ ಮತ್ತು ರೈತರ ಸಮಸ್ಯೆ ಆಲಿಸಿದರು. ಶಿವಲಿಂಗೇಶ್ವರ ತರಕಾರಿ ಮಾರುಕಟ್ಟೆ ಭೇಟಿ ವೇಳೆ ದಲ್ಲಾಳಿಗಳ ಕಮೀಷನ್ ಹಾವಳಿಗೆ ಗರಂ ಆದ ಉಪ ಲೋಕಾಯುಕ್ತರು, ಸರಿಯಾದ ಜಿಎಸ್‌ಟಿ ನಂಬರ್ ಇಲ್ಲದ ಬಿಲ್ ಬುಕ್, ಬಿಲ್ ನೀಡದೇ ತರಕಾರಿ ಮಾರಾಟ ಮಾಡುತ್ತಿದ್ದ ಏಜೆಂಟರನ್ನು ತರಾಟೆಗೆ ತಗೆದುಕೊಂಡರು.

ಒಂದು ಬಾಕ್ಸ್ ತರಕಾರಿಗೆ 10 ರೂಪಾಯಿ ಕಮೀಷನ್ ತೆಗೆದುಕೊಳ್ಳುತ್ತಿದ್ದ ದಲ್ಲಾಳಿಗಳ ಕ್ರಮಕ್ಕೆ ಹಾಗೂ ಶೌಚಾಲಯ ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಇಲ್ಲದಕ್ಕೆ ಬೇಸರ ವ್ಯಕ್ತಪಡಿಸಿ, ಎಪಿಎಂಸಿಯ ಕಾರ್ಯದರ್ಶಿಯನ್ನು ಕರೆದು ಸ್ಥಳದಲ್ಲೇ ತೀವ್ರ ತರಾಟೆಗೆ ತೆಗೆದುಕೊಂಡರು.

ನಂತರ ನಗರದ ಕೆಸ್‌ಆರ್‌ಟಿಸಿ ಬಸ್ ನಿಲ್ದಾಣಕ್ಕೆ ಭೇಟಿ ನೀಡಿದ ಅವರು, ಪಾರ್ಕಿಂಗ್ ಸ್ಥಳ, ಬಿಲ್ ಬುಕ್ ಚೆಕ್ ಮಾಡಿದರು. ಬೈಕ್, ಕಾರುಗಳಿಗೆ ಮನಬಂದಂತೆ ಹಣ ಪಡೆಯುತ್ತಿದ್ದ ಟೆಂಡರ್‌ದಾರನಿಗೆ ಅಲ್ಲಿಯೂ ಸಹ ತರಾಟೆ ತಗೆದುಕೊಂಡರು. ಯಾವುದೇ ಸಮಯದಲ್ಲಿ ಬಂದರು 30 ರೂಪಾಯಿ ಹೇಗೆ ತೆಗೆದುಕೊಳ್ಳುತ್ತೀರಿ? ಎಂದು ಪ್ರಶ್ನಿಸುವ ಮೂಲಕ ಪುಸ್ತಕ ಸರಿಯಾಗಿ ನಿರ್ವಹಣೆ ಮಾಡುವಂತೆ ತಾಕೀತು ಮಾಡಿದರು.

ಬಸ್ ನಿಲ್ದಾಣದಲ್ಲಿನ ಶುದ್ಧ ಕುಡಿಯುವ ನೀರಿನ ಘಟಕ ಬಂದ್ ಆಗಿರುವ ಕುರಿತಂತೆ ಕೆಸ್‌ಆರ್‌ಟಿಸಿ ಡಿಸಿಗೆ ಮಾಹಿತಿ ಕೇಳಿದರು. ನಿಲ್ದಾಣದಲ್ಲಿ ಸ್ವಚ್ಛತೆ ಇಲ್ಲದಿರುವುದು, ಪ್ರಯಾಣಿಕರಿಗೆ ಸರಿಯಾದ ಸೌಲಭ್ಯಗಳಿಲ್ಲದಿರುವುದನ್ನು ಕಂಡು ಗರಂ ಆದರು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ವಿಜಯಮಹಾಂತೇಶ ಮತ್ತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಂಶುಕುಮಾರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

ಹಾವೇರಿ ಜಿಲ್ಲೆಯಲ್ಲಿ ಇಂದಿನಿಂದ ಮೂರು ದಿನಗಳಕಾಲ ಅವರು ವಿವಿಧ ಇಲಾಖೆ ಕಚೇರಿಗಳಿಗೆ ಭೇಟಿ ನೀಡಲಿದ್ದು, ಸರ್ಕಾರಿ ಕಚೇರಿಗಳ ವ್ಯವಸ್ಥೆ ಹಾಗೂ ಭ್ರಷ್ಟಾಚಾರ ಕುರಿತು ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಲಿದ್ದಾರೆ.

# ಜಿಲ್ಲೆಯ ತಾಲ್ಲೂಕು ಕೇಂದ್ರಗಳಲ್ಲಿ ಅನಿರ್ದಿಷ್ಟಾವಧಿ ಮುಷ್ಕರ

ಮಾಲೂರು: ಕರ್ನಾಟಕ ರಾಜ್ಯ ಗ್ರಾಮ ಆಡಳಿತ ಅಧಿಕಾರಿಗಳ ಸಮಸ್ಯೆಗಳು ಮತ್ತು ಬೇಡಿಕೆಗಳ ಈಡೇರಿಕೆಗಾಗಿ ಆಗ್ರಹಿಸಿ ಕರ್ನಾಟಕ ರಾಜ್ಯ ಗ್ರಾಮ ಆಡಳಿತ ಅಧಿಕಾರಿಗಳ ಕೇಂದ್ರ ಸಂಘದ ಆದೇಶದ ಮೇರೆಗೆ ಜಿಲ್ಲೆಯ ತಾಲೂಕು ಕೇಂದ್ರಗಳಲ್ಲಿ ಸೋಮವಾರದಿಂದ 2ನೇ ಹಂತದ ಅನಿರ್ದಿಷ್ಟಾವಧಿ ಮುಷ್ಕರ ನಡೆಸಲಾಗುತ್ತಿದೆ ಎಂದು ಎಂದು ಜಿಲ್ಲಾಧ್ಯಕ್ಷ ಸಿ.ವಿ ಮುನೇಶ್ ತಿಳಿಸಿದ್ದಾರೆ.





ಪಟ್ಟಣದ ತಾಲ್ಲೂಕು ಆಡಳಿತ ಸೌಧದ ಕಚೇರಿಯಲ್ಲಿ ಗ್ರಾಮ ಆಡಳಿತಾಧಿಕಾರಿಗಳ ಸಂಘದ ವತಿಯಿಂದ ಅನಿರ್ದಿಷ್ಟಾವಧಿ ಮುಷ್ಕರ ನಡೆಸಲು ಸರಕಾರಿ ನೌಕರರ ಸಂಘದ ಅಧ್ಯಕ್ಷ ವಿ.ಮುನೇಗೌಡ ನೇತೃತ್ವದಲ್ಲಿ ತಹಶೀಲ್ದಾರ್ ಎಂ.ವಿ.ರೂಪ ರವರಿಗೆ ರಜೆ ಪತ್ರ ಸಲ್ಲಿಸಿ ಸರ್ಕಾರಿ ಆಪ್‌ಗಳನ್ನು ಇನ್ಸಾಲ್ ಮಾಡಿ, ಕಪ್ಪು ಪಟ್ಟಿ ಧರಿಸಿ, ಮೌನ ಮೆರವಣ ಗೆ ಮೂಲಕ ಪುರಸಭಾ ಉದ್ಯಾನವನಕ್ಕೆ ಆಗಮಿಸಿ ಡಾ.ಅಂಬೇಡ್ಕರ್ ಅವರ ಪ್ರತಿಮೆಗೆ ಮಾಲಾರ್ಪಣೆ ಸಲ್ಲಿಸಿ, ಅನಿರ್ದಿಷ್ಟ ಅವಧಿ ಮುಷ್ಕರದಲ್ಲಿ ಭಾಗವಹಿಸಿ ಮಾತನಾಡಿದರು.

2024ರ ಸೆ.26ರಿಂದ ಅ.3ರ ವರೆಗೆ ರಾಜ್ಯಾದ್ಯಂತ ಹಮ್ಮಿಕೊಂಡಿದ್ದ ಗ್ರಾಮ ಆಡಳಿತ ಅಧಿಕಾರಿಗಳ ಅನಿರ್ಧಿಷ್ಟಾವಧಿ ಮುಷ್ಕರದ ಸಂದರ್ಭದಲ್ಲಿ ಕಂದಾಯ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಗ್ರಾಮ ಆಡಳಿತ ಅಧಿಕಾರಿಗಳ ಬೇಡಿಕೆಗಳನ್ನು ಈಡೇರಿಸುವುದಾಗಿ ಭರವಸೆ ನೀಡಿದ್ದರಿಂದ ಮುಷ್ಕರ ಹಿಂಪಡೆಯಲಾಗಿತ್ತು. ಆದರೆ, ಈವರೆಗೂ ಭರವಸೆ ಈಡೇರಿಸದ ಕಾರಣ 2ನೇ ಹಂತದ ಅನಿರ್ಧಿಷ್ಟಾವಧಿ ಮುಷ್ಕರ ಹಮ್ಮಿಕೊಳ್ಳಲಾಗಿದೆ.

ಗ್ರಾಮ ಆಡಳಿತ ಅಧಿಕಾರಿಗಳ ಪ್ರಮುಖ ಬೇಡಿಕೆಗಳಾದ ರಾಜ್ಯಾದ್ಯಂತ ಆಧಾರ ಸೀಡಿಂಗ್ ಪ್ರಕ್ರಿಯೆಯಲ್ಲಿ ಪತ್ತೆಯಾಗಿರುವ 51.5 ಲಕ್ಷ ಮೃತ ಖಾತೆದಾರರ ಪಹಣ ದಾಖಲೆ ಅಭಿಯಾನ ಮಾದರಿಯಲ್ಲಿ ವಾರಸುದಾರರ ಹೆಸರುಗಳಿಗೆ ಪೌತಿ ಖಾತೆ ದಾಖಲಿಸುವಂತೆ ಇ-ಪೌತಿ ಖಾತಾ ಆಂದೋಲನ ಕೈಬಿಡಬೇಕು.

ಚಿಕ್ಕಮಗಳೂರು ಜಿಲ್ಲೆಯಲ್ಲಿ 30 ಗ್ರಾಮ ಆಡಳಿತ ಅಧಿಕಾರಿಗಳ ವಾರ್ಷಿಕ ವೇತನ ಬಡ್ತಿಯನ್ನು ತಡೆದು ನೈಸರ್ಗಿಕ ನ್ಯಾಯ ತತ್ವಗಳನ್ನು ಹಾಗೂ ಎಲ್ಲ ನಿಯಮಗಳನ್ನು ಉಲ್ಲಂಘಿಸಿ ಹೊರಡಿಸಿರುವ ದಂಡನಾ ಆದೇಶವನ್ನು ಕೂಡಲೇ ಹಿಂಪಡೆಯಬೇಕು. ಅಂತರ್ ಜಿಲ್ಲಾ ವರ್ಗಾವಣೆಯ ಕೆಸಿಎಸ್‌ಆರ್ ನಿಯಮ 16ಎ ರ ಉಪಖಂಡ(2)ನ್ನು ಮರುಸ್ಥಾಪಿಸುವ ಬಗ್ಗೆ ಅಥವಾ ಇತರೆ ಎಲ್ಲಾ ಇಲಾಖೆಗಳಲ್ಲಿರುವಂತೆ ಕಂದಾಯ ಇಲಾಖೆಯಲ್ಲಿ ವರ್ಗಾವಣೆಗಾಗಿ ವಿಶೇಷ ಮಾರ್ಗಸೂಚಿ ರಚಿಸಬೇಕು. ಗ್ರಾಮ ಆಡಳಿತ ಅಧಿಕಾರಿಗಳಿಗೆ ಸುಸಜ್ಜಿತ ಕಚೇರಿ, ಗುಣಮಟ್ಟದ ಟೇಬಲ್, ಖುರ್ಚಿ, ಅಲ್ಮೀರಾ, ಮೊಬೈಲ್, ಲ್ಯಾಪ್‌ಟಾಪ್, ಪ್ರಿಂಟರ್ ಹಾಗೂ ಸ್ಕ್ಯಾನರ್‌ಗಳನ್ನು ಒದಗಿಸಬೇಕು. ಗ್ರಾಮ ಆಡಳಿತ ಅಧಿಕಾರಿಗಳ ಹುದ್ದೆಯನ್ನು ತಾಂತ್ರಿಕ ಹುದ್ದೆಗಳಿಗೆ ನೀಡುವ ವೇತನ ಶ್ರೇಣ ನಿಗದಿಪಡಿಸಿ ಆದೇಶ ನೀಡಬೇಕು.

ಕಂದಾಯ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಸರಕಾರಿ ನೌಕರರ ಎಲ್ಲಾ ವೃಂದಗಳನ್ನು ಒಳಗೊಂಡಂತೆ ನೀಡುತ್ತಿರುವ ಅನುಕಂಪದ ನೇಮಕಾತಿಯ ಹುದ್ದೆಯ ವೃಂದ ಹಾಗೂ ನೇಮಕಾತಿ ತಿದ್ದುಪಡಿ ಮಾಡಬೇಕು. ಕರ್ತವ್ಯ ನಿರ್ವಹಿಸುವ ಸಂದರ್ಭದಲ್ಲಿ ಜೀವಹಾನಿ ಸಂಭವಿಸಿದಲ್ಲಿ ಗ್ರಾಮ ಆಡಳಿತ ಅಧಿಕಾರಿಗಳ ಕುಟುಂಬಕ್ಕೆ 50 ಲಕ್ಷ ರೂ. ಪರಿಹಾರ ಮಂಜೂರು ಮಾಡಬೇಕು. ಪ್ರಯಾಣ ಭತ್ಯೆಯನ್ನು 500ರಿಂದ 5000 ರೂ. ಹೆಚ್ಚುವರಿ ಮಾಡಬೇಕು. ಬೆಳೆ ಸಮೀಕ್ಷೆ, ಬೆಳೆ ಹಾನಿ ಪರಿಹಾರದ ಕೆಲಸವನ್ನು ಕೃಷಿ, ತೋಟಗಾರಿಕೆ ಇಲಾಖೆಗೆ ನಿರ್ವಹಿಸುವಂತೆ ಆದೇಶಿಸಬೇಕು, ಮ್ಯೂಟೇಶನ್ ಅವಧಿ ದಿನವನ್ನು ವಿಸ್ತರಿಸಬೇಕು. ಪ್ರೋಟೋಕಾಲ್ ಕೆಲಸದಿಂದ ಗ್ರಾಮ ಆಡಳಿತ ಅಧಿಕಾರಿಗಳಿಗೆ ಕೈಬಿಡಬೇಕು, ಜಾಬ್ ಚಾರ್ಟ್ ನಿಗದಿಪಡಿಸಬೇಕು.

ದಫರ್ ಹಾಗೂ ಜಮಾಬಂದಿಯನ್ನು ರದ್ದುಪಡಿಸಬೇಕು. ಹಾಗೂ ರಾಜ್ಯದ ಗ್ರಾಮ ಸಹಾಯಕರಿಗೆ ಸೇವಾಭದ್ರತೆಯನ್ನು ಒದಗಿಸುವುದು ಸೇರಿ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ 2ನೇ ಹಂತದ ಅನಿರ್ಧಿಷ್ಟಾವಧಿ ಮುಷ್ಕರ ಹಮ್ಮಿಕೊಳ್ಳಲಾಗಿದೆ, ಬೇಡಿಕೆಗಳು ಈಡೇರುವವರೆಗೆ ಅನಿರ್ದಿಷ್ಟ ಅವಧಿ ಮುಷ್ಕರ ಕೈ ಬಿಡುವುದಿಲ್ಲ ಎಂದು ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಗ್ರಾಮ ಆಡಳಿತ ಅಧಿಕಾರಿಗಳ ಸಂಘದ ಪ್ರವೀಣ್, ತಾಲೂಕು ಶಾಖೆಯ ಕಾರ್ಯದರ್ಶಿ ರಾಹುಲ್, ಸಂಘದ ಸದಸ್ಯರಾದ ವೆಂಕಟೇಶ್, ರೂಪೇಂದ್ರ, ಲೋಕೇಶ್, ಸ್ವಾತಿ, ಅನಿತಾ, ಇನ್ನಿತರರು ಹಾಜರಿದ್ದರು.

# ಗುಡಿಸಲಿಗೆ ಬೆಂಕಿ; ಅಪಾರ ಆಸ್ತಿ ನಷ್ಟ



**ಕೊರಟಗೆರೆ:** ಗುಡಿಸಲಿಗೆ ಆಕಸ್ಮಿಕ ಬೆಂಕಿ ಬಿದ್ದು ಗುಡಿಸಲಿನಲ್ಲಿದ್ದ ನಾಲ್ಕು ಮೇಕೆ ಹಾಗೂ ದವಸ ಧಾನ್ಯ ಸಂಪೂರ್ಣ ಸುಟ್ಟು ಕರಕಲು ಆಗಿರುವ ಘಟನೆ ಸಿಬಿ ಪಾಳ್ಯದಲ್ಲಿ ನಡೆದಿದೆ.

ತಾಲೂಕಿನ ಹೊಳವನಹಳ್ಳಿ ಹೋಬಳಿಯ ಬಿಡಿಪುರ ಗ್ರಾಮ ಪಂಚಾಯತಿ ವ್ಯಾಪ್ತಿಯ ಸಿಬಿ ಪಾಳ್ಯ ಗ್ರಾಮದ ನಿವಾಸಿ ಶಿಲ್ಪಾ ಜಯರಾಮ್ ಅವರ ಗುಡಿಸಲಿಗೆ ಆಕಸ್ಮಿಕವಾಗಿ ಬೆಂಕಿ ತಗುಲಿದ್ದು, ಗುಡಿಸಲಿದ್ದ ಮೇಕೆಗಳನ್ನು ಕಾಪಾಡಲು ಹೋದ ಅತ್ತೆ, ಸೊಸೆ ಇಬ್ಬರಿಗೂ ಬೆಂಕಿ ತಗುಲಿ ಸ್ಥಳೀಯ ಆಸ್ಪತ್ರೆಗೆ ದಾಖಲುಮಾಡಲಾಗಿದೆ.

ಮೇಕೆಗಳನ್ನು ಕಾಪಾಡಲು ಹೋದ ಅತ್ತೆ ಸೊಸೆ ಇಬ್ಬರಿಗೂ ಬೆಂಕಿ ತಗುಲಿ ಕೈ, ಕಾಲು ಕೆನ್ನೆಗೆ ಸುಟ್ಟ ಗಾಯಗಳಾಗಿವೆ ಇದನ್ನು ಕಂಡ ಸ್ಥಳೀಯರು ತಕ್ಷಣ ಅವರನ್ನು ಆಸ್ಪತ್ರೆಗೆ ಸೇರಿಸುವ ಕೆಲಸ ಮಾಡಿದ್ದಾರೆ. ಇನ್ನು ಬಡ ಕುಟುಂಬದ ಮಹಿಳೆಯರಿಬ್ಬರೂ ಆಸ್ಪತ್ರೆಯಲ್ಲಿ ಚೇತರಿಸಿಕೊಳ್ಳುತ್ತಿದ್ದಾರೆ

ಕುಟುಂಬದಲ್ಲಿ ಅತ್ತೆ ಸೊಸೆ ಮಗ ಹಾಗೂ ಇಬ್ಬರು ಶಾಲೆಗೆ ಹೋಗುವ ಮಕ್ಕಳಿದ್ದು ಈ ಬಡ ಕುಟುಂಬಕ್ಕೆ ಸರ್ಕಾರ ಹಾಗೂ ಸಂಬಂಧ ಪಟ್ಟ ಅಧಿಕಾರಿಗಳು ಇತ್ತ ಗಮನಹರಿಸಿ ಬಡ ಕುಟುಂಬಕ್ಕೆ ಆಸರೆ ನೀಡಬೇಕಾಗಿದೆ ಎಂದು ಸ್ಥಳೀಯರು ಅಗ್ರಹ ಮಾಡಿದದ್ದಾರೆ.

# ಅಲೆಮಾರಿಗಳಿಗೆ ಸರ್ಕಾರದಿಂದ ಸಿಗುವ ಸವಲತ್ತುಗಳ ಬಗ್ಗೆ ಅರಿವಿಲ್ಲ

**ಶಿಡ್ಲಘಟ್ಟ:** ಸ್ವಂತ ಮನೆ ಇಲ್ಲ, ನಿವೇಶನ ಇಲ್ಲ ಸರ್ಕಾರದ ಸವಲತ್ತುಗಳನ್ನು ಪಡೆಯಲು ಆಧಾರ್ ಕಾರ್ಡ್, ರೇಷನ್ ಕಾರ್ಡ್ ಇನ್ನಿತರ ದಾಖಲೆಗಳು ಇಲ್ಲದಿರುವುದರಿಂದ ಸಾಲ ಸಿಗುವುದಿಲ್ಲ ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸಿದ್ದು, ಶಾಲೆಗೂ ಸೂಕ್ತ ದಾಖಲೆ ಒದಗಿಸಲು ಸಾಧ್ಯವಾಗುತ್ತಿಲ್ಲ ಎಂದು ಪರಿಶಿಷ್ಟ ಜಾತಿ, ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಜಿ.ಪಲ್ಲವಿ ಅವರ ಬಳಿ ಸಮಸ್ಯೆಗಳನ್ನು ಹೇಳಿಕೊಂಡರು.

ತಾಲ್ಲೂಕಿನ ಎಚ್.ಕ್ರಾಸ್ ಹೊರವಲಯದಲ್ಲಿನ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಅಲೆಮಾರಿ ಜನಾಂಗದವರನ್ನು ಅಧಿಕಾರಿಗಳೊಂದಿಗೆ ಭೇಟಿ ನೀಡಿ ಅವರು ಚರ್ಚಿಸಿದರು.

ಅಲೆಮಾರಿಗಳಿಗೆ ಸರ್ಕಾರದಿಂದ ಸಿಗುವ ಸವಲತ್ತುಗಳ ಬಗ್ಗೆ ಅರಿವಿಲ್ಲ ಅಲೆಮಾರಿಗಳಿರುವ ಸ್ಥಳದಲ್ಲೇ ಕ್ಯಾಂಪ್ ಮಾಡಿ ಅರಿವು ಮೂಡಿಸಿ, ಸಮಸ್ಯೆ ಇತ್ಯರ್ಥಪಡಿಸುವಂತೆ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಪರಿಶಿಷ್ಟ ಜಾತಿ ಮತ್ತು ಪಂಗಡದ ಅಲೆಮಾರಿ ಸಮುದಾಯದ ಮಕ್ಕಳಿಗೆ ಎಲ್ಲಾ ವಸತಿ ಶಾಲೆಗಳಲ್ಲಿ ಶೇ.10ರಷ್ಟು ನೇರ ಪ್ರವೇಶಕ್ಕೆ ಅವಕಾಶ ನೀಡಲಾಗುವುದು ಅಲ್ಲಿ ಉಚಿತ ಊಟ, ವಸತಿ, ಶಿಕ್ಷಣ ಇತರ ಸವಲತ್ತುಗಳು ಸಿಗಲಿವೆ,ತಮ್ಮ ಮಕ್ಕಳನ್ನು ಸೇರಿಸಿ ಎಂದ ಅವರು, ಅನೇಕರಿಗೆ ಇಂತಹ ವಸತಿ ಶಾಲೆಗಳ ಬಗ್ಗೆ ಮಾಹಿತಿ ಇಲ್ಲ ಆದ್ದರಿಂದ ಇಲ್ಲಿನ ಪಾಲಕರನ್ನು ವಸತಿ ಶಾಲೆಗಳಿಗೆ ಕರೆದೊಯ್ದು ಶಾಲೆ ವಾತಾವರಣ, ಸವಲತ್ತು ತೋರಿಸಿದರೆ ಮಕ್ಕಳನ್ನು ವಸತಿ ಶಾಲೆಗೆ ಸೇರಿಸಬೇಕೆಂಬ ಬಯಕೆ ಹೆಚ್ಚುತ್ತದೆ ಮತ್ತು ಪ್ರವೇಶ ಮಾಡಿಸಲು ಅಗತ್ಯ ಮಾರ್ಗದರ್ಶನ ಸಲಹೆ ಸೂಚನೆ ನೀಡಿ ಎಂದು ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಸಾಕಷ್ಟು ಮಂದಿಗೆ ಆಧಾರ್ ಕಾರ್ಡ್ ಇನ್ನಿತರ ದಾಖಲೆಗಳು ಇಲ್ಲವಾಗಿದ್ದು, ಇಲ್ಲಿಯೇ ಕ್ಯಾಂಪ್ ಮಾಡಿ, ಅಗತ್ಯ ದಾಖಲೆ ಮಾಡಿಕೊಡಿ ಎಂದು ಗ್ರೇಡ್-2 ತಹಸೀಲ್ದಾರ್ ಗೆ ಸೂಚಿಸಿದರು.

ಗಂಜಿಗುಂಟೆ ಗ್ರಾಮ ಪಂಚಾಯಿತಿಯ 'ಹಕ್ಕಿಪಿಕ್ಕಿ ಕಾಲೋನಿ'ಗೆ ಭೇಟಿ ನೀಡಿದ ಜಿ.ಪಲ್ಲವಿ ಅವರಿಗೆ ಅಲ್ಲಿನ ವಾಸಿಗಳು ತಮ್ಮ ಹೆಸರಲ್ಲಿ ಜಮೀನಿನ ಪಹಣಿ ಇದೆ, ಆದರೆ ಬ್ಯಾಂಕ್ ನಿಂದ ಸಾಲ ಇನ್ನಿತರೆ ಸವಲತ್ತುಗಳನ್ನು ಪಡೆದುಕೊಳ್ಳಲು ಹೋದಾಗ ಅಲ್ಲಿ ಪಹಣಿಯಲ್ಲಿ ಸರ್ಕಾರದ್ದು ಎಂದು ಬರುತ್ತಿದೆ,ಇದರಿಂದ ನಾವು ಯಾವುದೇ ಸವಲತ್ತುಗಳನ್ನು ಪಡೆದುಕೊಳ್ಳಲು ಆಗುತ್ತಿಲ್ಲ ಎಂದು ಸಮಸ್ಯೆಯನ್ನು ಹೇಳಿಕೊಂಡರು,ಈ ಬಗ್ಗೆ ಕ್ರಮವಹಿಸಿ ಸಮಸ್ಯೆ ಬಗೆಹರಿಸುವಂತೆ ಕಂದಾಯ ಇಲಾಖೆ ಅಧಿಕಾರಿಗಳಿಗೆ ಅವರು ಸೂಚಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ತೇಜಾನಂದರೆಡ್ಡಿ, ಗ್ರೇಡ್-2 ತಹಸೀಲ್ದಾರ್ ಪೂರ್ಣಿಮಾ, ತಾಲ್ಲೂಕು ಪಂಚಾಯತಿ ಇಒ ಹೇಮಾವತಿ, ತಾಲ್ಲೂಕು ಸಮಾಜ ಕಲ್ಯಾಣ ಅಧಿಕಾರಿ ಜಗದೀಶ್, ನರೇಗಾ ಸಹಾಯಕ ನಿರ್ದೇಶಕ ಚಂದ್ರಪ್ಪ , ಐಎನ್‌ಟಿಯುಸಿಯ ರಾಜ್ಯ ಸಂಘಟನಾ ಕಾರ್ಯದರ್ಶಿಕೆ. ಎನ್. ಮುನಿಂದ್ರ ಮುಂತಾದವರು ಹಾಜರಿದ್ದರು.



**ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದ ಅಲೆ ಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಜಿ.ಪಲ್ಲವಿ ಅವರು ಅಲೆಮಾರಿ ಸಮುದಾಯದವರನ್ನು ಭೇಟಿ ಮಾಡಿ ಮಾಹಿತಿ ಪಡೆದುಕೊಳ್ಳಲು ಎಚ್.ಕ್ರಾಸ್ ಗ್ರಾಮ ಪಂಚಾಯಿತಿ ಪಿಡಿಒ ಅವರಿಗೆ ಕಾದುಕುಳಿತುಕೊಳ್ಳುವಂತಾಯಿತು. ಅಧಿಕಾರಿಗಳೊಂದಿಗೆ ನಿಗಮದ ಅಧ್ಯಕ್ಷೆ ಎಚ್.ಕ್ರಾಸ್ ಗೆ ಬಂದರಾದರೂ ಅಲೆ ಮಾರಿಗಳು ನೆಲೆಸಿರುವ ಜಾಗ ತಿಳಿಯಲಿಲ್ಲ,ಪಿಡಿಒ ಅವರು ಬರಬೇಕಿತ್ತಾದರೂ ಸಮಯಕ್ಕೆ ಅವರು ಬರಲಿಲ್ಲ,ಇದರಿಂದ ಕೆಲ ಕಾಲ ಕಾದು ನಂತರ ಸ್ಥಳೀಯರ ನೆರವಿನಿಂದ ಸ್ಥಳಕ್ಕೆ ತೆರಳುವಂತಾಯಿತು. ಕೊನೆಗೆ ಜಿಲ್ಲಾ ಪಂಚಾಯಿತಿ ಸಿಇಒ ಅವರಿಂದ ಕರೆ ಮಾಡಿಸಿದ ಮೇಲೆ ಪಿಡಿಒ ಪ್ರಶಾಂತ್ ಸ್ಥಳಕ್ಕೆ ಬರುವಷ್ಟರಲ್ಲಿ ಆಯೋಗದ ಅಧ್ಯಕ್ಷರ ಭೇಟಿ ಕಾರ್ಯಕ್ರಮ ಅಂತಿಮ ಹಂತಕ್ಕೆ ಬಂದಿತ್ತು.**

# ಶ್ರೀದ್ರೌಪದಿ ಧರ್ಮರಾಯಸ್ವಾಮಿ ದೇವಾಲಯ ಪ್ರತಿಷ್ಠಾಪನೆ

ದೇವನಹಳ್ಳಿ :ತಾಲ್ಲೂಕಿನ ಬಿದಲಪುರ ಗ್ರಾಮದಲ್ಲಿ ಶ್ರೀ ದ್ರೌಪದಿ ಧರ್ಮರಾಯಸ್ವಾಮಿ ದೇವಾಲಯದ ಪ್ರತಿಷ್ಠಾಪನೆ ಉದ್ಘಾಟನಾ ಸಮಾರಂಭವು ಅದ್ದೂರಿಯಾಗಿ ನಡೆಯಿತು. ಸದ್ಗುರು ಶ್ರೀ ಬಾಲಯೋಗಿ ಸಾಯಿ ಮಂಜುನಾಥ್ ಮಹಾರಾಜ್ ಶ್ರೀಗಳ ಹಾಗೂ ಜಗದ್ಗುರು ಶ್ರೀ ಪ್ರಣವಾನಂದಪುರಿ ಮಹಾಸ್ವಾಮೀಜಿಗಳ ಸಾನಿಧ್ಯದಲ್ಲಿ ಯಶಸ್ವಿಯಾಗಿ ನೆರವೇರಿತು.



ದೇವಾಲಯದ ಉದ್ಘಾಟನಾ ಸಮಾರಂಭದಲ್ಲಿ ರಾಜ್ಯ ಜೆಡಿಎಸ್ ಯುವ ಘಟಕದ ಅಧ್ಯಕ್ಷರು ಹಾಗೂ ಕನ್ನಡ ಚಲನ ಚಿತ್ರದ ನಾಯಕ ನಟ ನಿಖಿಲ್ ಕುಮಾರಸ್ವಾಮಿ ಭಾಗಿಯಾಗಿ ತಾಯಿ ದ್ರೌಪದಿಯ ಆಶೀರ್ವಾದ ಪಡೆದು ನಂತರ ಮಾತನಾಡಿ ತಾಯಿಯ ಆಶೀರ್ವಾದ ಗ್ರಾಮದ ಎಲ್ಲಾ ಜನತೆಯ ಮೇಲಿರಲಿ ಕಾಲಕಾಲಕ್ಕೆ ಮಳೆ ಬೆಳೆಯಾಗಿ ಸಮೃದ್ಧಿಯಾಗಿರಲಿ ಎಂದು ಹಾರೈಸಿ ನಮ್ಮ ತಂದೆ ಮತ್ತು ನನ್ನನ್ನು ನಂಬಿ ಮತಗಳನ್ನು ನೀಡಿದ ಮತದಾರರ ಸಮಸ್ಯೆಗಳನ್ನು ಬಗೆಹರಿಸುವ ನಿಟ್ಟಿನಲ್ಲಿ ತಂದದಯೊಂದಿಗೆ ನಾನು ಸದಾ ಸಿದ್ದನಾಗಿರುತ್ತೇನೆ ಎಂದು ಹೇಳಿದರು.

ಶ್ರೀ ದ್ರೌಪದಿ ಶ್ರೀ ಧರ್ಮರಾಯಸ್ವಾಮಿ ದೇವಸ್ಥಾನ ಸೇವಾ ಸಮಿತಿಯ ಮುಖಂಡರಾದ ಶ್ರೀನಿವಾಸ್ ಮಾತನಾಡಿ ಎಲ್ಲಾ ದಾನಿಗಳ ತನು ದನ ಮನ ನೀಡಿ ಸಹಕರಿಸಿದ ಪರಿಣಾಮ ಇಷ್ಟು ಅಚ್ಚುಕಟ್ಟಾದ ತಾಯಿಯ ದೇವಾಲಯ ನಿರ್ಮಾಣ ಮಾಡಲು ಸಾಧ್ಯವಾಗಿದೆ ಆ ತಾಯಿಯ ಅನುಗ್ರಹ ಎಲ್ಲರ ಮೇಲೆ ಇದ್ದು ಒಳ್ಳೆಯದಾಗಲಿ ಎಂದರು.

ಬಿದಲಪುರ ಗ್ರಾಮದ ಮುಖಂಡರಾದ ಶಿವಕುಮಾರ್ ಆರಾಧ್ಯ ಮತ್ತು ಅನಿಲ್ ಕುಮಾರ್ ಮಾತನಾಡಿದರು.

ಇದೇ ಸಂದರ್ಭದಲ್ಲಿ ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ನಿಕಟಪೂರ್ವ ಶಾಸಕರಾದ ನಿಸರ್ಗ ನಾರಾಯಣಸ್ವಾಮಿ, ಮಾಜಿ ಎಂಎಲ್ ಸಿ ಪಿ.ಆರ್ ರಮೇಶ್,ಮಾಜಿ ಶಾಸಕರಾದ ಜಿ. ಚಂದ್ರಣ್ಣ,ಕರ್ನಾಟಕ ರಾಜ್ಯತಿ (ವಕ್ಷ )ಸಂಘದ ಅಧ್ಯಕ್ಷ ಮು ಕೃಷ್ಣಮೂರ್ತಿ,ಬಿಗ್ ಬಾಸ್ ಖ್ಯಾತಿಯ ವರ್ತೂರು ಸಂತೋಷ್, ಉಪಾಧ್ಯಕ್ಷರಾದ ವೈ.ಎನ್. ಶಾಮಣ್ಣ ಹಾಗೂ ವೈ.ವಿ. ಮುನಿರಾಜು, ಸಂಘಟನಾ ಕಾರ್ಯದರ್ಶಿ ಜೆ ಆರ್ ಮುನಿವೀರಣ್ಣ, ನಿರ್ದೇಶಕರಾದ ಎನ್ ಕನಕರಾಜು,ಉಪ್ಪಾರಹಳ್ಳಿಯ ಪುಟ್ಟರಾಜು, ಕೋನಘಟ್ಟದ ಕೆ.ಎಂ. ಮಂಜುನಾಥ್, ತಾಲ್ಲೂಕು ಸಂಘದ ಅಧ್ಯಕ್ಷ ವಿ.ಗೋಪಾಲಕೃಷ್ಣ, ಹೊರಮಾವು ರಾಮಚಂದ್ರಣ್ಣ, ಪಿಎಲ್‌ಡಿ ಬ್ಯಾಂಕಿನ ಲಾಯರ್ ಮುನಿರಾಜು, ಬಾಲೆಪುರದ ಲಕ್ಷೀನಾರಾಯಣಪ್ಪ, ಹೊಸಳ್ಳಿ.ಟಿ. ರವಿ,ವಿಜಯಪುರ, ದೇವನಹಳ್ಳಿ, ಹೊಸಕೋಟೆ, ಬೂದಿಗೆರೆಯ ಮುಖಂಡರು, ಸುತ್ತ -ಮುತ್ತಲಿನ ಊರುಗಳ ಮುಖಂಡರು, ದೇವಾಲಯದ ಸೇವಾ ಸಮಿತಿಯ ಪದಾಧಿಕಾರಿಗಳು, ಕುಲಬಾಂಧವರು, ಗ್ರಾಮಸ್ಥರು ಮತ್ತು ಭಕ್ತಾಧಿಗಳು ಭಾಗಿಯಾಗಿದ್ದರು.

# ಸ್ಪೀಡ್ ಸ್ಕೇಟಿಂಗ್ ಅಸೋಸಿಯೇಷನ್‌ಗೆ ಹಲವು ಪದಕ



**ಶಿಡ್ಲಘಟ್ಟ:** ನಗರದಲ್ಲಿನ ಸ್ಪೀಡ್ ಸ್ಕೇಟಿಂಗ್ ಅಸೋಸಿಯೇಷನ್ ವಿದ್ಯಾರ್ಥಿಗಳು ಗೌರಿಬಿದನೂರಿನ ನೇತಾಜಿ ಕ್ರೀಡಾಂಗಣದಲ್ಲಿ ನಡೆದ ರಾಜ್ಯಮಟ್ಟದ ಸ್ಕೇಟಿಂಗ್ ಪಂದ್ಯಾವಳಿಯಲ್ಲಿ ಭಾಗವಹಿಸಿ ಹಲವು ಪದಕಗಳನ್ನು ಪಡೆದು ಸಂಭ್ರಮಿಸಿದ್ದಾರೆ. ಹತ್ತು ವರ್ಷದ 500 ಮೀಟರ್ ಪಂದ್ಯಾವಳಿಯಲ್ಲಿ ಬಿ.ನಿರಂಜನ್ ದ್ವಿತೀಯ ಸ್ಥಾನ, 1000 ಮೀಟರ್ ನಲ್ಲಿ ಪ್ರಥಮ ಸ್ಥಾನ,12 ವರ್ಷದ 500 ಮೀಟರ್ ಪಂದ್ಯಾವಳಿಯಲ್ಲಿ ಬಿ.ಎಸ್.ತನ್ಮಯ್ ದ್ವಿತೀಯ ಸ್ಥಾನ ಹಾಗೂ 1000 ಮೀಟರ್ ನಲ್ಲಿ ದ್ವಿತೀಯ ಸ್ಥಾನ, ರಿಲೇ ಪಂದ್ಯಾವಳಿಯಲ್ಲಿ ಎಂ.ರಿತ್ವಿಕ್ ಪ್ರಥಮ ಸ್ಥಾನ, ಮೋಹನ್ ರಿಲೇ ಪಂದ್ಯಾವಳಿಯಲ್ಲಿ ತೃತೀಯ ಸ್ಥಾನ ಪಡೆದಿದ್ದಾರೆ ಎಂದು ಸ್ಕೇಟಿಂಗ್ ಶಿಕ್ಷಕ ಅರುಣ್ ಕುಮಾರ್ ತಿಳಿಸಿದ್ದಾರೆ.

# ಪುರಸಭೆಯ ಅಧ್ಯಕ್ಷ- ಉಪಾಧ್ಯಕ್ಷರ ಆಯ್ಕೆ

**ದೇವನಹಳ್ಳಿ:** ಪುರಸಭೆಯ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ತಲಾ ಒಂದೊಂದು ಅರ್ಜಿ ಸಲ್ಲಿಕೆಯಾಗಿದ್ದು ಅಧ್ಯಕ್ಷರಾಗಿ ಮುನಿಕೃಷ್ಣ, ಉಪಾಧ್ಯಕ್ಷರಾಗಿ ಜಿ.ಎ.ರವೀಂದ್ರ ಅವಿರೋಧವಾಗಿ ಆಯ್ಕೆಯಾಗಿದ್ದಾರೆಂದು ಚುನಾವಣಾಧಿಕಾರಿ ಹಾಗೂ ತಹಶೀಲ್ದಾರ್ ಎಚ್.ಬಾಲಕೃಷ್ಣ ಘೋಷಿಸಿದ್ದಾರೆ.



ಪುರಸಭೆ ನೂತನ ಅಧ್ಯಕ್ಷ ಮುನಿಕೃಷ್ಣ ಮಾತನಾಡಿ ಎಲ್ಲಾ ಸದಸ್ಯರ ಸಹಕಾರದಿಂದ ಅಧ್ಯಕ್ಷನಾಗಿ ಆಯ್ಕೆಯಾಗಿದ್ದೇನೆ ಎಲ್ಲಾ ಸದಸ್ಯರ ಸಹಕಾರ ಹಾಗೂ ಹಿಂದಿನ ಅಧ್ಯಕ್ಷರ ಮಾರ್ಗದರ್ಶನ ಪಡೆದು ಪಟ್ಟಣದ ಜನತೆಗೆ ಹಿತ ಕಾಪಾಡಲು ಪ್ರಾಮಾಣಿಕವಾಗಿ ಪ್ರಯತ್ನಿಸುತ್ತೇನೆ. ಮೂಲಭೂತ ಸೌಕರ್ಯಕ್ಕೆ ಪ್ರಥಮ ಆಧ್ಯತೆ ನೀಡಿ ಪಟ್ಟಣದ ಕಸವಿಲೇವಾರಿ, ಸ್ವಚ್ಚತೆ, ನೀರಿನ ಸೌಲಭ್ಯ ಹಾಗೂ ಅಭಿವೃದ್ಧಿ ಹಂತದಲ್ಲಿರುವ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸುವ ಕೆಲಸ ಮಾಡಲಾಗುವುದು. ಇರುವ ಅವಧಿಯಲ್ಲಿ ಪಟ್ಟಣದಲ್ಲಿ ನೆನೆಗುದಿಗೆ ಬಿದ್ದಿರುವ ಕಾಮಗಾರಿಗಳನ್ನು ಹಂತಹಂತವಾಗಿ ಅಭಿವೃದ್ಧಿಗೊಳಿಸಲಾಗುವುದು ತ್ವರಿತವಾಗಿ ಪೂರ್ಣಗೊಳಿಸುತ್ತೇನೆ ಎಂದರು.

ಪುರಸಭೆ ಉಪಾಧ್ಯಕ್ಷ ಜಿ.ಎ.ರವೀಂದ್ರ ಮಾತನಾಡಿ ನನ್ನ ಆಯ್ಕೆಗೆ ಸಹಕಾರ ನೀಡಿದ ಎಲ್ಲಾ ಸದಸ್ಯರಿಗೂ ಹಾಗೂ ಮುಖಂಡರಿಗೂ ಹಾಗೂ ವಾರ್ಡಿನ ಮತದಾರರಿಗೆ ಕೃತಜ್ಞತೆ ಸಲ್ಲಿಸುತ್ತೇನೆ. ನನಗಿರುವ ಅಲ್ಪಾವಧಿ ಸಮಯದಲ್ಲಿ ಪುರಸಭೆ ಹಾಗೂ ಸರಕಾರದ ಅನುಧಾನದಲ್ಲಿ ಪಟ್ಟಣದ ಅಭಿವೃದ್ಧಿ ಕೆಲಸಗಳನ್ನು ಹಂತಹಂತವಾಗಿ ಮಾಡುತ್ತೇನೆ. ಪ್ರಥಮವಾಗಿ ಸುಚಿತ್ವಕ್ಕೆ ಹೆಚ್ಚು ಆಧ್ಯತೆ ನೀಡಲಾಗುವುದು, ಪ್ರಸ್ತುತ ಪಟ್ಟಣದಲ್ಲಿ ನೀರಿನ ಸಮಸ್ಯೆ ಇಲ್ಲ ಇರುವ ಕೊಳವೆ ಬಾವಿಗಳಿಂದ ಅಗತ್ಯಕ್ಕೆ ತಕ್ಕಷ್ಟು ನೀರು ಪೂರೈಕೆಯಾಗುತ್ತಿದೆ. ಬೇಸಿಗೆ ಸಮೀಪಿಸುತ್ತಿದ್ದು ಬೇಸಿಗೆಯಲ್ಲಿ ನೀರಿನ ಬವಣೆ ತಲೆದೋರದಂತೆ ಅಧಿಕಾರಿಗಳೊಂದಿಗೆ ಚರ್ಚಿಸಿ ಕ್ರಮವಹಿಸಲಾಗುವುದು ಎಂದರು.

ಇದೆ ವೇಳೆ ಪುರಸಭೆ ಮುಖ್ಯಾಧಿಕಾರಿ ದೊಡ್ಡಮಲವಯ್ಯ, ಪುರಸಭೆ ಸದಸ್ಯರಾದ ಎಸ್.ನಾಗೇಶ್, ಸೋಮಶೇಖರ್ ಬಾಬು, ಲಕ್ಷ್ಮೀ, ಸುಮಿತ್ರ, ರತ್ನಮ್ಮ, ಬಾಲರಾಜ್, ಗೀತಾ, ರೇಖ, ಗೋಪಿ, ಎಸ್.ಸಿ. ಚಂದ್ರಪ್ಪ, ಮಂಜುನಾಥ್, ಎನ್.ರಘು, ಗೋಪಮ್ಮ, ಕೋಮಲ, ಲೀಲಾವತಿ, ಸೋಸೈಟ್ ಕುಮಾರ್, ಪುರಸಭೆ ಕಂದಾಯ ಅಧಿಕಾರಿ ಶಿವಮೂರ್ತಿ, ಕಂದಾಯ ನಿರೀಕ್ಷಕ ಎ.ಮಂಜುನಾಥ್, ದ್ವಿತೀಯ ದರ್ಜೆ ಸಹಾಯಕ ಮಂಜಪ್ಪ, ಶ್ರೀನಿವಾಸ್, ಹಿರಿಯ ಆರೋಗ್ಯ ನಿರೀಕ್ಷಕಿ ಶ್ರೀದೇವಿ, ಕಚೇರಿ ಸಿಬ್ಬಂದಿ ವರ್ಗದವರು ಇದ್ದರು.

# ಒಗ್ಗಟ್ಟಾಗಿ ಸಂಘವನ್ನು ಅಭಿವೃದ್ಧಿ ಪಡಿಸಿ

ಮಾಲೂರು: ಪಿಎಲ್‌ಡಿ ಬ್ಯಾಂಕಿಗೆ ನೂತನವಾಗಿ ಆಯ್ಕೆಯಾದ ಅಧ್ಯಕ್ಷ ಉಪಾಧ್ಯಕ್ಷರು ನಿರ್ದೇಶಕರು ಒಗ್ಗಟ್ಟಾಗಿ ಸಹಕಾರ ಸಂಘವನ್ನು ಅಭಿವೃದ್ಧಿ ಮೂಲಕ ಇದರ ಪ್ರಯೋಜನಗಳು ರೈತರಿಗೆ ತಲುಪಿಸುವಂತೆ ಶಾಸಕ ಕೆ ವೈ ನಂಜೇಗೌಡ ಹೇಳಿದರು.



ಪಟ್ಟಣದ ಪಿಎಲ್‌ಡಿ ಬ್ಯಾಂಕಿನಲ್ಲಿ ಅಧ್ಯಕ್ಷ ಬಿ.ಆರ್.ಶ್ರೀನಿವಾಸ್, ಉಪಾಧ್ಯಕ್ಷ ವೆಂಕಟೇಶಪ್ಪ ಅವರ ಪದಗ್ರಹಣ ಕಾರ್ಯಕ್ರಮದಲ್ಲಿ ಭಾಗವಹಿಸಿ ಅಭಿನಂದನೆ ಸ್ವೀಕರಿಸಿ ಮಾತನಾಡಿದರು.

ಇಲ್ಲಿನ ಪಿಎಲ್ ಡಿ ಬ್ಯಾಂಕಿಗೆ ಇತಿಹಾಸವಿದ್ದು ನಾನು ಸಹ ಬ್ಯಾಂಕಿನ ಉಪಾಧ್ಯಕ್ಷರಾಗಿ ಕಾರ್ಯನಿರ್ವಹಿಸಿದ್ದು ರೈತರು ಜನತೆಯ ಪರವಾಗಿ ನೂತನ ಆಡಳಿತ ಮಂಡಳಿ ಕಾರ್ಯನಿರ್ವಹಿಸಬೇಕು, ಇದುವರೆಗೂ ಬ್ಯಾಂಕಿನ ಆಡಳಿತ ಮಂಡಳಿಗಳು ನಡೆಸಿದ ಆಡಳಿತವನ್ನು ಪ್ರಶ್ನಿಸುವುದಿಲ್ಲ, ಎಲ್ಲರೂ ಬ್ಯಾಂಕಿನ ಅಭಿವೃದ್ಧಿಗಾಗಿ ಶ್ರಮಿಸಿದ್ದಾರೆ, ನೂತನ ಆಡಳಿತ ಮಂಡಳಿ ಜನರನ್ನು ಮೆಚ್ಚಿಸುವ ರೀತಿಯಲ್ಲಿ ರೈತರಿಗೆ ಸಹಕಾರಿಯಾಗಿ ಬ್ಯಾಂಕಿನಿಂದ ಹೆಚ್ಚಾಗಿ ವಿವಿಧ ರೀತಿಯ ಸಾಲಗಳನ್ನು ನೀಡುವುದರ ಮೂಲಕ ಮರುಪಾವತಿ ಮಾಡಿಕೊಂಡು ಬ್ಯಾಂಕಿನ ಅಭಿವೃದ್ಧಿಗೆ ಶ್ರಮಿಸಬೇಕು.

ಈ ಹಿಂದೆ ಬ್ಯಾಂಕಿನ ಆಡಳಿತ ನಡೆಸಿದ್ದ ಆಡಳಿತ ಮಂಡಳಿಗಳು ನನ್ನ ಸಹಕಾರವನ್ನು ಕೇಳಿರಲಿಲ್ಲ ಆದರೆ ನೂತನವಾಗಿ ಆಡಳಿತಕ್ಕೆ ಬಂದಿರುವ ಆಡಳಿತ ಮಂಡಳಿ ಸರ್ಕಾರದಿಂದ ಯಾವ ರೀತಿಯ ಸಹಕಾರವನ್ನು ಬಯಸುತ್ತಾರೋ ಆ ಸಹಕಾರವನ್ನು ಪಿಎಲ್‌ಡಿ ಬ್ಯಾಂಕಿಗೆ ನೀಡಲಾಗುವುದು ಅಧ್ಯಕ್ಷ ಉಪಾಧ್ಯಕ್ಷರು, ನಿರ್ದೇಶಕರು ಒಗ್ಗಟ್ಟಾಗಿ ಆಡಳಿತವನ್ನು ನಡೆಸುವುದರ ಮೂಲಕ ಸಾಲಗಳನ್ನು ನೀಡಿ ಸಾಲ ಮರು ವಸೂಲಿಗೆ ಬ್ಯಾಂಕಿನ ಕಾರ್ಯದರ್ಶಿ ಹಾಗೂ ಸಿಬ್ಬಂದಿಗೆ ಸಹಕಾರ ನೀಡುವಂತೆ ಹೇಳಿದರು.

ಈ ಸಂದರ್ಭದಲ್ಲಿ ಯೋಜನಾ ಪ್ರಾಧಿಕಾರ ಅಧ್ಯಕ್ಷ ಮುಹಮ್ಮದ್ ನಯೀಮ್ ಉಲ್ಲಾ, ಜಿಲ್ಲಾ ವ್ಯವಸ್ಥಾಪಕ ಸುರೇಶ್ ಬಾಬು, ಬ್ಯಾಂಕಿನ ವ್ಯವಸ್ಥಾಪಕ ಚಂದ್ರಶೇಖರ್, ನಿರ್ದೇಶಕರಾದ ಹಾರೋಹಳ್ಳಿ ಮುನಿರಾಜು, ಡಿ.ಕೆ ನಾಗರಾಜು, ನಾರಾಯಣಸ್ವಾಮಿ, ರವಿ ಕುಮಾರ್, ಮಂಜುಳ, ಸಿಬ್ಬಂದಿಗಳಾದ ನವೀನ್, ರವಿ, ಯಶೋಧಮ್ಮ, ಇನ್ನಿತರರಿದ್ದರು.

# ಮಾದಕ ವಸ್ತು ಸೇವನೆ ದುಷ್ಪರಿಣಾಮಗಳ ಜಾಗೃತಿ ಅಗತ್ಯ

**ಚಾಮರಾಜನಗರ:** ಆರೋಗ್ಯಕ್ಕೆ ಮಾರಕವಾಗಿರುವ ಮಾದಕ ದ್ರವ್ಯ, ಧೂಮಪಾನ, ತಂಬಾಕು ಸೇವನೆಯಂತಹ ಚಟಗಳನ್ನು ತ್ಯಜಿಸಬೇಕು. ಈ ಬಗ್ಗೆ ಹೆಚ್ಚಿನ ಜಾಗೃತಿ ಮೂಡಿಸುವ ಅಗತ್ಯವಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಸಲಹೆ ನೀಡಿದ್ದಾರೆ.

ನಗರದ ಜೆ.ಹೆಚ್. ಪಟೇಲ್ ಸಭಾಂಗಣದಲ್ಲಿ ಜಿಲ್ಲಾ ಪೊಲೀಸ್ ಘಟಕದ ವತಿಯಿಂದ ಮಾದಕ ವಸ್ತು ಸೇವನೆಯ ದುಷ್ಪರಿಣಾಮಗಳ ಬಗ್ಗೆ ಪ್ರೌಢಶಾಲಾ ಹಾಗೂ ಪಿಯುಸಿ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ಭಾಷಣ ಸ್ಪರ್ಧೆಯ ವಿಜೇತರಿಗೆ ಬಹುಮಾನ ವಿತರಿಸಿ ಅವರು ಮಾತನಾಡಿದರು.

ಮಾದಕ ದ್ರವ್ಯ, ಧೂಮಪಾನ, ತಂಬಾಕು ಇನ್ನಿತರ ಕೆಟ್ಟ ಚಟಗಳಿಂದ ಚಿಕ್ಕ ವಯಸ್ಸಿನಲ್ಲಿಯೇ ಸಾವಿಗೀಡಾಗುವುದನ್ನು ಇಂದು ನಾವು ಕಾಣುತ್ತಿದ್ದೇವೆ. ಇದರಿಂದ ಕುಟುಂಬ ತೊಂದರೆ ಅನುಭವಿಸುವುದನ್ನು ನೋಡುತ್ತಿದ್ದೇವೆ. ಮಾದಕ ವಸ್ತುಗಳು ಆರೋಗ್ಯದ ಮೇಲೆ ದುಷ್ಪರಿಣಾಮಗಳು ಬೀರುತ್ತಿದ್ದು, ಚಿಕ್ಕವಯಸ್ಸಿನವರಲ್ಲಿ ರೋಗನಿರೋಧಕ ಶಕ್ತಿ ಕುಂದುತ್ತಿದೆ. ದುಶ್ಚಟಗಳಿಂದ ದೂರವಾದರೆ ಉತ್ತಮ ಬದುಕು ಸಾಗಿಸಬಹುದು ಎಂದರು.

ವಿದ್ಯಾರ್ಥಿಗಳಿಗೆ ಮಾದಕ ವಸ್ತು ಸೇವನೆಯ ದುಷ್ಪರಿಣಾಮಗಳ ಕುರಿತು ಭಾಷಣ ಸ್ಪರ್ಧೆ ಏರ್ಪಡಿಸುವ ಮೂಲಕ ಜಿಲ್ಲಾ ಪೊಲೀಸ್ ಇಲಾಖೆ ಮುಂದಾಗಿರುವುದು ಪ್ರಶಂಸನೀಯ. ಇಡೀ ದಿನ ವಿದ್ಯಾರ್ಥಿಗಳು ಸ್ಪರ್ಧೆಯಲ್ಲಿ ಹೆಚ್ಚು ಸಂಖ್ಯೆಯಲ್ಲಿ ಪಾಲ್ಗೊಂಡಿರುವುದು ಸಂತಸದ ಸಂಗತಿಯಾಗಿದೆ. ತಾಳ್ಮೆಯಿಂದ ತೀರ್ಪುಗಾರರು ವಿದ್ಯಾರ್ಥಿಗಳ ಭಾಷಣ ಆಲಿಸಿ ತೀರ್ಪು ನೀಡಿರುವುದು ಸಹ ಶ್ಲಾಘನೀಯ ಎಂದು ಜಿಲ್ಲಾಧಿಕಾರಿಯವರ ಹೇಳಿದರು.

ಮಕ್ಕಳಲ್ಲಿರುವ ಸಾಮರ್ಥ್ಯ ಗುರುತಿಸಿ ಹಲವಾರು ಶಿಕ್ಷಕರು ನಿಸ್ವಾರ್ಥದಿಂದ ಮಕ್ಕಳ ಪ್ರತಿಭೆಗೆ ಮಾರ್ಗದರ್ಶನ ಮಾಡುತ್ತಿದ್ದಾರೆ. ವಿದ್ಯಾರ್ಥಿಗಳು ತಮಗೆ ಒದಗಿರುವ ಅವಕಾಶಗಳನ್ನು ಉತ್ತಮವಾಗಿ ಬಳಸಿಕೊಳ್ಳಬೇಕು. ಎಷ್ಟೇ ದೊಡ್ಡ ವ್ಯಕ್ತಿಯಾದರೂ ತಾವು ಇದ್ದ ಗ್ರಾಮ, ಜಿಲ್ಲೆ, ಶಾಲೆ ಮರೆಯಬಾರದು. ವಿದ್ಯಾರ್ಥಿಗಳು ಚಾಮರಾಜನಗರ ಜಿಲ್ಲೆಗೆ ತಮ್ಮದೇ ಆದ ಕೊಡುಗೆ ನೀಡಬೇಕು ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಸಲಹೆ ಮಾಡಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರು ಮಾತನಾಡಿ ಭಾಷಣ ಸ್ಪರ್ಧೆಯಲ್ಲಿ ವಿದ್ಯಾರ್ಥಿಗಳು ಆಸಕ್ತಿಯಿಂದ ಭಾಗವಹಿಸಿದ್ದಾರೆ. ಮುಂಬರುವ ಪರೀಕ್ಷೆಗಳಲ್ಲಿ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿ ಜಿಲ್ಲೆಗೆ ಕೀರ್ತಿ ತರಬೇಕು ಎಂದರು.

ಇದಕ್ಕೂ ಮೊದಲು ನಡೆದ ಸ್ಪರ್ಧೆಯ ಉದ್ಘಾಟನೆ ವೇಳೆ ಮಾತನಾಡಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತಾ ಅವರು ಇಂತಹ ಕಾರ್ಯಕ್ರಮ ಆಯೋಜಿಸಿರುವುದು ತೃಪ್ತಿ ತಂದಿದೆ. ವಿದ್ಯಾರ್ಥಿಗಳಿಗೆ ಸರಿಯಾದ ಹಾದಿ ಯಾವುದು ಎಂಬುದನ್ನ ತಿಳಿಸಬೇಕು. ಪ್ರೌಢಶಾಲಾ, ಪಿಯುಸಿ ಹಂತದ ವಿದ್ಯಾರ್ಥಿಗಳು ತಿಳಿಸಿದ ವಿಷಯವನ್ನ ಗ್ರಹಿಸಿ ಜೀವನದಲ್ಲಿ ಅಳವಡಿಸಿಕೊಳ್ಳುವ ಸಾಧ್ಯತೆ ಹೆಚ್ಚು ಇರುತ್ತದೆ. ಹೀಗಾಗಿ ಮಾದಕ ವಸ್ತುಗಳ ಸೇವನೆಯ ದುಷ್ಪರಿಣಾಮಗಳ ಕುರಿತ ಭಾಷಣ ಸ್ಪರ್ಧೆಯ ಮೂಲಕ ಜಾಗೃತಿ ಮೂಡಿಸುವ ವಿಶೇಷ ಕಾರ್ಯಕ್ರಮವನ್ನು ಏರ್ಪಡಿಸಿದ್ದೇವೆ ಎಂದರು.



ಪ್ರಥಮ, ದ್ವಿತೀಯ ವಿಜೇತರನ್ನು ಮಾತ್ರ ಗುರುತಿಸುತ್ತಿಲ್ಲ. ಪ್ರತಿ ವಿಭಾಗದಲ್ಲಿ 10 ಪ್ರಶಂಸನಾ ಬಹುಮಾನಗಳನ್ನು ಸಹ ನೀಡುತ್ತಿದ್ದೇವೆ. ಸಮಾಜ ಮತ್ತು ಆರೋಗ್ಯಕ್ಕೆ ಹಾನಿಕಾರಕವಾದ ಮಾದಕ ವಸ್ತುಗಳಿಂದ ದೂರವಿರಬೇಕು ಎಂಬ ಸಂದೇಶವನ್ನು ವಿದ್ಯಾರ್ಥಿಗಳ ಮೂಲಕ ಕೊಡಲಾಗುತ್ತಿದೆ. ಇದಕ್ಕಾಗಿ ಬೋಧಕರು, ಶಿಕ್ಷಕರು, ಇಲಾಖೆಗಳು ಸಹಕರಿಸಿವೆ ಎಂದು ಡಾ. ಬಿ.ಟಿ. ಕವಿತಾ ಅವರು ತಿಳಿಸಿದರು.

ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ಮಂಜುನಾಥ ಪ್ರಸನ್ನ ಅವರು ಮಾತನಾಡಿ ಸ್ವಾಸ್ಥ್ಯ ಸಮಾಜ ನಿರ್ಮಾಣವಾಗಬೇಕಾದರೆ ಮಾದಕ ವಸ್ತುಗಳ ಸೇವನೆಯಿಂದ ಮುಕ್ತರಾಗಬೇಕು. ಹದಿ ಹರೆಯದ ವಯಸ್ಸಿನಲ್ಲಿ ಮಾದಕ ವಸ್ತು ಸೇವನೆ ಚಟಕ್ಕೆ ಬಲಿಯಾಗದಂತೆ ಅರಿವು ಮೂಡಿಸಬೇಕು. ವಿದ್ಯಾರ್ಥಿಗಳು ಉತ್ತಮ ಭವಿಷ್ಯ ರೂಪಿಸಿಕೊಳ್ಳುವುದನ್ನು ಮುಖ್ಯ ಗುರಿಯಾಗಿಸಿಕೊಳ್ಳಬೇಕು ಎಂದರು.

ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಎನ್. ಶಶಿಧರ್, ಡಿವೈಎಸ್‌ಪಿ ಲಕ್ಷ್ಮಯ್ಯ, ತೀರ್ಪುಗಾರರಾದ ಉಪನ್ಯಾಸಕರಾದ ಜಿ. ಶಾಲಿನಿ ಕುಮಾರಿ, ಸಹ ಪ್ರಾಧ್ಯಪಕರಾದ ಎಂ.ಕೆ. ಮಂಜುನಾಥ್, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಗ್ರಾಮ ಆಡಳಿತಾಧಿಕಾರಿಗಳ ಮುಷ್ಕರ

**ಕುಕನೂರು:** ವಿವಿಧ ಬೇಡಿಕೆಗಳ ಈಡೇರಿಕೆ ಅಧಿಕ ಕಾರ್ಯದೊತ್ತಡ ಸಮಸ್ಯೆಗಳ ಪರಿಹಾರಕ್ಕೆ ಅಗ್ರಹಿಸಿ ಗ್ರಾಮ ಆಡಳಿತ ಅಧಿಕಾರಿಗಳು ಮಂಗಳವಾರದಿಂದ ಎರಡನೇ ಹಂತದ ಮುಷ್ಕರ ಆರಂಭಿಸಿದ್ದಾರೆ.

ಪಟ್ಟಣದ ತಾಲೂಕು ಆಡಳಿತ ಕಚೇರಿ ಮುಂದೆ ಕಂದಾಯ ಇಲಾಖೆಯ ಅಡಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಗ್ರಾಮ ಆಡಳಿತ ಅಧಿಕಾರಿಗಳು ತಮ್ಮ ಅನಿರ್ದಿಷ್ಟ ಮುಷ್ಕರ ಕೈಕೊಂಡಿದ್ದಾರೆ.

ಕರ್ನಾಟಕ ರಾಜ್ಯ ಗ್ರಾಮ ಆಡಳಿತ ಅಧಿಕಾರಿಗಳ ವೃಂದದ ಮೊದಲ ಹಂತದ ಮುಷ್ಕರದ ಯಾವ ಬೇಡಿಕೆಗಳನ್ನು ಸರ್ಕಾರ ಇದುವರೆಗೂ ಈಡೇರಿಸಿಲ್ಲ. ಹೀಗಾಗಿ ರಾಜ್ಯವ್ಯಾಪಿ ಎರಡನೇ ಹಂತದ ಮುಷ್ಕರದಲ್ಲಿ ಮುಂದುವರೆಸಲಾಗಿದೆ.




ಸುಸಜ್ಜಿತ ಕಚೇರಿ, ಗುಣಮಟ್ಟದ ಪಿಠೋಪಕರಣ,ಗಣಕಯಂತ್ರ, ಸಿಮ್, ಡೇಟಾ ಸಂಪರ್ಕ ಸೇರಿದಂತೆ ಹಲವು ಬೇಡಿಕೆಗಳನ್ನು ಮುಂದಿಟ್ಟು ಮುಷ್ಕರ ಹಮ್ಮಿಕೊಂಡಿರುವರು.

ಈ ಸಂದರ್ಭದಲ್ಲಿ ಷರೀಫ್ ಸಾಬ್ ನದಾಫ್, ರಾಣಿ ಹಳ್ಳಿ, ವೀರಣ್ಣ ತೆಗ್ಗಿನಮನಿ, ಫೀರ್ ಸಾಬ್ ಲಕ್ಕುಂಡಿ, ದೇವಮ್ಮ, ಶರಣಪ್ಪ ಹಳ್ಳ, ಹನುಮೇಶ್ ಮಳೆಕೊಪ್ಪ ಇತರರು ಇದ್ದರು.

# ನೂತನ ಅಧ್ಯಕ್ಷರಾಗಿ ಅವಿರೋಧ ಆಯ್ಕೆ

**ದೇವನಹಳ್ಳಿ:** ತಾಲ್ಲೂಕಿನ ಬೂದಿಗೆರೆಯ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಕೆ .ಶ್ರೀನಿವಾಸ್ ಗೌಡ ಅವಿರೋಧ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ತಿಳಿಸಿದ್ದಾರೆ.

ಈ ವೇಳೆಯಲ್ಲಿ ನೂತನ ಅಧ್ಯಕ್ಷರಾಗಿರುವ ಕೆ. ಶ್ರೀನಿವಾಸ್ ಗೌಡ ಮಾತನಾಡಿ ಸರ್ವಾನುಮತದಿಂದ ನನ್ನನ್ನು ಆಯ್ಕೆ ಮಾಡಿದ ಸಂಘದ ಎಲ್ಲಾ ಸದಸ್ಯರು ಮತ್ತು ನಿರ್ದೇಶಕರಿಗೆ ಧನ್ಯವಾದಗಳು ತಿಳಿಸಿ, ಎಲ್ಲರ ವಿಶ್ವಾಸದೊಂದಿಗೆ ಸಂಘವನ್ನು ಇನ್ನಷ್ಟು ಅಭಿವೃದ್ಧಿಪಡಿಸುವತ್ತ ಕಾರ್ಯಪ್ರವೃತ್ತನಾಗುತ್ತೇನೆ ಎಂದು ಹೇಳಿದರು.

ನೂತನವಾಗಿ ಆಯ್ಕೆಯಾದ ಅಧ್ಯಕ್ಷರಿಗೆ ತಾಲೂಕಿನ ಹಲವು ಮುಖಂಡರು ಹೂವಿನ ಮಾಲೆಯನ್ನು ಹಾಕುವುದರ ಮೂಲಕ ಅಭಿನಂದಿಸಿದರು.



ಇದೇ ಸಂದರ್ಭದಲ್ಲಿ ಸಹಕಾರ ರತ್ನ ಪುರಸ್ಕೃತರಾದ ಬಾಲೆಪುರ ಲಕ್ಷ್ಮೀನಾರಾಯಣಪ್ಪ, ಮುಖಂಡರಾದ ಬೈರೇಗೌಡ ,ಹಿತ್ತರಹಳ್ಳಿ ರಮೇಶ್, ಮಂಜುನಾಥ್ ಸೇರಿದಂತೆ ಹಲವಾರು ಮುಖಂಡರು ನಿರ್ದೇಶಕರುಗಳು ಗ್ರಾಮಸ್ಥರು ಮತ್ತಿತರರು ಇದ್ದರು.

## ಸಂತ ಸೇವಾಲಾಲ್ ಜಯಂತೋತ್ಸವದ ಪೂರ್ವಭಾವಿ ಸಭೆ



**ಚೇಳೂರು:** ಲಂಬಾಣಿ ಸಮುದಾಯದ ಸಂತ ಸೇವಾಲಾಲ್ ಜಯಂತಿಯನ್ನು ಇದೇ ತಿಂಗಳ 15 ರಂದು ಸರಕಾರದ ಆದೇಶದ ಪ್ರಕಾರ ಮಾಡಲಾಗುವುದೆಂದು ಚೇಳೂರು ತಾಲೂಕು ಕಚೇರಿ ಶೀರಸ್ತೇದಾರ್ ಎಸ್.ಎಲ್. ಸತೀಶ್ ಹೇಳಿದ್ದಾರೆ.

ಅವರು ತಾಲೂಕು ಕಛೇರಿಯ ಸಭಾಂಗಣದಲ್ಲಿ ರಾಷ್ಟ್ರಿಯ ಹಬ್ಬಗಳ ಆಚರಣಾ ಸಮಿತಿ ಹಮ್ಮಿಕೊಂಡಿದ್ದ ಪೂರ್ವ ಭಾವಿ ಸಭೆಯಲ್ಲಿ ಮಾತನಾಡಿ, ಯಾವುದೇ ಜನಾಂಗ ತಮ್ಮ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಲು ಒಗ್ಗಟ್ಟು ಮುಖ್ಯವಾಗಿದೆ ಶೈಕ್ಷಣಿಕವಾಗಿ. ಸಾಮಾಜಿಕವಾಗಿ ಎಲ್ಲಾ ರಂಗಗಳಲ್ಲಿ ಮುಂದುವರೆಯಬೇಕೆಂದು ಹೇಳಿದರು.

ಪೂರ್ವ ಭಾವಿ ಸಭೆಯಲ್ಲಿ ರೆವಿನ್ಯೂ ಇನ್‌ಸ್ಪೇಕ್ಟರ್ ಎಂ.ಎನ್. ಈಶ್ವರ್ ಲಂಬಾಣಿ ಸಮುದಾಯದ ಪ್ರತಿನಿಧಿಗಳಾದ ಆರ್. ಮಂಗೇನಾಯಕ್. ಕಲಾವಿದ ಗೋಪೇನಾಯಕ್. ನರಸಿಂಹನಾಯಕ್. ನಾಗರಾಜ್. ರಂಗೇನಾಯಕ್. ಭೀಮ್ಲಾನಾಯಕ್. ಇತರರು ಉಪಸ್ಥಿತರಿದ್ದರು.



**ಕೋಲ್ಹಾರ ತಾಲುಕಿನ ಪಟ್ಟಣ ಪಂಚಾಯತ್ ಅಧ್ಯಕ್ಷ, ಉಪಾಧ್ಯಕ್ಷ್ ಚುನಾವಣೆ ಹಿನ್ನೆಲೆ ಅಧ್ಯಕ್ಷ ಸ್ಥಾನಕ್ಕೆ ಚನ್ಮಲಪ್ಪ, ಗಿಡ್ಡಪ್ಪಗೋಳ ಹಾಗೂ ಉಪಾಧ್ಯಕ್ಷ್ ಸ್ಥಾನಕ್ಕೆ ರಾಜಮಾ. ಗೈಬುಸಾಬ್. ನದಾಫ್ ನಾಮಪತ್ರ ಸಲ್ಲಿಸಿದರು.**

# ಸದಸ್ಯತ್ವ ಮಾಡಿಸಿ ಪಕ್ಷ ಕಟ್ಟುವ ಕೆಲಸ ಮಾಡಿ: ಲಕ್ಷ್ಮೀನಾರಾಯಣ್

**ಮಾಲೂರು:** ಕರ್ನಾಟಕ ಪ್ರದೇಶ ಯುವ ಕಾಂಗ್ರೆಸ್ ಪಕ್ಷಕ್ಕೆ ನೂತನವಾಗಿ ಆಯ್ಕೆಯಾಗಿರುವ ಪದಾಧಿಕಾರಿಗಳು ಯುವಕರನ್ನು ಹೆಚ್ಚಿನ ಸಂಖ್ಯೆಯಲ್ಲಿ ಪಕ್ಷಕ್ಕೆ ಸೆಳೆಯುವ ಮೂಲಕ ಪಕ್ಷದ ಸದಸ್ಯತ್ವ ಮಾಡಿಸಿ ಪಕ್ಷ ಕಟ್ಟುವ ಕೆಲಸ ಮಾಡುವಂತೆ ಜಿಲ್ಲಾ ಕಾಂಗ್ರೆಸ್ ಪಕ್ಷದ ಅಧ್ಯಕ್ಷ ಸಿ.ಲಕ್ಷ್ಮೀನಾರಾಯಣ್ ಹೇಳಿದರು.

ಪಟ್ಟಣದ ಕಾಂಗ್ರೆಸ್ ಕಚೇರಿಯ ಸಭಾಂಗಣದಲ್ಲಿ ಯುವ ಕಾಂಗ್ರೆಸ್ ಪಕ್ಷಕ್ಕೆ ಆಯ್ಕೆಯಾಗಿರುವ ರಾಜ್ಯ ಪ್ರಧಾನ ಕಾರ್ಯದರ್ಶಿ ಸುನೀಲ್ ನಂಜೇಗೌಡ ಜಿಲ್ಲಾ ಹಾಗೂ ತಾಲೂಕು ಯುವ ಕಾಂಗ್ರೆಸ್ ಸಮಿತಿಗೆ ಆಯ್ಕೆಗೊಂಡ ಪದಾಧಿಕಾರಿಗಳನ್ನು ಬ್ಲಾಕ್ ಕಾಂಗ್ರೆಸ್ ಸಮಿತಿಗಳ ವತಿಯಿಂದ ಹಮ್ಮಿಕೊಂಡಿದ್ದ ಅಭಿನಂದನಾ ಸಮಾರಂಭದಲ್ಲಿ ನೂತನ ಯುವ ಕಾಂಗ್ರೆಸ್ ಪದಾಧಿಕಾರಿಗಳನ್ನು ಅಭಿನಂದಿಸಿ ಮಾತನಾಡಿದರು.


ದೇಶಕ್ಕೆ ಸ್ವಾತಂತ್ರ ದೊರಕಿಸಿಕೊಟ್ಟ ಕಾಂಗ್ರೆಸ್ ಪಕ್ಷಕ್ಕೆ ಇತಿಹಾಸವಿದೆ ಕಾಂಗ್ರೆಸ್ ಪಕ್ಷದ ಸರ್ಕಾರವು 70 ವರ್ಷಗಳ ಕಾಲ ಆಡಳಿತ ನಡೆಸಿದ್ದು ದೇಶದ ಸಮಗ್ರ ಅಭಿವೃದ್ಧಿಗೆ ಪಕ್ಷದ ಆಡಳಿತವು ತನ್ನದೇ ಆದ ಕೊಡುಗೆಯನ್ನು ನೀಡಿದೆ.

ಕಾಂಗ್ರೆಸ್ ಪಕ್ಷ ಆಡಳಿತದಲ್ಲಿದ್ದಾಗ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರು ರಚಿಸಿ ಕೊಟ್ಟ ಸಂವಿಧಾನದ ಆಶಯದಡಿ ಪ್ರತಿಯೊಬ್ಬ ನಾಗರೀಕನಿಗೂ ಸಾಮಾಜಿಕ ಭದ್ರತೆಯನ್ನು ಒದಗಿಸಿದೆ ಅಲ್ಲದೆ ಕಾಂಗ್ರೆಸ್ ಪಕ್ಷದಲ್ಲಿ ಹಲವು ರೀತಿಯ ಅವಕಾಶಗಳನ್ನು ಪಡೆದಿದ್ದಾರೆ. ಎಐಸಿಸಿ ಪಕ್ಷ ಸಂಘಟನೆಯ ಹಿತದೃಷ್ಟಿಯಿಂದ ಯುವಕರನ್ನು ಪಕ್ಷಕ್ಕೆ ಹೆಚ್ಚಾಗಿ ಸೆಳೆಯುವ ಹಿತದೃಷ್ಟಿಯಿಂದ ಯುವ ಕಾಂಗ್ರೆಸ್ ಪಕ್ಷವನ್ನು ಸ್ಥಾಪಿಸಿ ಪದಾಧಿಕಾರಿಗಳನ್ನು ಚುನಾವಣೆಯಲ್ಲಿ ಆಯ್ಕೆ ಮಾಡುವುದು ಯುವಕರಿಗೆ ನೀಡಿದೆ, ಅದರಂತೆ ಇದೇ ಮೊದಲ ಬಾರಿಗೆ ತಾಲೂಕಿನಿಂದ ರಾಜ್ಯ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಯಾಗಿ ಸುನಿಲ್ ನಂಜೆಗೌಡ ಆಯ್ಕೆಯಾಗಿರುವುದು ತಾಲೂಕಿಗೆ ಸಂತಸ ತಂದಿದೆ, ಯುವ ಮುಖಂಡನಾಗಿರುವ ಸುನೀಲ್ ನಂಜೇಗೌಡ ರಾಜ್ಯ ಯುವ ಕಾಂಗ್ರೆಸ್ ಪಕ್ಷದ ಪದಾಧಿಕಾರಿಗಳೊಂದಿಗೆ ಚರ್ಚಿಸಿ ರಾಜ್ಯಾದ್ಯಂತ ಪ್ರವಾಸ ಕೈಗೊಂಡು ಯುವಕರನ್ನು ಪಕ್ಷಕ್ಕೆ ಸೆಳೆದು ಪಕ್ಷ ಸಂಘಟಿಸುವ ಕೆಲಸ ಮಾಡುವಂತೆ ಹೇಳಿದರು. ಅದೇ ರೀತಿ ತಾಲೂಕು ಹಾಗೂ ಜಿಲ್ಲಾ ಸಮಿತಿಗೆ ಆಯ್ಕೆಗೊಂಡ ಪದಾಧಿಕಾರಿಗಳು ಸಹ ಪಕ್ಷ ಕಟ್ಟುವ ಕೆಲಸಕ್ಕೆ ಜಿಲ್ಲಾ ಕಾಂಗ್ರೆಸ್ ಹಾಗೂ ಬ್ಲಾಕ್ ಕಾಂಗ್ರೆಸ್ ಸಮಿತಿಗಳಿಗೆ ಸಹಕಾರ ನೀಡುವಂತೆ ಹೇಳಿದರು.

ಅಭಿನಂದನೆ ಸ್ವೀಕರಿಸಿ ಮಾತನಾಡಿದ ಯುವ ಕಾಂಗ್ರೆಸ್ ಪಕ್ಷದ ರಾಜ್ಯ ಪ್ರಧಾನ ಕಾರ್ಯದರ್ಶಿ ಸುನೀಲ್ ನಂಜೆ ಗೌಡ ತಾಲೂಕಿನ ಕಾಂಗ್ರೆಸ್ ಪಕ್ಷದ ಮುಖಂಡರು ಹಾಗೂ ಯುವಕರ ಸಹಕಾರದಿಂದ ರಾಜ್ಯ ಪ್ರಧಾನ ಕಾರ್ಯದರ್ಶಿಯಾಗಿ ಆಯ್ಕೆಯಾಗಿದ್ದು, ಯುವಕರನ್ನು ಪಕ್ಷಕ್ಕೆ ಸೆಳೆಯುವುದೇ ನನ್ನ ಮುಖ್ಯ ಗುರಿಯಾಗಿದೆ. ಅಲ್ಲದೆ ಮುಂಬರುವ ದಿನಗಳಲ್ಲಿ ರಾಜ್ಯ ಯುವ ಕಾಂಗ್ರೆಸ್ ಪಕ್ಷದಿಂದ ತಾಲೂಕಿನಲ್ಲಿ ಸಮಾವೇಶ ನಡೆಸಲು ಯುವ ಕಾಂಗ್ರೆಸ್ ಪಕ್ಷದ ಅಧ್ಯಕ್ಷರ ಬಳಿ ಚರ್ಚಿಸಲಾಗುವುದು ಅಲ್ಲದೆ ಜಿಲ್ಲಾ ಮಟ್ಟದಲ್ಲಿಯೂ ಸಹ ಯುವ ಕಾಂಗ್ರೆಸ್ ಸಮಾವೇಶ ಏರ್ಪಡಿಸಲಾಗುವುದು, ಕಾಂಗ್ರೆಸ್ ಪಕ್ಷದ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರ ಸಹಕಾರದಿಂದ ಪಕ್ಷ ಕಟ್ಟುವ ಕೆಲಸ ಮಾಡೋಣ, ಇತ್ತೀಚಿನ ದಿನಗಳಲ್ಲಿ ಯುವಕರು ಮೋದಿ ಹಿಂದುತ್ವ ಹೆಚ್ಚಾಗಿ ಹೇಳುತ್ತಾರೆ ಅವರನ್ನು ಆ ಭ್ರಮೆಯಿಂದ ಹೊರತೊಂದು ಕಾಂಗ್ರೆಸ್ ಪಕ್ಷಕ್ಕೆ ಬೆಳೆಯುವುದರ ಮೂಲಕ ಪಕ್ಷ ಸಂಘಟನೆ ಮಾಡಲಾಗುವುದು, ಕಾಂಗ್ರೆಸ್ ಪಕ್ಷದ ವರಿಷ್ಠರ ಮೌಖಿಕ ಆದೇಶದಂತೆ ರಾಜ್ಯದ ಪ್ರತಿ ಗ್ರಾಮದಲ್ಲಿ ಕಾಂಗ್ರೆಸ್ ಪಕ್ಷದ ಸೋಶಿಯಲ್ ಮೀಡಿಯಾದಲ್ಲಿ ಒಬ್ಬ ಸದಸ್ಯರನ್ನು ನೇಮಕ ಮಾಡಿ ಸರ್ಕಾರದ ಸಾಧನೆಗಳು ಹಾಗೂ ಯೋಜನೆಗಳು ಪ್ರಚಾರಪಡಿಸುವುದರ ಮೂಲಕ ಪಕ್ಷವನ್ನು ಬಲಿಷ್ಠ ಗೊಳಿಸಲಾಗುವುದು ಎಂದರು.

ರಾಜ್ಯ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಸುನೀಲ್ ನಂಜೇಗೌಡ, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ರಾಜೇಶ್.ಎಲ್.ವಿ., ಹರೀಶ್, ತಾ.ಅಧ್ಯಕ್ಷ ತನ್ವಿರ್ ಅಹಮದ್, ಮಾಲೂರು ಬ್ಲಾಕ್ ಅಧ್ಯಕ್ಷ ಅಕ್ಷಯ್, ಮಾಸ್ತಿ ಬ್ಲಾಕ್ ಅಧ್ಯಕ್ಷ ಡಿ.ಟಿ.ವಸಂತ್ ಕುಮಾರ್ ಅವರನ್ನು ಅದ್ದೂರಿಯಾಗಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ಕೆಪಿಸಿಸಿ ಸದಸ್ಯ ಎಂ.ಎಸ್.ಪ್ರದೀಪ್ ರೆಡ್ಡಿ, ದರಖಾಸ್ತು ಸಮಿತಿ ಅಧ್ಯಕ್ಷ ಎಸ್ ಸಿ ನಾರಾಯಣಸ್ವಾಮಿ, ಯೋಜನಾ ಪ್ರಾಧಿಕಾರ ಅಧ್ಯಕ್ಷ ಮುಹಮದ್ ನಯಿಂ ಉಲ್ಲಾ, ಪುರಸಭಾ ಸದಸ್ಯರಾದ ಆರ್ ವೆಂಕಟೇಶ್, ಎನ್.ವಿ.ಮುರಳಿಧರ್, ಮಾಜಿ ಸದಸ್ಯ ಹನುಮಂತರೆಡ್ಡಿ, ದರ್ಕಾಸ್ಥ ಸಮಿತಿ ಸದಸ್ಯ ನವೀನ್, ಶಬೀರ್ ಉಲ್ಲಾ, ಹೇಮಮಾಲಿನಿ, ಶೈಲಜಾ ಕೃಷ್ಣ, ಎಂ.ಸಿ.ರವಿ, ಜಾಕಿ ಮಂಜು,ಅಭಿ, ಶೈಲಕುಮಾರ್, ತಿರುಮಲಹಟ್ಟಿ ಬಾಬು, ಇನ್ನಿತರರು ಹಾಜರಿದ್ದರು.



# ಜೀತ ಪದ್ಧತಿ ಶಿಕ್ಷಾರ್ಹ ಅಪರಾಧ: ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಅಭಿಪ್ರಾಯ

**ಚಿಕ್ಕಬಳ್ಳಾಪುರ:** "ಜೀತ ಪದ್ಧತಿ ಶಿಕ್ಷಾರ್ಹ ಅಪರಾಧ" ಎಂಬುದನ್ನು ಸಾರ್ವಜನಿಕರಿಗೆ ಅರಿವು ಮೂಡಿಸುವುದು ಇಂದಿಗೂ ಸಹ ಅಗತ್ಯವಿದೆ. ಏಕೆಂದರೆ ಈ ಅನಿಷ್ಟ ಪದ್ಧತಿ ಇನ್ನೂ ಜೀವಂತವಿದೆ ಎಂದು ಜಿಲ್ಲಾಧಿಕಾರಿ ಪಿ ಎನ್ ರವೀಂದ್ರ ಅವರು ಅಭಿಪ್ರಾಯಪಟ್ಟರು.

ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ರವರ ಸಂಯುಕ್ತಾಶ್ರಯದಲ್ಲಿ ಮಂಗಳವಾರ ಜಿಲ್ಲಾಡಳಿತ ಭವನದ ಆಡಿಟೋರಿಯಂನಲ್ಲಿ ನಡೆದ ಜೀತ ಪದ್ಧತಿ ನಿರ್ಮೂಲನಾ ದಿನಾಚರಣೆ ಕಾರ್ಯಗಾರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಜೀತಪದ್ದತಿಯು ಇಂದಿಗೂ ಜೀವಂತವಿರುವ ಒಂದು ಅನಿಷ್ಟ ಪದ್ದತಿಯಾಗಿದೆ. ಬೆಂಗಳೂರು ನಗರ, ಚಿಕ್ಕಬಳ್ಳಾಪುರ, ಹಾಸನ, ಮಂಡ್ಯ ಮೈಸೂರು, ಚಿಕ್ಕಮಗಳೂರು, ಬೆಳಗಾವಿ. ಬಾಗಲಕೋಟೆ, ರಾಮನಗರ, ಕೋಲಾರ, ತುಮಕೂರು ಜಿಲ್ಲೆಗಳಲ್ಲಿ ಜೀತ ಪದ್ಧತಿಯ ಪ್ರಕರಣಗಳು ಹೆಚ್ಚಾಗಿ ಕಂಡುಬರುತ್ತಿವೆ. ಬಾಲ ಕಾರ್ಮಿಕನಾಗಿ ಕೆಲಸ ಮಾಡುವವರು ಮುಂದೆ ಜೀತಗಾರರಾಗಿ ಬದಲಾವಣೆ ಆಗುವ ಸಾಧ್ಯತೆ ಹೆಚ್ಚಿರುತ್ತದೆ. ಕರ್ನಾಟಕ ರಾಜ್ಯದಲ್ಲಿ ಜೀತಪದ್ಧತಿಯನ್ನು ನಿರ್ಮೂಲನೆಗೊಳಿಸಲು ಸರ್ಕಾರ ಹಲವಾರು ಯುಕ್ತ ಕ್ರಮಗಳನ್ನು ಕೈಗೊಂಡು ಕಾನೂನುಗಳನ್ನು ಜಾರಿಗೆ ತಂದಿದೆ. ಈ ಪದ್ಧತಿಯ ನಿವಾರಣೆಯು ಕೇವಲ ಒಂದು ಇಲಾಖೆಯ ಜವಾಬ್ದಾರಿಯಾಗಿರದೆ ಎಲ್ಲಾ ಇಲಾಖೆಗಳ ಹೊಣೆಯಾಗಿರುತ್ತದೆ. ಜೀತ ಪದ್ಧತಿಗೆ ಸಿಲುಕಿದ ವ್ಯಕ್ತಿಯನ್ನು ಗುರುತಿಸಿ ಅಂತಹವರಿಗೆ ಸರ್ಕಾರದ ಪುನರ್ವಸತಿ ಸೌಲಭ್ಯಗಳನ್ನು ತಲುಪಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಕೆಲಸ ಮಾಡಬೇಕು. ಈ ಕಾರ್ಯಕ್ಕೆ ಸರ್ಕಾರೇತರ ಸಂಸ್ಥೆಗಳು ಹಾಗೂ ಸಾರ್ವಜನಿಕರು ಸಹ ಜಿಲ್ಲಾಡಳಿತದೊಂದಿಗೆ ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಕೃಷಿ, ರೇಷ್ಮೆ, ತೋಟಗಾರಿಕೆ ತಾಕುಗಳಲ್ಲಿ, ಕಟ್ಟಡ ಕಾಮಗಾರಿ, ಬೋರ್ ವೆಲ್ ಕೊರೆಯುವ ಘಟಕಗಳಲ್ಲಿ, ನಗರ ಪ್ರದೇಶದ ಸಣ್ಣ ಕೈಗಾರಿಕೆಗಳು, ಜವಳಿ, ಸಾಮಿಲ್ ಗಳು, ಹೊಟೇಲ್, ಕಲ್ಲು ಕ್ವಾರಿ. ಮಾಂಸ ಸಂಸ್ಕರಣಾ ಘಟಕಗಳು, ಇಟ್ಟಿಗೆ ಕಾರ್ಖಾನೆ ಸೇರಿದಂತೆ ಹಲವು ವಲಯಗಳಲ್ಲಿ ಜೀತ ಕಾರ್ಮಿಕರು ಕಂಡುಬರುತ್ತಿದ್ದಾರೆ. ಅದರಲ್ಲೂ ವಲಸೆ ಜೀತ ಕಾರ್ಮಿಕರು ಪತ್ತೆಯಾಗುತ್ತಿರುವ ಪ್ರಕರಣಗಳು ಹೆಚ್ಚಾಗಿ ಕಾಣಸಿಗುತ್ತಿವೆ. ಇಂತಹ ಘಟನೆಗಳು ಕಂಡು ಬಂದಾಗ ಕಾನೂನಿನ ಅಡಿಯಲ್ಲಿ ಅವರಿಗೆ ಸೂಕ್ತ ರಕ್ಷಣೆಯನ್ನು ಕೊಡುವುದು ಹಾಗೂ ಇಂತಹ ಪದ್ಧತಿಗೆ ಕಾರಣರಾದ ಮುಖ್ಯಸ್ಥರು, ಮಾಲೀಕರು ಹಾಗೂ ಸಂಬಂಧ ಪಟ್ಟ ಎಲ್ಲರ ಮೇಲೆ ಕಾನೂನಿನ ಅಡಿಯಲ್ಲಿ ಶಿಕ್ಷೆಗೆ ಗುರಿಪಡಿಸಿದಾಗ ಈ ಪದ್ಧತಿಯನ್ನು ಸಂಪೂರ್ಣವಾಗಿ ನಿಯಂತ್ರಿಸಲು ಸಾಧ್ಯವಾಗಲಿದೆ. ಈ ಕಾರ್ಯವನ್ನು ಜಿಲ್ಲೆಯಲ್ಲಿ ಪರಿಣಾಮಕಾರಿಯಾಗಿ ಜರುಗಿಸುವಂತೆ ನಾನು ಈ ಮೂಲಕ ಅಧಿಕಾರಿಗಳಿಗೆ ಸೂಚಿಸುತ್ತೇನೆ.



ಜೀತ ಪದ್ಧತಿಯಿಂದ ವಿಮುಕ್ತರಾದವರಿಗೆ ಪುನರ್ವಸತಿ ಕ್ರಮದ ಭಾಗವಾಗಿ ನಿವೇಶನ ಹಾಗೂ ವಸತಿ ಸೌಲಭ್ಯ ಕಲ್ಪಿಸುವುದು, ಬ್ಯಾಂಕ್ ಗಳ ಮೂಲಕ ಸಾಲ ಸೌಲಭ್ಯಗಳನ್ನು ಕೊಡಿಸಿ ಆರ್ಥಿಕವಾಗಿ ಸಬಲೀಕರಣವಾಗುವುದಕ್ಕೆ ಸಹಾಯ ಮಾಡುವುದು, ವ್ಯಾಪಾರ ಮಾಡಲು ಉತ್ತೇಜನ ನೀಡಬೇಕಾಗಿರುತ್ತದೆ. ಜೊತೆಗೆ ಕೃಷಿ ಭೂಮಿ ಕೊಡಿಸಿ ಪುನರ್ವಸತಿ ಕಲ್ಪಿಸುವ ಜವಾಬ್ದಾರಿ ಅಧಿಕಾರಿಗಳ ಮೇಲಿದ್ದು, ಆ ಕಾರ್ಯವನ್ನು ಸಮರ್ಪಕವಾಗಿ ನಿರ್ವಹಿಸುವಂತೆ ಜಿಲ್ಲಾಧಿಕಾರಿಗಳು ತಿಳಿಸಿದರು.

ವಿಜಿಲೆನ್ಸ್ ಕಮಿಟಿಗಳು ಬಹಳ ಪರಿಣಾಮಕಾರಿಯಾಗಿ ಕೆಲಸ ಮಾಡುವುದು ಬಹಳ ಮುಖ್ಯ. ಜಿಲ್ಲಾದ್ಯಾಂತ ಆಕಸ್ಮಿಕ ದಾಳಿಗಳನ್ನು ಕೈಗೊಂಡು ಪ್ರಕರಣಗಳನ್ನು ದಾಖಲಿಸಿ ಸಕ್ಷಮ ಪ್ರಾಧಿಕಾರಗಳಿಂದ ಸೂಕ್ತ ಪರಿಹಾರ ಕ್ರಮಗಳನ್ನು ಒದಗಿಸುವುದರಿಂದ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಜೀತ ಪದ್ಧತಿ ಪ್ರಕರಣವನ್ನು ಶೂನ್ಯಕ್ಕೆ ತರುಬಹುದು ಆ ನಿಟ್ಟಿನಲ್ಲಿ ಕಂಕಣ ಬದ್ಧವಾಗಿ ಕಾರ್ಯನಿರ್ವಹಿಸೋಣ ಎಂದು ಜಿಲ್ಲಾಧಿಕಾರಿಗಳು ಕರೆ ನೀಡಿದರು.

ಈ ವೇಳೆ ಮಹಿಳಾ ಪೊಲೀಸ್ ಠಾಣೆಯ ಇನ್ಸ್ ಪೆಕ್ಟರ್ ನಿರ್ಮಲ ಹಾಗೂ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಅಭಿಲಾಷ್ ರವರು ಜೀತ ಪದ್ಧತಿ ನಿರ್ಮೂಲನೆಯ ಯುಕ್ತ ಕ್ರಮಗಳ ಬಗ್ಗೆ ತಿಳಿಸಿಕೊಟ್ಟರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಬಿ.ಶಿಲ್ಪ ರವರು ಜೀತ ಪದ್ಧತಿ ನಿರ್ಮೂಲನೆ ಕುರಿತು ಪ್ರತಿಜ್ಞಾನವಿಧಿ ಬೋಧಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ಪ್ರಕಾಶ್ ಜಿ.ಟಿ.ನಿಟ್ಟಾಲಿ, ಅಪರ ಜಿಲ್ಲಾಧಿಕಾರಿ ಡಾ. ಎನ್.ಭಾಸ್ಕರ್, ಪೊಲೀಸ್ ಉಪಾಧೀಕ್ಷಕ ಶಿವಕುಮಾರ್, ಚಿಂತಾಮಣಿ ವಿಭಾಗದ ಪೊಲೀಸ್ ಉಪಾಧೀಕ್ಷಕ ಮುರಳಿ, ಉಪ ವಿಭಾಗಾಧಿಕಾರಿ ಡಿ.ಹೆಚ್. ಅಶ್ವಿನ್, ಮಹಿಳಾ ಪೊಲೀಸ್ ಠಾಣೆಯ ಇನ್ಸ್ ಪೆಕ್ಟರ್ ನಿರ್ಮಲ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಅಭಿಲಾಷ್, ರಾಜ್ಯ ಮಹಿಳಾ ಘಟಕದ ಜೀವಿಕ ಸಂಚಾಲಕಿ ರತ್ನಮ್ಮ, ರೂಟ್ಸ್ ಫಾರ್ ಫ್ರೀಡಂ ಸಂಸ್ಥೆಯ ರವೀಂದ್ರ, ವಿವಿಧ ಇಲಾಖೆಗಳ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು, ಗ್ರಾಮ ಪಂಚಾಯಿತಿ ಅಧಿಕಾರಗಳು, ಜೀತ ವಿಮುಕ್ತಿಗಾಗಿ ಶ್ರಮಿಸುತ್ತಿರುವ ವಿವಿಧ ಸರ್ಕಾರೇತರ ಸಂಸ್ಥೆಗಳ ಸದಸ್ಯರು ಹಾಗೂ ಪದಾಧಿಕಾರಿಗಳು ಉಪಸ್ಥಿತರಿದ್ದರು.


# ಆರ್ಥಿಕ ಅಭಿವೃದ್ಧಿಗೆ ಸಾಕ್ಷ್ಯಿಯಾದ ಮಹಾ ಕುಂಭಮೇಳ

**ಪ್ರಯಾಗರಾಜ್:** ಜಗತ್ತಿನ ಅತಿ ದೊಡ್ಡ ಉತ್ಸವ ಹಾಗೂ 144 ವರ್ಷಗಳಿಗೆ ಒಮ್ಮೆ ನಡೆಯುವ ಮಹಾಕುಂಭ ಮೇಳ ಅನೇಕ ದೇಶಗಳ ಜನಸಂಖ್ಯಾ ಗಾತ್ರವನ್ನು ಮೀರಿಸಿದೆ. ಇದು ಆರ್ಥಿಕವಾಗಿ ಉತ್ತರಪ್ರದೇಶದ ಮೇಲೆ ಹೆಚ್ಚಿನ ಪರಿಣಾಮ ಬೀರಿದೆ. ಮಹಾಕುಂಭ ನಡೆಯುತ್ತಿರುವ ಪ್ರಯಾಗ ರಾಜ್ ನಗರದೆಲ್ಲೆಡೆ ಈಗ ಉದ್ಯಮಗಳ ಪ್ರವಾಹವಾಗಿರುವುದನ್ನು ಕಾಣ ಬಹುದಾಗಿದೆ. ಇದು ಸಾಮಾನ್ಯರು ಮತ್ತು ರಾಜ್ಯಕ್ಕೆ ಹೆಚ್ಚಿನ ಆದಾಯವನ್ನು ತಂದು ಕೊಟ್ಟಿದೆ. ಹಲವು ಜನರ ಹೊಟ್ಟೆಗೆ ಹಿಟ್ಟನ್ನು ತಂದುಕೊಟ್ಟಿದೆ.

ಭಾರತದಲ್ಲಿ ಧರ್ಮ, ರಾಜಕೀಯ ಮತ್ತು ಆರ್ಥಿಕತೆಯು ಆಳವಾಗಿ ಹೆಣೆದುಕೊಂಡಿದೆ. ಇದಕ್ಕೆ ಸ್ಪಷ್ಟ ಉದಾಹರಣೆ ಎಂದರೆ, ಆರು ವಾರಗಳ ಕಾಲ ನಡೆದ ಮಹಾಕುಂಭ ಉತ್ಸವ. ಇದಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ಅವರು ವಿಶಾಲವ್ಯಾಪ್ತಿಯಲ್ಲಿ ಮೂಲಸೌಕರ್ಯ ಕಲ್ಪಿಸಲು ಅನುದಾನದ ಪ್ರವಾಹವನ್ನೇ ಹರಿಸಿದ್ದಾರೆ.

ನಗರದಲ್ಲಿ ಊಹಿಸಲಾಸಾಧ್ಯವಾದ ಮಟ್ಟದಲ್ಲಿ ಪರಿವರ್ತನೆ ಕಾಣುತ್ತಿದ್ದೇವೆ. ಹೊಸ ರಸ್ತೆ, ಸೇತುವೆ, ಹೆಚ್ಚುವರಿ ವಿಮಾನ, ರೈಲು ಸೇವೆ, ಹೊಸ ಹೋಟೆಲ್?ಗಳು, ರೆಸ್ಟೋರೆಂಟ್? ಮತ್ತು ಕೆಲಸಗಾರರಿಗೆ ಬೇಡಿಕೆ ಹೆಚ್ಚುತ್ತಿರುವುದು ಕಂಡು ಬಂದಿದೆ. ಕುಂಭದಲ್ಲಿ ಅತಿ ದೊಡ್ಡ ಉದ್ಯೋಗ ಅವಕಾಶಗಳು ಸೃಷ್ಟಿಯಾಗುತ್ತಿದೆ. ಲಕ್ಷಾಂತರ ಜನರು ಕುಂಭಮೇಳಕ್ಕೆ ಆಗಮಿಸುತ್ತಿದ್ದು, ಅವರಿಗೆ ವಸತಿ, ಸಾರಿಗೆ ಊಟದ ವ್ಯವಸ್ಥೆಯ ಭಾಗವಾಗಿ ಅನೇಕರು ಉದ್ಯೋಗ ಕಂಡು ಕೊಂಡಿದ್ದಾರೆ.





ಕುಂಭ ಮೇಳದಲ್ಲಿ ಎಂಟು ಪಟ್ಟು ಜಾಸ್ತಿ ಆದಾಯ ಸಿಗ್ತಿದೆ: ಟ್ಯಾಕ್ಸಿ ಚಾಲಕನಾಗಿ ನಾನು ಪ್ರತಿನಿತ್ಯ 250 ಡಾಲರ್ ಸಂಪಾದಿಸುತ್ತಿದ್ದು, ಇದು ನನ್ನ ಸಾಮಾನ್ಯ ಆದಾಯಕ್ಕಿಂತ ಎಂಟು ಪಟ್ಟು ಹೆಚ್ಚಿದೆ. ನನ್ನ ಜೀವನದಲ್ಲೇ ಅತ್ಯಂತ ಬಿಡುವಿಲ್ಲದ ಕೆಲಸವನ್ನು ನಾನು ಇದೀಗ ಮಾಡುತ್ತಿದ್ದೇನೆ. 18ರಿಂದ 20 ಗಂಟೆ ಕೆಲಸ ಸಿಗುತ್ತಿದೆ. ಇದರಿಂದ ನಾನು ಮಾತ್ರವಲ್ಲ ಅನೇಕರು ಲಾಭ ಪಡೆಯುತ್ತಿದ್ದು, ಇದೊಂದು ಜೀವನ ಬದಲಾವಣೆ ಕಾರ್ಯಕ್ರಮವಾಗಿದೆ ಅಂತಾರೆ ಚಾಲಕ ಕುಮಾರ್.

ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ನೇತೃತ್ವದ ರಾಜ್ಯ ಸರ್ಕಾರ ಮಹಾಕುಂಭದ ಲಾಭದಾಯಕ ಸೇವಾ ಒಪ್ಪಂದಗಳನ್ನು ನಿಯಂತ್ರಿಸುತ್ತಿದೆ. ಆರ್ಥಿಕ ತಜ್ಞರ ಪ್ರಕಾರ ಧಾರ್ಮಿಕ ಆಚರಣೆಯ ಸರ್ಕಾರಿ ಅಂಕಿ– ಅಂಶಗಳನ್ನು ಸ್ವತಂತ್ರವಾಗಿ ಪರಿಶೀಲಿಸುವುದು ಅಸಾಧ್ಯವಾಗಿದೆ. ರಾಜ್ಯ ಸರ್ಕಾರದ ವರದಿ ಅನುಸಾರ, ಈಗಾಗಲೇ 435ಮಿಲಿಯನ್ ಯಾತ್ರಿಕರು ಪುಣ್ಯ ಸ್ನಾನ ಕೈಗೊಂಡಿದ್ದು, ಫೆ.26ರವರೆಗೆ ಈ ಮೇಳ ನಡೆಯಲಿದೆ. ಭಕ್ತರ ಅಂಕಿ– ಆಂಶಗಳನ್ನು ಕ್ಯಾಮೆರಾ ನೆಟ್‌ವರ್ಕ್‌ಗಳಿಂದ ಕೃತಕ ಬುದ್ಧಿಮತ್ತೆಯ ಮೌಲ್ಯಮಾಪನಗಳನ್ನು ಆಧರಿಸಿ ಪಡೆಯಲಾಗಿದೆ.

ಜಾಗತಿಕ ಹಬ್ಬಗಳನ್ನೂ ಮೀರಿಸಿದ ಕುಂಭಮೇಳ: ಆದಿತ್ಯನಾಥ್ ತಮ್ಮ ಯೋಜನೆಗಳ ಮೂಲಕ ಭಾರತದ ಆರ್ಥಿಕತೆಗೆ ಸುಮಾರು 24 ಬಿಲಿಯನ್ ಡಾಲರ್ ನಷ್ಟು ಕೊಡುಗೆ ನೀಡಲು ಯೋಜಿಸಿದ್ದಾರೆ. ಇದು ಅಮೆರಿಕ ಮತ್ತು ಕೆನಡಾ ಜನಸಂಖ್ಯೆಗಿಂತ ಹೆಚ್ಚಾಗಿದ್ದು, ಅರ್ಮೆನಿಯಾದ ವಾರ್ಷಿಕ ಜಿಡಿಪಿಗೆ ಸಮಾನವಾಗಿದೆ. ಇದು ಜಗತ್ತಿನ ಅತಿ ದೊಡ್ಡ ಜನಸಂಖ್ಯೆ ಹೊಂದಿರುವ ದೇಶಕ್ಕೂ ಅವರು ದಿಗ್ಭ್ರಮೆಗೊಳಿಸುವ ಅಂಕಿ –ಅಂಶಗಳಾಗಿವೆ.

ಉತ್ತರಾಖಂಡ ಮತ್ತು ಉತ್ತರ ಪ್ರದೇಶದಲ್ಲಿನ ಅಸೋಸಿಯೇಟೆಡ್ ಚೇಂಬರ್ಸ್ ಆಫ್ ಕಾಮರ್ಸ್ ಅಂಡ್ ಇಂಡಸ್ಟ್ರಿಯ ಅಧ್ಯಕ್ಷ ದೇವೇಂದ್ರ ಪ್ರತಾಪ್ ಸಿಂಗ್ ಹೇಳುವ ಪ್ರಕಾರ, ಇದು 30 ಬಿಲಿಯನ್ ಡಾಲರ್?ಗೂ ಮೀರಿದ್ದು, ಈ ಮಹಾ ಕಾರ್ಯಕ್ರಮದಿಂದ ನಮ್ಮ ಆರ್ಥಿಕತೆ ನಿಶ್ಚಿತವಾಗಿ ಬೆಳವಣಿಗೆ ಕಾಣುತ್ತಿದೆ . ಪ್ರತಿ ಹಂತದಲ್ಲೂ ನಾವು ಪ್ರಯೋಜನ ಪಡೆದುಕೊಳ್ಳುತ್ತಿರುವುದನ್ನು ಕಾಣುತ್ತಿದ್ದೇವೆ. ಇದು ಸಾರಿಗೆ, ಹೋಟೆಲ್, ಆಹಾರ ಸೇರಿದಂತೆ ಇತರ ವಲಯಗಳ ಮೇಲೆ ಪರಿಣಾಮ ಬೀರುತ್ತಿದೆ. ಇದರೊಂದಿಗಿನ ಧಾರ್ಮಿಕ ಪ್ರವಾಸವೂ ವಿಶಾಲ ವ್ಯಾಪ್ತಿಯಲ್ಲಿದ್ದು, ರಾಜ್ಯ ತೆರಿಗೆ ಮತ್ತು ಶುಲ್ಕ ಸೇರಿದಂತೆ ಇತರ ಮೂಲಗಳಿಂದ 3 ಬಿಲಿಯನ್ ಡಾಲರ್ ನಿರೀಕ್ಷಿಸಲಾಗುತ್ತಿದೆ.

ಭಾರತದ ಆರ್ಥಿಕತೆಯ ಹಬ್ಬದ ಚಕ್ರದಲ್ಲಿ ಕುಂಭಮೇಳ ಅತಿ ದೊಡ್ಡ ಚಾಲಕನಾಗಿದ್ದು, ಮನೆಮಾತಾಗಿದ್ದ ಅನೇಕ ಬ್ರಾಂಡ್‌ಗಳು ಇಲ್ಲಿ ಅವಕಾಶ ಪಡೆದು, ತಮ್ಮ ಅಂಗಡಿಗಳನ್ನು ತೆರೆಯುತ್ತಿದ್ದಾರೆ. ನದಿ ಪಕ್ಕದಲ್ಲೇ ಟೆಂಟ್ ಹಾಕಲಾಗಿದ್ದು, ಇಲ್ಲಿ ಆಹಾರ, ಬಟ್ಟೆಯಿಂದ ಹಿಡಿದು ಪ್ರಾರ್ಥನಾ ಸಾಮಗ್ರಿ, ಹೂವು ಸೇರಿದಂತೆ ಹಬ್ಬದ ಸ್ಮರಣಿಕೆವರೆಗೆ ವಸ್ತುಗಳು ಮಾರಾಟವಾಗುತ್ತಿವೆ.

ಕುಂಭಮೇಳ ಅದ್ಭುತವೇ ಸರಿ: ಸಿಎಂ ಯೋಗಿ ಆದಿತ್ಯನಾಥ್ ಕಚೇರಿಯ ಸಂಜೀವ್ ಸಿಂಗ್ ಪ್ರಕಾರ, 7 ಮಿಲಿಯನ್ ಜನರು ಭಾಗಿಯಾಗುವ ಬ್ರೆಜಿಲ್?ನ ರಿಯೋ ಹಬ್ಬ, ಎರಡು ಮಿಲಿಯನ್ ಜನರು ಭಾಗಿಯಾಗುವ ಸೌದಿ ಅರೇಬಿಯಾದ ಮುಸ್ಲಿಂ ಹಜ್‌ನಂತಹ ಜಾಗತಿಕ ಹಬ್ಬಗಳನ್ನು ಕುಂಭ ಮೇಳಗಳನ್ನೂ ಸಣ್ಣದಾಗಿ ಮಾಡಿದೆ. ಇದೊಂದು ಅದ್ಭುತ ಎಂದಿದ್ದಾರೆ.

ಹೋಟೆಲ್ ಮಾಲೀಕ ದೀಪಕ್ ಕುಮಾರ್ ಮೆಹ್ರೋತ್ರಾ ಮಾತನಾಡಿ, ನನ್ನ ಎರಡು ಹೋಟೆಲ್‌ಗಳು ಸಂಪೂರ್ಣವಾಗಿ ಬುಕ್ ಆಗಿದ್ದು, ಭಾರಿ ಮಟ್ಟದಲ್ಲಿ ಏರಿಕೆ ಕಂಡು ಬಂದಿದೆ. ನಗರದಲ್ಲಿ ಎಲ್ಲರೂ ಉತ್ತಮ ವ್ಯಾಪಾರ ಮಾಡುತ್ತಿದ್ದಾರೆ. ರೂಂಗಳು ಲಭ್ಯವಿದ್ದರೆ, ಅದರ ದರಗಳು 10ರಷ್ಟು ಏರಿಕೆ ಕಂಡಿದ್ದು, ಟಾಪ್ ಹೋಟೆಲ್‌ಗಳ ಒಂದು ರಾತ್ರಿಗೆ 900 ರಿಂದ 1200 ಡಾಲರ್ ದರ ನಿಗದಿ ಮಾಡುತ್ತಿವೆ. ಯಾತ್ರಿಕರ ಬೇಡಿಕೆ ಪೂರೈಸುವುದೇ ಸವಾಲಾಗಿದೆ. ಬಾಣಸಿಗರು, ಚಾಲಕರು, ಎಲೆಕ್ಟ್ರಿಷಿಯನ್?ಗಳು ಅತಿ ಹೆಚ್ಚು ಬೇಡಿಕೆ ಪಡೆದಿದ್ದಾರೆ.

62 ವರ್ಷದ ಟ್ರಾವೆಲ್ ಏಜೆಂಟ್ ಶಹಿದ್ ಬೇಗ್ ರೂಮಿ ಮಾತನಾಡಿ, ಪ್ರಯಾಗರಾಜ್‌ನಿಂದ 50 ಮೈಲಿ ದೂರದಲ್ಲಿನ ಸಣ್ಣ ಪ್ರದೇಶಗಳು ಇದೀಗ ಬ್ಯುಸಿಯಾಗಿವೆ. ಜನರು ಅಲ್ಲಿಯು ಕೂಡ ವಾಸ್ತವ್ಯ ಹೂಡುತ್ತಿದ್ದಾರೆ. ಇದು ಪ್ರಯಾಗ್‌ರಾಜ್ ಮಾತ್ರವಲ್ಲದೇ ಹಿಂದೂ ಧಾರ್ಮಿಕ ಕ್ಷೇತ್ರಗಳಾದ ಅಯೋಧ್ಯಾ ಮತ್ತು ವಾರಾಣಸಿ ಮೇಲೂ ಭಾರಿ ಪರಿಣಾಮ ಬೀರುತ್ತಿದೆ. ಈ ರೀತಿಯ ಬೃಹತ್ ಕಾರ್ಯಕ್ರಮವೂ ಹೊಸ ಬೆಳವಣಿಗೆ ಮತ್ತು ಹೊಸ ಅವಕಾಶಗಳ ಸೃಷ್ಟಿಗೆ ಕಾರಣವಾಗುತ್ತಿದೆ ಎಂದು ಹೇಳಿದ್ದಾರೆ.



## ಎಇಇ ಮೇನ್ಸ್ ಫಲಿತಾಂಶ: 100ಕ್ಕೆ 100ರಷ್ಟು ಅಂಕ ಪಡೆದ 14 ವಿದ್ಯಾರ್ಥಿಗಳು

ಪಾಟ್ನಾ: ಜೆಇಇ ಮೇನ್ಸ್ 2025 ರ ಜನವರಿ ಅವಧಿಯ ಫಲಿತಾಂಶಗಳು ಬಿಡುಗಡೆಯಾಗಿದ್ದು, 14 ವಿದ್ಯಾರ್ಥಿಗಳು ಶೇ 100ಕ್ಕೆ 100ರಷ್ಟು ಅಂಕಗಳನ್ನು ಪಡೆದುಕೊಂಡು ಟಾಪರ್? ಆಗಿ ಹೊರ ಹೊಮ್ಮಿದ್ದಾರೆ. ಕರ್ನಾಟಕದ ಕುಶಾಗ್ರ ಗುಪ್ತಾ ಸಹ 100ಕ್ಕೆ ನೂರು ಅಂಕ ಪಡೆದಿದ್ದಾರೆ.

ಬಿಹಾರದ ಪಾಣಿನಿ ಶರ್ಮಾ ಶೇ 99.9942 ಅಂಕ ಗಳಿಸುವ ಮೂಲಕ ಬಿಹಾರ ರಾಜ್ಯದ ಟಾಪರ್ ಆಗಿ ಹೊರಹೊಮ್ಮಿದ್ದಾರೆ. 23ರ ಅಖಿಲ ಭಾರತ ಶ್ರೇಣಿಯೊಂದಿಗೆ (ಂಖಖ) ಪಾಣಿನಿ ಹಾಜಿಪುರ, ವೈಶಾಲಿ ಜಿಲ್ಲೆ ಸೇರಿದಂತೆ ಇಡೀ ಬಿಹಾರ ರಾಜ್ಯಕ್ಕೆ ಹೆಮ್ಮೆ ತಂದಿದ್ದಾರೆ. ಸಂಜಯ್ ಶರ್ಮಾ ಮತ್ತು ನಿಭಾ ಕುಮಾರಿಯವರ ಮಗನಾದ ಪಾಣಿನಿ ತನ್ನ ಶಾಲಾ ಶಿಕ್ಷಣವನ್ನು ಪಾಟ್ನಾದಲ್ಲಿ ಪೂರ್ಣಗೊಳಿಸಿದ್ದರು. ಖಗೋಳವಿಜ್ಞಾನ ಮತ್ತು ಖಗೋಳ ಭೌತಶಾಸ್ತ್ರದಲ್ಲಿ ತೀವ್ರ ಆಸಕ್ತಿ ಹೊಂದಿರುವ ಪಾಣಿನಿ ಯಾವಾಗಲೂ ಅಸಾಧಾರಣವಾದ ವಿದ್ಯಾರ್ಥಿ ಎಂದು ಅವರ ತಂದೆ ಸಂತಸ ಹಂಚಿಕೊಂಡಿದ್ದಾರೆ.

ಅಂತಾರಾಷ್ಟ್ರೀಯ ಸ್ಪರ್ಧೆಗಳಲ್ಲಿ ಪಾಣಿನಿ ಗಮನಾರ್ಹ ಸಾಧನೆ ಮಾಡುವ ಆತನ ಶೈಕ್ಷಣಿಕ ಉತ್ಕೃಷ್ಟತೆ ಸಾಬೀತಾಗಿದೆ ಎಂದು ಅವರು ಹೇಳಿಕೊಂಡಿದ್ದಾರೆ.

ಪಾಣಿನಿ, ಬ್ರೆಜಿಲ್‌ನ ರಿಯೊ ಡಿ ಜನೈರೊದಲ್ಲಿ 2024 ರ ಖಗೋಳವಿಜ್ಞಾನ ಮತ್ತು ಆಸ್ಟ್ರೋಫಿಸಿಕ್ಸ್ 17 ನೇ ಅಂತರರಾಷ್ಟ್ರೀಯ ಒಲಂಪಿಯಾಡ್‌ನಲ್ಲಿ ಬೆಳ್ಳಿ ಪದಕವನ್ನು ಗೆದ್ದಿದ್ದರು. ಅಷ್ಟೇ ಅಲ್ಲ ಔಅಖಿಅ 2023 (ಖಗೋಳಶಾಸ್ತ್ರ ಮತ್ತು ಖಗೋಳ ಭೌತಶಾಸ್ತ್ರ)ಕ್ಕೆ ಕೂಡಾ ಆಯ್ಕೆಯಾಗಿ ಗಮನ ಸೆಳೆದಿದ್ದರು ಅದೂ ಅಲ್ಲದೇ. ಖಓಕಊಔ, ಖಓಅಊಔ ಮತ್ತು ಖಓಂಔ ಗೆ ಅರ್ಹತೆ ಪಡೆಯುವಲ್ಲಿ ಯಶಸ್ವಿಯಾಗಿದ್ದರು. ಈ ವೇಳೆ ಅವರು ಖಗೋಳಶಾಸ್ತ್ರ ವನ್ನು ಅವರ ವಿಶೇಷತೆಯಾಗಿ ಆಯ್ಕೆ ಮಾಡಿಕೊಂಡು ಅಭ್ಯಾಸ ನಡೆಸಿದ್ದರು.

ಪಾಣಿನಿ ಯಾವಾಗಲೂ ಖಗೋಳಶಾಸ್ತ್ರದ ಬಗ್ಗೆ ಆಳವಾದ ಉತ್ಕಟತೆಯನ್ನು ಹೊಂದಿದ್ದಾರೆ. ಅನೇಕ ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿದ್ದಾರೆ. ಎಇಇ ಮೇನ್ಸ್ ಯಶಸ್ಸು ಅವರ ಕಿರೀಟಕ್ಕೆ ಮತ್ತೊಂದು ಗರಿಯಷ್ಟೇ ಎಂದು ಪಾಣಿನಿಯ ತಂದೆ ಸಂಜಯ್ ಶರ್ಮಾ ಮಗನ ಬಗ್ಗೆ ಹೆಮ್ಮೆ ವ್ಯಕ್ತಪಡಿಸಿದ್ದಾರೆ.

ಪಾಣಿನಿ ಜೊತೆಗೆ, ಬಿಹಾರದ ಮತ್ತೊಬ್ಬ ವಿದ್ಯಾರ್ಥಿ ಅಭಿಷೇಕ್ ಕುಮಾರ್ ಶೇ 99.8738 ಶೇಕಡಾ ಅಂಕ ಗಳಿಸುವ ಮೂಲಕ ಬಿಹಾರಕ್ಕೆ ಹೆಮ್ಮೆ ತಂದಿದ್ದಾರೆ.

ಈ ಇಬ್ಬರ ಅಸಾಧಾರಣ ಸಾಧನೆಯು ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಬಿಹಾರದ ವಿದ್ಯಾರ್ಥಿಗಳ ಹೆಚ್ಚುತ್ತಿರುವ ಪ್ರಾಬಲ್ಯವನ್ನು ಒತ್ತಿ ಹೇಳುತ್ತಿದೆ.

ಜೆಇಇ ಮೇನ್ಸ್ 2025ರ ಪರೀಕ್ಷೆಯಲ್ಲಿ ಒಟ್ಟು 13,11,544 ವಿದ್ಯಾರ್ಥಿಗಳು ಪರೀಕ್ಷೆಗೆ ನೋಂದಾಯಿಸಿಕೊಂಡಿದ್ದರು. 12,58,136 (ಶೇ 95.93) ಅಭ್ಯರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು. ಜನವರಿ 22–24 ಮತ್ತು ಜನವರಿ 28–29 ರಂದು ದೇಶದ 304 ನಗರಗಳ 618 ಕೇಂದ್ರಗಳಲ್ಲಿ ಪರೀಕ್ಷೆ ನಡೆದಿತ್ತು. ಈ ಬಾರಿ 14 ವಿದ್ಯಾರ್ಥಿಗಳು ಶೇ 100ಕ್ಕೆ 100ರಷ್ಟು ಅಂಕಗಳನ್ನು ಗಳಿಸಿದ್ದಾರೆ. ಜೆಇಇ ಮೇನ್ಸ್ 2025 ರಲ್ಲಿ ಬಿಹಾರದ ವಿದ್ಯಾರ್ಥಿಗಳ ಅತ್ಯುತ್ತಮ ಸಾಧನೆ ಮಾಡಿದ್ದಾರೆ. ವಿಶೇಷವಾಗಿ ಪಾಣಿನಿ ಶರ್ಮಾ ಅವರ ರಾಜ್ಯ – ಪ್ರಮುಖ ಸಾಧನೆಯು ಈ ಪ್ರದೇಶದ ವಿದ್ಯಾರ್ಥಿಗಳ ಸಮರ್ಪಣೆ, ಕಠಿಣ ಪರಿಶ್ರಮ ಮತ್ತು ಹೆಚ್ಚುತ್ತಿರುವ ಶೈಕ್ಷಣಿಕ ಉತ್ಕೃಷ್ಟತೆಯನ್ನು ಪ್ರತಿಬಿಂಬಿಸುತ್ತದೆ.



### 14 ಟಾಪರ್‌ಗಳ ಲಿಸ್ಟ್ ಹೀಗಿದೆ

250310009213 । ಆಯುಷ್ ಸಿಂಗಲ್ । ರಾಜಸ್ಥಾನ, 250310034720 । ಕುಶಾಗ್ರ ಗುಪ್ತಾ । ಕರ್ನಾಟಕ, 250310133572 । ದಕ್ಷ । ದೆಹಲಿ, 250310143408 । ಹರ್ಷಾ ಜಾ । ದೆಹಲಿ, 250310150634 । ರಜಿತ್ ಗುಪ್ತಾ । ರಾಜಸ್ಥಾನ, 250310210195 । ಶ್ರೇಯಸ್ ಲೋಹಿಯಾ । ಉತ್ತರಪ್ರದೇಶ, 250310236696 । ಸಕ್ಷಮ್ ಜಿಂದಾಲ್ । ರಾಜಸ್ಥಾನ, 250310254844 । ಸೌರವ್ । ಉತ್ತರಪ್ರದೇಶ, 250310299968 । ವಿಶಾದ್ ಜೈನ್ । ಮಹಾರಾಷ್ಟ್ರ, 250310312145 । ಅರ್ನವ್ ಸಿಂಗ್ । ರಾಜಸ್ಥಾನ, 250310391420 । ಶಿವನ್ ವಿಕಾಶ ತೋಹಸಿನ್‌ವಾಲ್ । ಗುಜರಾತ್, 250310564942 । ಸಾಯಿ ಮನೋಜ್ಞ ಗುತಿಕೊಂಡ । ಆಂಧ್ರಪ್ರದೇಶ, 250310569571 । ಓಂ ಪ್ರಕಾಶ ಬೆಹ್ರಾ । ರಾಜಸ್ಥಾನ, 250310746461 । ಬಾನಿ ಬ್ರಾತಾ ಮಾಜಿ । ತೆಲಂಗಾಣ

## ಡಿಸೆಂಬರ್ ವೇಳೆಗೆ ಬಾಂಗ್ಲಾದಲ್ಲಿ ಚುನಾವಣೆ

ಢಾಕಾ: ಡಿಸೆಂಬರ್ ವೇಳೆಗೆ ದೇಶದಲ್ಲಿ ಸಾರ್ವತ್ರಿಕ ಚುನಾವಣೆಗಳನ್ನು ನಡೆಸಲು ಸಿದ್ಧತೆಗಳು ಆರಂಭಗೊಂಡಿವೆ ಎಂದು ಬಾಂಗ್ಲಾದೇಶದ ಚುನಾವಣಾ ಆಯೋಗ ಮಂಗಳವಾರ ಹೇಳಿದೆ. ಕಳೆದ ಒಂದು ವಾರದಿಂದ ದೇಶಾದ್ಯಂತ ಮತ್ತೆ ಹಿಂಸಾಚಾರ ಭುಗಿಲೆದ್ದಿರುವುದರಿಂದ ಚುನಾವಣೆ ನಡೆಸುವ ಪ್ರಸ್ತಾಪಕ್ಕೆ ಮುಹಮ್ಮದ್ ಯೂನುಸ್ ನೇತೃತ್ವದ ಮಧ್ಯಂತರ ಸರ್ಕಾರ ಅನಿವಾರ್ಯವಾಗಿ ಒಪ್ಪಿಕೊಂಡಿದೆ ಎಂದು ಮೂಲಗಳು ತಿಳಿಸಿವೆ.

ಡಿಸೆಂಬರ್ ಹೊತ್ತಿಗೆ ಚುನಾವಣೆ ನಡೆಸುವುದಾಗಿ ಮಾಜಿ ಪ್ರಧಾನಿ ಖಲೀದಾ ಜಿಯಾ ಅವರ ಬಾಂಗ್ಲಾದೇಶ್ ನ್ಯಾಷನಲಿಸ್ಟ್ ಪಾರ್ಟಿ (ಬಿಎನ್ ಪಿ)ಗೆ ಯೂನುಸ್ ಭರವಸೆ ನೀಡಿದ ಒಂದು ದಿನದ ನಂತರ ಚುನಾವಣಾ ಆಯೋಗವು ಈ ಹೇಳಿಕೆ ನೀಡಿದೆ.

ಈ ವರ್ಷದ ಡಿಸೆಂಬರ್‌ನಲ್ಲಿ ನಡೆಯಲಿರುವ ಸಾರ್ವತ್ರಿಕ ಚುನಾವಣೆಗೆ ನಾವು ತಯಾರಿ ನಡೆಸುತ್ತಿದ್ದೇವೆ ಎಂದು ಚುನಾವಣಾ ಆಯುಕ್ತ ಅಬುಲ್ ಫಜಲ್ ಮೊಹಮ್ಮದ್ ಸನಾವುಲ್ಲಾ ಸುದ್ದಿಗಾರರಿಗೆ ತಿಳಿಸಿದರು. ವಿಶ್ವಸಂಸ್ಥೆ, ಯುರೋಪಿಯನ್ ಯೂನಿಯನ್ (ಇಯು) ಪ್ರತಿನಿಧಿಗಳು ಹಾಗೂ 17 ಪಾಶ್ಚಿಮಾತ್ಯ ಮತ್ತು




ಇತರ ದೇಶಗಳ ರಾಜತಾಂತ್ರಿಕರೊಂದಿಗೆ ಸಭೆ ನಡೆಸಿದ ನಂತರ ಅವರು ಮಾತನಾಡಿದರು.

ಸರ್ಕಾರ ನೇಮಿಸಿದ ಆಯೋಗವು ಪ್ರಸ್ತಾಪಿಸಿದಂತೆ ಸ್ಥಳೀಯ ಸರ್ಕಾರಗಳ ಚುನಾವಣೆಗಳ ಬದಲು, ರಾಷ್ಟ್ರೀಯ ಚುನಾವಣೆ ನಡೆಸುವುದು ನಮ್ಮ ಆದ್ಯತೆಯಾಗಿದೆ ಎಂದು ರಾಜತಾಂತ್ರಿಕರಿಂದ ಸುತ್ತುವರೆದಿದ್ದ ಸನಾವುಲ್ಲಾ ಹೇಳಿದರು.

"ಮುಖ್ಯ ಸಲಹೆಗಾರ ಯೂನುಸ್ ಈ ಹಿಂದೆ ಎರಡು ಗಡುವುಗಳನ್ನು ನೀಡಿದ್ದರು. ಅದರಲ್ಲಿ ಮೊದಲಿನ ಗಡುವಿನೊಳಗೆ ಚುನಾವಣೆ ನಡೆಸಲು ನಾವು ತಯಾರಿ ನಡೆಸುತ್ತಿದ್ದೇವೆ" ಎಂದು ಅವರು ಹೇಳಿದರು.

ಸಭೆಯಲ್ಲಿ ಭಾಗವಹಿಸಿದ್ದ ವಿಶ್ವಸಂಸ್ಥೆಯ ನಿವಾಸಿ ಪ್ರತಿನಿಧಿ ಸ್ಟೀಫನ್ ಲಿಲ್ಲರ್, ಬಾಂಗ್ಲಾದೇಶದಲ್ಲಿ ಮುಂಬರುವ ಚುನಾವಣೆಗಳು ಪಾರದರ್ಶಕವಾಗಿರಲಿವೆ ಎಂದು ವಿಶ್ವಸಂಸ್ಥೆ ನಿರೀಕ್ಷಿಸಿದೆ ಮತ್ತು ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆ ನಡೆಸಲು ನಾವು ಚುನಾವಣಾ ಆಯೋಗವನ್ನು ಬೆಂಬಲಿಸುತ್ತಿದ್ದೇವೆ ಎಂದು ಹೇಳಿದರು. ಆದರೆ ಮುಕ್ತ ಚುನಾವಣೆ ನಡೆಸಲು ಇರುವ ಸಮಸ್ಯೆಗಳ ಬಗ್ಗೆ ಪ್ರಶ್ನಿಸಿದಾಗ, ಆ ವಿಷಯದ ಬಗ್ಗೆ ಮಾತನಾಡುವುದು ನನ್ನ ಅಧಿಕಾರ ವ್ಯಾಪ್ತಿಯಲ್ಲಿ ಇಲ್ಲ ಎಂದರು.


ಹದಗೆಡುತ್ತಿರುವ ಕಾನೂನು ಮತ್ತು ಸುವ್ಯವಸ್ಥೆ ಪರಿಸ್ಥಿತಿ ಹಾಗೂ ಅನಿಶ್ಚಿತ ಆರ್ಥಿಕ ಪರಿಸ್ಥಿತಿಗಳ ಕಾರಣಗಳನ್ನು ಉಲ್ಲೇಖಿಸಿ ಪಕ್ಷದ ಬೇಡಿಕೆಯ ಪ್ರಕಾರ ಡಿಸೆಂಬರ್ ವೇಳೆಗೆ ಚುನಾವಣೆಗಳನ್ನು ನಡೆಸುವುದಾಗಿ ಮುಖ್ಯ ಸಲಹೆಗಾರ ಯೂನುಸ್ ಖಲೀದಾ ಜಿಯಾ ಅವರ ಬಿಎನ್‌ಪಿಗೆ ಭರವಸೆ ನೀಡಿದ್ದಾರೆ.

ವಿದ್ಯಾರ್ಥಿ ಚಳವಳಿಯ ನೇತೃತ್ವದ ನಡೆದ ಕ್ಷಿಪ್ರ ದಂಗೆಯ ನಂತರ ಆಗಿನ ಪ್ರಧಾನಿ ಶೇಖ್ ಹಸೀನಾ ಅವರ ಅವಾಮಿ ಲೀಗ್ ಆಡಳಿತವನ್ನು ಪದಚ್ಯುತಗೊಳಿಸಿದ ಮೂರು ದಿನಗಳ ನಂತರ, ಆಗಸ್ಟ್ 8, 2024 ರಂದು ಯೂನುಸ್ ಬಾಂಗ್ಲಾದೇಶದ ಮಧ್ಯಂತರ ಸರ್ಕಾರದ ಉಸ್ತುವಾರಿ ವಹಿಸಿಕೊಂಡಿದ್ದಾರೆ.

## ವಾರಾಣಸಿ–ಕೋಲ್ಕತ್ತಾ ಪ್ರಯಾಣ ಇನ್ಮುಂದೆ ತ್ರಾಸದಾಯಕವಲ್ಲ

**ವಾರಾಣಸಿ:** ಉತ್ತರ ಪ್ರದೇಶದ ವಾರಾಣಸಿಯಿಂದ ಪಶ್ಚಿಮ ಬಂಗಾಳದ ಪ್ರಯಾಣ 710 ಕಿ.ಮೀ. ಆದರೆ, ಇಷ್ಟು ದೂರದ ಪ್ರಯಾಣ ಇನ್ಮುಂದೆ ತ್ರಾಸದಾಯಕವಲ್ಲ. ಕಾರಣ, ಷಟ್ಪಥ ಹೆದ್ದಾರಿ ಕೋಲ್ಕತ್ತಾ ಎಕ್ಸ್‌ಪ್ರೆಸ್‌ವೇ ನಿರ್ಮಾಣವಾಗುತ್ತಿದ್ದು, ಈ ಪ್ರಯಾಣವನ್ನು ಕೇವಲ 6 ಗಂಟೆಯಲ್ಲಿ ಮುಗಿಸಬಹುದಾಗಿದೆ. ಈ ರೀತಿಯ ಗ್ರೀನ್ ಫೀಲ್ಡ್ ಯೋಜನೆಯೊಂದು ಸಿದ್ಧವಾಗಿದ್ದು, 35,000 ಕೋಟಿ ರೂ. ವೆಚ್ಚದಲ್ಲಿ ಇದನ್ನು ನಿರ್ಮಿಸುವ ಗುರಿ ಹೊಂದಲಾಗಿದೆ. ಇದರಿಂದ ಪ್ರಯಾಣಿಕರಿಗೆ ಮತ್ತು ಸರಕು – ಸಾಗಣೆ ವಾಹನದ ಸಲಭ ಪ್ರಯಾಣಕ್ಕೆ ಅನುಕೂಲಕರವಾಗಲಿದೆ.

ರಾಂಚಿ ಕೋಲ್ಕತ್ತಾ ಎಕ್ಸ್‌ಪ್ರೆಸ್‌ವೇ ಎಂದು ಪರಿಚಿತವಾಗಿರುವ ಈ ಯೋಜನೆಗೆ ಪ್ರಧಾನಿ ನರೇಂದ್ರ ಮೋದಿ ಅವರು ಕಳೆದ ವರ್ಷ ಅಂದರೆ 2024ರ ಫೆಬ್ರವರಿ 23ರಂದು ಶಂಕು ಸ್ಥಾಪನೆ ಮಾಡಿದ್ದರು. ಇದೀಗ ಅದಕ್ಕೆ ಹೆಚ್ಚುವರಿ ಹೊಸ ಮಾರ್ಗ ಸೇರ್ಪಡನೆಗೊಂಡಿದ್ದು, ಐತಿಹಾಸಿಕ ಗ್ರಾಂಡ್



ಟ್ರಂಕ್ ರಸ್ತೆಯು ವಾರಾಣಸಿ ಮತ್ತು ಕೋಲ್ಕತ್ತಾ ಸಂಪರ್ಕಿಸಲಿದೆ. ವಾರಾಣಸಿ – ಕೋಲ್ಕತ್ತಾ ಎಕ್ಸ್‌ಪ್ರೆಸ್‌ವೇ ಕೋಲ್ಕತ್ತಾದ ಮೂಲಕ ವಾರಾಣಸಿ, ರಾಂಚಿ ಮತ್ತು ಜಾರ್ಖಂಡ್ ಸಂಪರ್ಕ ಹೊಂದಿದೆ.

ಈ ಕುರಿತು ಮಾತನಾಡಿರುವ ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಪ್ರಾದೇಶಿಕ ಅಧಿಕಾರಿ ಎಸ್‌ಕೆ ಆರ್ಯಾ, ನಮ್ಮ ಗ್ರೀನ್‌ಫೀಲ್ಡ್ ಯೋಜನೆ ವಾರಾಣಸಿಯಿಂದ ಕೋಲ್ಕತ್ತಾವನ್ನು ಹಾಗೂ ವಾರಾಣಸಿಯಿಂದ ಚಂದೌಲಿಯ ಮಾರ್ಗವನ್ನು ಹೊಂದಿದ್ದು, ಜನವರಿಯಿಂದ ಇದರ ಕೆಲಸ ಆರಂಭವಾಗಿದೆ. ರಾಷ್ಟ್ರೀಯ ಹೆದ್ದಾರಿ 2 ರ ಸಂಚಾರದ ಒಂದು ವಿಭಾಗವು ಕೋಲ್ಕತ್ತಾದ ಜಿಟಿ ರಸ್ತೆಗೆ ತಿರುಗಿಸಲಾಗುವುದು ಎಂದಿದ್ದಾರೆ.

ಜಿಟಿ ರಸ್ತೆ ಹೊರತಾಗಿ ನಮಗೆ ಯಾವುದೇ ಪರ್ಯಾಯ ಮಾರ್ಗವಿರಲಿಲ್ಲ. ಹೊಸ ಎಕ್ಸ್‌ಪ್ರೆಸ್‌ವೇ ಪರ್ಯಾಯವಾಗಿದ್ದು, ಇದು ಜಿಟಿ ರಸ್ತೆಯ ಟ್ರಾಫಿಕ್ ದಟ್ಟಣೆಯನ್ನು ಕಡಿಮೆ ಮಾಡುತ್ತದೆ. ಪ್ರಯಾಣಿಕರು ಕೋಲ್ಕತ್ತಾಕ್ಕೆ ತೆರಳಲು ಎರಡು ಆಯ್ಕೆಯನ್ನು ಹೊಂದಿದ್ದಾರೆ. ಈ ಯೋಜನೆಯು 1,500 ಕೋಟಿಯದ್ದಾಗಿದೆ.

ಗೋರಖ್‌ಪುರ್, ಅಜಂಗಢ, ಮೌ, ಬಲ್ಲಿಯಾ, ಗಾಜಿಪುರ್, ಜನೌಪುರ್, ಪ್ರಯಾಗ್, ಲಕ್ನೋ ಮತ್ತು ದೆಹಲಿ ಪ್ರಯಾಣಿಕರು ಚದೌಲಿ ಮೂಲಕ ಬಿಹಾರ, ಜಾರ್ಖಂಡ್, ಬಂಗಾಳ, ಕೋಲ್ಕತ್ತಾಗೆ ಹೋಗಬಹುದು. ಇದರಿಂದ ಈ ಮುಂಚೆ ನಗರದ ಮಧ್ಯಭಾಗಕ್ಕೆ ಬರುವುದನ್ನು ತಪ್ಪಿಸಬಹುದು.

ಈ ಎಕ್ಸ್‌ಪ್ರೆಸ್‌ವೇ ನೇರವಾಗಿ ಕೋಲ್ಕತ್ತಾ ಎಕ್ಸ್‌ಪ್ರೆಸ್‌ವೇಗೆ ಸಂಪರ್ಕ ಕಲ್ಪಿಸಲಿದ್ದು ವಾರಾಣಸಿಯಿಂದ ಕೋಲ್ಕತ್ತಾ ಪ್ರಯಾಣವನ್ನು 12 ರಿಂದ 14 ಗಂಟೆ ಬದಲಾಗಿ 6ಗಂಟೆಗೆ ಇಳಿಸಲಿದೆ ಎಂದರು.

## ಐಇಡಿ ಸ್ಫೋಟ: ಇಬ್ಬರು ಯೋಧರು ಹುತಾತ್ಮ

**ಜಮ್ಮು ಕಾಶ್ಮೀರ:** ಜಮ್ಮು ವಲಯದ ಗಡಿ ನಿಯಂತ್ರಣ ರೇಖೆ (ಎಲ್‌ಒಸಿ) ಬಳಿ ಮಂಗಳವಾರ ಸಂಭವಿಸಿದ ಸುಧಾರಿತ ಸ್ಫೋಟಕ ಸಾಧನ (ಐಇಡಿ) ಸ್ಫೋಟದಲ್ಲಿ ಇಬ್ಬರು ಸೇನಾ ಸಿಬ್ಬಂದಿ ಸಾವನ್ನಪ್ಪಿದ್ದಾರೆ. ಜಮ್ಮುವಿನ ಅಖ್ನೂರ್ ಸೆಕ್ಟರ್?ನ ಲಾಲಿಯಾಲಿಯಲ್ಲಿ ಸೇನಾ ಸಿಬ್ಬಂದಿ ಗಡಿಯ ಬಳಿ ಗಸ್ತು ತಿರುಗುತ್ತಿದ್ದಾಗ ಸ್ಫೋಟ ಸಂಭವಿಸಿದೆ ಎಂದು ಸೇನೆ ತಿಳಿಸಿದೆ.

ಸ್ಫೋಟ ಸಂಭವಿಸಿರುವುದನ್ನು ವೈಟ್ ನೈಟ್ ಕಾರ್ಪ್ಸ್ ದೃಢಪಡಿಸಿದೆ. ಈ ಬಗ್ಗೆ ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದು, "ಲಾಲಿಯಾಲಿ ಅಖ್ನೂರ್ ಸೆಕ್ಟರ್‌ನಲ್ಲಿ ಗಡಿ ಗಸ್ತು ನಡೆಯುತ್ತಿದ್ದ ವೇಳೆ ಶಂಕಿತ ಸುಧಾರಿತ ಸ್ಫೋಟಕ ಸಾಧನ (ಐಇಡಿ) ಸ್ಫೋಟಗೊಂಡಿದ್ದು, ಇಬ್ಬರು ಸಾವನ್ನಪ್ಪಿದ್ದಾರೆ. ಸೇನಾ ಪಡೆಗಳು ಈ ಪ್ರದೇಶದಲ್ಲಿ ನಿಯಂತ್ರಣ ಸಾಧಿಸಿದ್ದು, ಶೋಧ ಕಾರ್ಯಾಚರಣೆ ನಡೆಸುತ್ತಿವೆ. ಹುತಾತ್ಮರಾದ ಇಬ್ಬರು ಶೌರ್ಯಶಾಲಿ ಸೈನಿಕರ ಸರ್ವೋಚ್ಚ ತ್ಯಾಗಕ್ಕೆ ವೈಟ್ ನೈಟ್



ಕಾರ್ಪ್ಸ್ ವಂದಿಸುತ್ತದೆ ಮತ್ತು ಗೌರವ ಸಲ್ಲಿಸುತ್ತದೆ" ಎಂದು ಹೇಳಿದೆ.

ಭಯೋತ್ಪಾದಕರು ಇರಿಸಿದ್ದ ಐಇಡಿಯಿಂದ ಸ್ಫೋಟ ನಡೆಸಲಾಗಿದೆ ಎಂದು ಶಂಕಿಸಲಾಗಿದೆ. ಈ ಬಗ್ಗೆ ಹೆಚ್ಚಿನ ಮಾಹಿತಿಗಳನ್ನು ನಿರೀಕ್ಷಿಸಲಾಗಿದೆ.

ಮತ್ತೊಂದು ಪ್ರತ್ಯೇಕ ಘಟನೆಯಲ್ಲಿ ಇಂದು ಬೆಳಗ್ಗೆ ಅಖ್ನೂರ್ ಸೆಕ್ಟರ್‌ನಲ್ಲಿ ತುಕ್ಕು ಹಿಡಿದ ಮೋರ್ಟಾರ್ ಶೆಲ್ ಒಂದನ್ನು ಸುರಕ್ಷಿತವಾಗಿ ನಿಷ್ಕ್ರಿಯಗೊಳಿಸಲಾಗಿದೆ. ನಮಂದರ್ ಗ್ರಾಮದ ಬಳಿಯ ಪ್ರತಾಪ್ ಕಾಲುವೆಯಲ್ಲಿ ತುಕ್ಕು ಹಿಡಿದ ಶೆಲ್ ಬಿದ್ದಿರುವುದನ್ನು ನೋಡಿದ ಸ್ಥಳೀಯರು ಈ ಬಗ್ಗೆ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದರು ಎಂದು ಎಎನ್‌ಐ ವರದಿ ಮಾಡಿದೆ.

## ಲಿಕ್ವಿಡಿಟಿ ಹೆಚ್ಚಿಸಲು 2.5 ಲಕ್ಷ ಕೋಟಿ ರೂ. ಹೂಡಲು ಆರ್‌ಬಿಐ ನಿರ್ಧಾರ

ಮುಂಬೈ: ಭಾರತದ ಬ್ಯಾಂಕಿಂಗ್ ವ್ಯವಸ್ಥೆಯಲ್ಲಿ ಲಿಕ್ವಿಡಿಟಿ ಹೆಚ್ಚಿಸಲು ಭಾರತೀಯ ರಿಸರ್ವ್ ಬ್ಯಾಂಕ್ ಇಂದು ನಡೆಯಲಿರುವ ವಿಆರ್‌ಆರ್ ಹರಾಜಿನ ಮೂಲಕ 2.5 ಲಕ್ಷ ಕೋಟಿ ರೂ. ಗಳನ್ನು ಹೂಡಿಕೆ ಮಾಡಲು ಸಜ್ಜಾಗಿದೆ.

ಹಿಂದಿನ ಎರಡು ದಿನಗಳಲ್ಲಿ ವಿದೇಶ ವಿನಿಮಯ ಮಾರುಕಟ್ಟೆಯಲ್ಲಿ ಡಾಲರ್ ಎದುರು ರೂಪಾಯಿ ಮೌಲ್ಯ ಕುಸಿತವನ್ನು ತಡೆಯಲು ಆರ್‌ಬಿಐ ಸುಮಾರು ಆರೇಳು ಬಿಲಿಯನ್ ಡಾಲರ್ ಮೌಲ್ಯದಷ್ಟು ಡಾಲರ್‌ಗಳನ್ನು ಮಾರಾಟ ಮಾಡಿತ್ತು. ಇದರಿಂದಾಗಿ ಬ್ಯಾಂಕಿಂಗ್ ವಲಯದಲ್ಲಿ ಸ್ವಲ್ಪ ಹಣದ ಕೊರತೆ ಉಂಟಾಗಿತ್ತು. ಈ ಕೊರತೆಯನ್ನು ನೀಗಿಸುವ ಸಲುವಾಗಿ ಆರ್‌ಬಿಐ ವಿಆರ್‌ಆರ್ ಹರಾಜು ಮೊರೆ ಹೋಗಿದೆ.

ಲಿಕ್ವಿಡಿಟಿ ಪರಿಸ್ಥಿತಿಗಳ ಮೌಲ್ಯಮಾಪನದ ಆಧಾರದ ಮೇಲೆ ಈ ಮೊತ್ತವನ್ನು ನಿರ್ಧರಿಸಲಾಗಿದೆ. ಮುಂದಿನ ಸೂಚನೆ ಬರುವವರೆಗೆ ಮುಂಬೈನಲ್ಲಿ ಎಲ್ಲ ಕೆಲಸದ ದಿನಗಳಲ್ಲಿ ದೈನಂದಿನ ವಿಆರ್‌ಆರ್ ಹರಾಜು ನಡೆಸಲಾಗುವುದು. ಮುಂದಿನ ಕೆಲಸದ ದಿನದಂದು ಹಿಮ್ಮುಖ ವಿತರಣೆ ನಡೆಯಲಿದೆ ಎಂದು ಕೇಂದ್ರ ಬ್ಯಾಂಕ್ ತಿಳಿಸಿದೆ.

ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ ಶುಕ್ರವಾರ ಹಣಕಾಸು ನೀತಿ ಸಭೆಯ ನಂತರ, ದೇಶದ ಆರ್ಥಿಕ ವ್ಯವಸ್ಥೆಯಲ್ಲಿ ಸಾಕಷ್ಟು ಲಿಕ್ವಿಡಿಟಿ ಒದಗಿಸಲು ಆರ್‌ಬಿಐ ಬದ್ಧವಾಗಿದೆ ಮತ್ತು ವ್ಯವಸ್ಥೆಯ ಅವಶ್ಯಕತೆಗಳನ್ನು ಪೂರೈಸಲು ದೀರ್ಘಾವಧಿ ಬಾಳಿಕೆಯ ಲಿಕ್ವಿಡಿಟಿ ಖಚಿತಪಡಿಸಿಕೊಳ್ಳಲು ಕ್ರಮಗಳನ್ನು ತೆಗೆದುಕೊಳ್ಳುತ್ತದೆ ಎಂದು ಘೋಷಿಸಿದ್ದರು.

ಆರ್‌ಬಿಐ ಭಾರತದ ರೂಪಾಯಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದ್ದು, ಭಾರತೀಯ ಕರೆನ್ಸಿಯನ್ನು ಸ್ಥಿರವಾಗಿಡಲು ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ ಎಂದು ಗವರ್ನರ್ ಹೇಳಿದ್ದರು.

ಮಾರ್ಗನ್ ಸ್ಟಾನ್ಲಿ ವರದಿಯ ಪ್ರಕಾರ, ಮಾರ್ಚ್ ಅಂತ್ಯದ ವೇಳೆಗೆ ಲಿಕ್ವಿಡಿಟಿ ಹೆಚ್ಚಾದಂತೆ ಆರ್‌ಬಿಐ ಪೂರ್ವಭಾವಿಯಾಗಿ ಲಿಕ್ವಿಡಿಟಿಯನ್ನು ನಿರ್ವಹಿಸಲಿದೆ. ಮತ್ತು ಒಎಂಒ ಖರೀದಿಗಳು, ಎಫ್‌ಎಕ್ಸ್ ಸ್ವಾಪ್‌ಗಳಂತಹ ಕೆಲವು ಹೆಚ್ಚುವರಿ ಕ್ರಮಗಳನ್ನು ತೆಗೆದುಕೊಳ್ಳುತ್ತದೆ ಎನ್ನುವ ನಿರೀಕ್ಷೆ ಇದೆ. ದೇಶೀಯ ಬೇಡಿಕೆ ದುರ್ಬಲವಾಗಿರುವುದರಿಂದ ಮತ್ತು ಜಾಗತಿಕ ಅಂಶಗಳಿಂದ ಉಂಟಾಗುವ ಅನಿಶ್ಚಿತತೆಯಿಂದ ಬೆಳವಣಿಗೆಯ ಚೇತರಿಕೆ ನೀರಸವಾಗಿದ್ದರೆ.



# ಫೋಟೋಶೂಟ್ ಮೂಲಕ ವೀಣಾ ಮಲ್ಲಿಕ್ ಪ್ರತ್ಯಕ್ಷ

ಬಿಗ್ ಬಾಸ್ ಸೀಸನ್ 4 ರಲ್ಲಿ ಕಾಣಿಸಿಕೊಂಡಿದ್ದ ಪಾಕಿಸ್ತಾನಿ ನಟಿ ವೀಣಾ ಮಲ್ಲಿಕ್ ಮತ್ತೆ ಸುದ್ದಿಯಲ್ಲಿದ್ದಾರೆ. ಇತ್ತೀಚೆಗೆ ಅವರು ಮಾಡಿಸಿರುವ ಗ್ಲಾಮರಸ್ ಫೋಟೋಶೂಟ್‌ನ ಚಿತ್ರಗಳು ವೈರಲ್ ಆಗುತ್ತಿವೆ. ಈ ಫೋಟೋಗಳನ್ನು ನೋಡಿ ಅಭಿಮಾನಿಗಳು ಫಿದಾ ಆಗಿದ್ದಾರೆ. ಕಳೆದ ಕೆಲ ವರ್ಷಗಳಿಂದ ಎಲ್ಲೂ ಸುದ್ದಿಯಲ್ಲಿರದ ವೀಣಾ ಮಲಿಕ್ ಇದೀಗ ಫೋಟೋ ಶೂಟ್ ಮೂಲಕ ಪ್ರತ್ಯಕ್ಷರಾಗಿದ್ದಾರೆ.

ವೀಣಾ ಮಲ್ಲಿಕ್ ತಮ್ಮ ಹೊಸ ಫೋಟೋಶೂಟ್‌ನ ಚಿತ್ರಗಳನ್ನು ಇನ್‌ಸ್ಟಾಗ್ರಾಮ್‌ನಲ್ಲಿ ಹಂಚಿಕೊಂಡಿದ್ದಾರೆ. ಈ ಫೋಟೋಗಳಲ್ಲಿ ವೀಣಾ ತಮ್ಮ ಆಕರ್ಷಕ ಲುಕ್‌ನಿಂದ ಆಕರ್ಷಿಸುತ್ತಿದ್ದಾರೆ. ಈ ಬಾರಿ ಯಾವುದೇ ವಿವಾದಗಳು ಸದ್ಯಕ್ಕಿಲ್ಲ. ಆದರೆ ಈ ಫೋಟೋಶೂಟ್ ಇನ್ಯಾವ ವಿವಾದ ಸೃಷ್ಟಿಸಲಿದೆ ಅನ್ನೋದು ಈಗಲೇ ಹೇಳವಂತಿಲ್ಲ.

ಹೊಸ ಫೋಟೋಶೂಟ್‌ನಲ್ಲಿ ವೀಣಾ ಮಲ್ಲಿಕ್ ಆಫ್ ಶೋಲ್ಡರ್ ಬಿಳಿ ಉಡುಪನ್ನು ಧರಿಸಿದ್ದಾರೆ. ಜೊತೆಗೆ ಗುಲಾಬಿ–ಬಿಳಿ ಲೆಹರಿಯಾ ದುಪಟ್ಟಾವನ್ನು ಸ್ಟೈಲ್ ಮಾಡಿದ್ದಾರೆ. ಮೇಕಪ್ ಮತ್ತು ರೌಂಡ್ ಕಿವಿಯೋಲೆಗಳಲ್ಲಿ ವೀಣಾ ತುಂಬಾ ಸುಂದರವಾಗಿ ಕಾಣುತ್ತಿದ್ದಾರೆ.

ವೀಣಾ ಮಲ್ಲಿಕ್ ಅವರ ಫೋಟೋಗಳನ್ನು ನೋಡಿ ಅಭಿಮಾನಿಗಳು ಅವರನ್ನು ಬೇಬಿ ಡಾಲ್ ಎಂದು ಕರೆಯುತ್ತಿದ್ದಾರೆ. ಒಬ್ಬರು ಬರೆದಿದ್ದಾರೆ – ಸುಂದರ ಲುಕ್. ಇನ್ನೊಬ್ಬರು ಹೇಳಿದ್ದಾರೆ – ವೀಣಾ ನಿಮ್ಮ ವಯಸ್ಸು ಕೇವಲ ಒಂದು ಸಂಖ್ಯೆ. ಒಬ್ಬರು ಫ್ಯಾಷನ್ ದಿವಾ ಎಂದರೆ, ಇನ್ನೊಬ್ಬರು ಕ್ಲಾಸಿ ಬ್ಯೂಟಿ ಎಂದು ಬರೆದಿದ್ದಾರೆ. ಹೀಗೆ ಇನ್ನೂ ಅನೇಕರು ಕಾಮೆಂಟ್‌ಗಳನ್ನು ಮಾಡಿದ್ದಾರೆ.

ವೀಣಾ ಮಲ್ಲಿಕ್ ಪಾಕಿಸ್ತಾನಿ ನಟಿ. 2010 ರಲ್ಲಿ ಸಲ್ಮಾನ್ ಖಾನ್ ನಡೆಸಿಕೊಡುವ ಕಾರ್ಯಕ್ರಮ ಬಿಗ್ ಬಾಸ್ 4 ರಲ್ಲಿ ಭಾಗವಹಿಸಿದ್ದರು. ಕಾರ್ಯಕ್ರಮದಲ್ಲಿ ವೀಣಾ ಸಖತ್ ಸದ್ದು ಮಾಡಿದ್ದರು. ಬಿಗ್ ಬಾಸ್ ಒಳಗೆ ಹಾಗೂ ಹೊರಗೆ ವೀಣಾ ಮಲಿಕ್ ವಿವಾದಗಳಿಂದಲೇ ಸದ್ದು ಮಾಡಿದ್ದರು. ಬಳಿಕ ಈಕೆಯ ನಡೆ,ಹೇಳಿಕೆಗಳು ಭಾರಿ ವಿವಾದ ಸೃಷ್ಟಿಸಿತ್ತು.

ವೀಣಾ ಮಲ್ಲಿಕ್ 2000 ದಲ್ಲಿ ಪಾಕಿಸ್ತಾನಿ ಚಿತ್ರ ತೇರೆ ಪ್ಯಾರ್ ಮೇಂ ಮೂಲಕ ಚಿತ್ರರಂಗಕ್ಕೆ ಪಾದಾರ್ಪಣೆ ಮಾಡಿದರು. ಇದಲ್ಲದೆ, ಯೇ ದಿಲ್ ಆಪ್ಕಾ ಹುವಾ, ಕೋಯಿ ತುಝ್ ಸಾ ಕಹಾಂ, ನಾಗ್ ಔರ್ ನಾಗಿನ್, ಮೊಹಬ್ಬತ್ ಸಂಚಿಯಾ, ಕಭಿ ಪ್ಯಾರ್ ನ ಕರ್ನಾ ಸೇರಿದಂತೆ ಹಲವು ಚಿತ್ರಗಳಲ್ಲಿ ನಟಿಸಿದ್ದಾರೆ.

48 ವರ್ಷದ ವೀಣಾ ಮಲ್ಲಿಕ್ 2013 ರಲ್ಲಿ ದುಬೈನಲ್ಲಿ ಉದ್ಯಮಿಯೊಬ್ಬರನ್ನು ವಿವಾಹವಾದರು. ಮದುವೆಯ ನಂತರ ಅವರಿಗೆ ಇಬ್ಬರು ಮಕ್ಕಳಾದರು. 2018 ರಲ್ಲಿ ಅವರ ಪತಿಯಿಂದ ವಿಚ್ಛೇದನ ಪಡೆದರು.

# ಆ ನಟಿಗಾಗಿ ಪ್ರಾಣವನ್ನೇ ಕೊಡಲು ಮುಂದಾಗಿದ್ರಂತೆ!

ಜಗಪತಿ ಬಾಬು ಮೊದಲು ಮ್ಯಾನ್ಲಿ ಹೀರೋ ಆಗಿದ್ರು. ಫ್ಯಾಮಿಲಿ ಪ್ರೇಕ್ಷಕರನ್ನ ರಂಜಿಸಿದ್ರು. ಆಕ್ಷನ್ ಸಿನಿಮಾಗಳಲ್ಲೂ ನಟಿಸಿದ್ರು. ಈಗ ಕ್ಯಾರೆಕ್ಟರ್ ಆರ್ಟಿಸ್ಟ್ ಆಗಿ ನೆಗೆಟಿವ್ ರೋಲ್ ಗಳಲ್ಲಿ ನಟಿಸ್ತಿದ್ದಾರೆ.

ಜಗಪತಿ ಬಾಬು ಮತ್ತು ಸೌಂದರ್ಯ ಬಗ್ಗೆ ಸಾಕಷ್ಟು ಗಾಸಿಪ್‌ಗಳಿದ್ದವು. ಈ ಸ್ಟಾರ್ ನಟಿಯನ್ನ ತುಂಬಾ ಪ್ರೀತಿ ಮಾಡ್ತಿದ್ರಂತೆ, ಮತ್ತೆ ಮದುವೆ ಕೂಡ ಆಗ್ಬೇಕು ಅಂತಿದ್ರಂತೆ. ಆಮನಿ ಕೂಡ ಒಂದು ಸಂದರ್ಶನದಲ್ಲಿ ಹೇಳಿದ್ರು. ಬೇರೆ ಸೀನಿಯರ್ ಪತ್ರಕರ್ತರು ಕೂಡ ಹೇಳಿದ್ರು.

ಸೌಂದರ್ಯ 2004 ರಲ್ಲಿ ಹೆಲಿಕಾಪ್ಟರ್ ಅಪಘಾತದಲ್ಲಿ ತೀರಿಕೊಂಡ್ರು. ಇದು ಇಡೀ ಇಂಡಸ್ಟ್ರಿಗೆ ಶಾಕ್ ಕೊಟ್ಟಿತ್ತು. ಜಗಪತಿ ಬಾಬು ಆಗ ಹೇಗೆ ರಿಯಾಕ್ಟ್ ಮಾಡಿದ್ರು ಅಂತ ಎಲ್ಲರೂ ಕೇಳ್ತಿದ್ರು.

ಜಗಪತಿ ಬಾಬು ತುಂಬಾ ಬೇಜಾರಾದ್ರಂತೆ. ಪ್ರಾಣಾನೇ ಬಿಡ್ತೀನಿ ಅಂದ್ರಂತೆ. ಸೀನಿಯರ್ ಪತ್ರಕರ್ತ ಇಮಂಡಿ ರಾಮರಾವ್ ಒಂದು ಸಂದರ್ಶನದಲ್ಲಿ ಹೇಳಿದ್ರು.





ಜಗಪತಿ ಬಾಬು ಸೌಂದರ್ಯ ಇಲ್ಲದೆ ಬದುಕೋಕೆ ಆಗಲ್ಲ ಅಂತ ಪ್ರಾಣ ಬಿಡ್ಬೇಕು ಅಂದ್ರಂತೆ. ಆದ್ರೆ ಕುಟುಂಬ, ಹೆಂಡತಿಯ ಒತ್ತಾಯದಿಂದ ಬದುಕಿದ್ರಂತೆ ಅಂತ ರಾಮರಾವ್ ಹೇಳಿದ್ರು. ಜಗಪತಿ ಬಾಬು ಹೇಳಿದ್ದೇನಂದ್ರೆ, ಸೌಂದರ್ಯ ತೀರಿಕೊಂಡಿದ್ದು ಬೇಸರದ ಸಂಗತಿ. ಆದ್ರೆ ನನಗೆ ಸೌಂದರ್ಯ ಕುಟುಂಬದ ಬಗ್ಗೆ ಚಿಂತೆ ಇತ್ತು. ಅವರ ಆಸ್ತಿಪಾಸ್ತಿಗಳ ಬಗ್ಗೆ ಏನಾಯ್ತು ಅಂತ ಯೋಚಿಸ್ತಿದ್ದೆ ಅಂದ್ರು.

# ‘ಸ್ಲೋ ಮೋಷನ್ ಇಲ್ಲದೆ ರಜನಿ ಇಲ್ಲ



ಸೂಪರ್‌ಸ್ಟಾರ್ ರಜನಿಕಾಂತ್ ಅವರ ಸಿನಿಮಾಗಳು ಸೂಪರ್ ಹಿಟ್ ಆಗಿವೆ. ಅವರ ಚಿತ್ರಗಳನ್ನು ಜನರು ಸಾಕಷ್ಟು ಇಷ್ಟಪಡುತ್ತಾರೆ. ಅದರಲ್ಲೂ ಅವರ ಸ್ಲೋ ಮೋಷನ್ ದೃಶ್ಯಗಳನ್ನು ಜನರು ಹುಚ್ಚೆದ್ದು ನೋಡುತ್ತಾರೆ. ಈಗ ಅವರ ಬಗ್ಗೆ ನಿರ್ದೇಶಕ ರಾಮ್ ಗೋಪಾಲ್ ವರ್ಮಾ ಹೇಳಿಕೆ ಒಂದನ್ನು ನೀಡಿದ್ದಾರೆ.

ಈ ವೇಳೆ ನಟ ಹಾಗೂ ಸ್ಟಾರ್ ಮಧ್ಯೆ ಇರುವ ವ್ಯತ್ಯಾಸವನ್ನು ವಿವರಿಸುವಾಗ ರಜನಿಕಾಂತ್ ಉದಾಹರಣೆಯನ್ನು ನೀಡಿದ್ದಾರೆ. ‘ಸ್ಲೋ ಮೋಷನ್ ಇಲ್ಲದೆ ರಜನಿಕಾಂತ್ ಇಲ್ಲ’ ಎಂದಿದ್ದಾರೆ ಅವರು.

‘ನಟನೆ ಅನ್ನೋದು ಪಾತ್ರದ ಬಗ್ಗೆ ಆದರೆ, ಸ್ಟಾರ್‌ಗಿರಿ ಅನ್ನೋದು ಪರ್ಫಾರ್ಮೆನ್ಸ್ ಮೇಲೆ ಆಧರಿಸಿರುತ್ತದೆ. ಇದರ ಮಧ್ಯೆ ಸಾಕಷ್ಟು ವ್ಯತ್ಯಾಸ ಇದೆ. ರಜನಿಕಾಂತ್ ಓರ್ವ ಉತ್ತಮ ನಟನೇ? ಅದು ನಂಗೆ ಗೊತ್ತಿಲ್ಲ. ರಜನಿಕಾಂತ್ ಎಲ್ಲ ರೀತಿಯ ಪಾತ್ರಗಳನ್ನು ಮಾಡುತ್ತಾರೆ ಎಂದು ನನಗೆ ಅನಿಸದು. ಸ್ಲೋ ಮೋಷನ್ ಇಲ್ಲದೆ ರಜನಿಕಾಂತ್ ಇಲ್ಲ’ ಎಂದು ರಾಮ್ ಗೋಪಾಲ್ ವರ್ಮಾ ಹೇಳಿದ್ದಾರೆ.

‘ರಜನಿಕಾಂತ್ ಏನೂ ಮಾಡದೇ ಅರ್ಧದಷ್ಟು ಸಿನಿಮಾ ಸ್ಲೋ ಮೋಷನ್‌ನಲ್ಲಿ ನಡೆಯುತ್ತಿದ್ದರೂ ಆ ಬಗ್ಗೆ ನೀವು ಬೇಸರ ಮಾಡಿಕೊಳ್ಳುವುದಿಲ್ಲ. ಅದು ನಿಮಗೆ ಎಗ್ಸೈಟ್‌ಮೆಂಟ್ ಕೊಡುತ್ತದೆ’ ಎಂದು ರಾಮ್ ಗೋಪಾಲ್ ವರ್ಮಾ ಹೇಳಿದ್ದಾರೆ. ಇದನ್ನು ಅವರು ಪಾಸಿಟಿವ್ ಆಗಿಯೇ ಹೇಳಿದ್ದಾರೆ.



ಅಮಿತಾಭ್ ಬಚ್ಚನ್ ಮತ್ತು ರಜನಿಕಾಂತ್ ಅವರಂತಹ ಸ್ಟಾರ್‌ಗಳನ್ನು ಜನರು ದೇವಮಾನವರಂತೆ ನೋಡುತ್ತಾರೆ. ಹೀಗಾಗಿ ಪಾತ್ರವಾಗಲು ಅವರು ಕಷ್ಟಪಡುತ್ತಾರೆ ಎಂಬುದು ರಜನಿಕಾಂತ್ ಅಭಿಪ್ರಾಯ. ‘ಓರ್ವ ಸ್ಟಾರ್ ಸಾಮಾನ್ಯ ವ್ಯಕ್ತಿಯ ಪಾತ್ರ ಮಾಡಿದರೆ ಅದು ನಿರಾಶಾದಾಯಕ ಆಗಬಹುದು’ ಎಂಬುದು ಆರ್‌ಜಿವಿ ಅಭಿಪ್ರಾಯ.

‘ನಾನು ಅಮಿತಾಭ್ ಬಚ್ಚನ್ ಅವರ ಸಿನಿಮಾ ಒಂದನ್ನು ನೋಡಿದ್ದೆ. ಆ ಸಿನಿಮಾದಲ್ಲಿ ಅವರಿಗೆ ಹೊಟ್ಟೆ ನೋವು ಬಂದಿತ್ತು. ನಾನು ಆ ದೃಶ್ಯವನ್ನೇ ದ್ವೇಷಿಸಿದ್ದೆ. ಅಮಿತಾಭ್‌ಗೆ ಹೊಟ್ಟೆನೋವು ಬರೋದನ್ನು ನೋಡಲು ನಾನು ಇಷ್ಟಪಡಲ್ಲ. ಹೀಗಾಗಿ, ಅವರು ಯಾವಾಗಲೂ ದೇವಮಾನವರಂತೆ ಆಗಬೇಕು. ದೇವ ಮಾನವರು ಪಾತ್ರವಾಗಲು ಸಾಧ್ಯವಿಲ್ಲ’ ಎನ್ನುತ್ತಾರೆ ರಾಮ್

# ತಾನೇ ನಿರ್ದೇಶಿಸಿದ ಚಿತ್ರದ ಆಡಿಯೋ ರಿಲೀಸ್‌ಗೆ ಗೈರಾದ ಧನುಷ್

ನಟನಾಗಿ ಮಾತ್ರವಲ್ಲದೆ ನಿರ್ದೇಶಕನಾಗಿಯೂ ಧನುಷ್ ತಮಿಳು ಸಿನಿಮಾದಲ್ಲಿ ಗುರುತಿಸಿಕೊಂಡಿದ್ದಾರೆ. ಪವರ್ ಪಾಂಡಿ, ರಾಯನ್ ಸಿನಿಮಾಗಳನ್ನ ನಿರ್ದೇಶಿಸಿದ್ದಾರೆ. ಪವರ್ ಪಾಂಡಿ 2017 ರಲ್ಲಿ ಬಿಡುಗಡೆಯಾಗಿತ್ತು. ರಾಯನ್ ಅವರ 50ನೇ ಸಿನಿಮಾ. ಈ ಸಿನಿಮಾ ಸೂಪರ್ ಹಿಟ್ ಆಗಿ 100 ಕೋಟಿಗೂ ಹೆಚ್ಚು ಗಳಿಸಿತು.

ರಾಯನ್ ಚಿತ್ರದ ನಂತರ ಧನುಷ್ ನಿರ್ದೇಶನದಲ್ಲಿ ಮತ್ತೊಂದು ಸಿನಿಮಾ ತಯಾರಾಗಿದೆ. ‘ನಿಲವುಕ್ಕು ಎನ್ ಮೇಲ್ ಎನ್ನಡಿ ಕೋಪಮ್’ ಅನ್ನೋದು ಈ ಚಿತ್ರದ ಹೆಸರು. ಪವಿಷ್ ನಾಯಕನಾಗಿ ನಟಿಸಿದ್ದಾರೆ.

ಇವರು ಧನುಷ್ ಅವರ ಅಕ್ಕನ ಮಗ. ಅನಿಕಾ ಸುರೇಂದ್ರನ್, ಪ್ರಿಯಾ ವಾರಿಯರ್ ಕೂಡ ನಟಿಸಿದ್ದಾರೆ. ಜಿ.ವಿ.ಪ್ರಕಾಶ್ ಕುಮಾರ್ ಸಂಗೀತ ನೀಡಿದ್ದಾರೆ. ಫೆಬ್ರವರಿ 21 ರಂದು ರಿಲೀಸ್ ಆಗುತ್ತಿದೆ.

‘ನಿಲವುಕ್ಕು ಎನ್ ಮೇಲ್ ಎನ್ನಡಿ ಕೋಪಮ್’ ಸಿನಿಮಾದ ಆಡಿಯೋ ರಿಲೀಸ್ ಇಂದು ಚೆನ್ನೈನಲ್ಲಿ




ನಡೆಯಿತು.

ನಿರ್ದೇಶಕ ರಾಜ್‌ಕುಮಾರ್ ಪೆರಿಯಸ್ವಾಮಿ, ನಟ ಅರುಣ್ ವಿಜಯ್ ಮುಖ್ಯ ಅತಿಥಿಗಳಾಗಿದ್ದರು. ಚಿತ್ರತಂಡ ಕೂಡ ಭಾಗವಹಿಸಿತ್ತು. ಆದರೆ ನಿರ್ದೇಶಕ ಧನುಷ್ ಭಾಗವಹಿಸಲಿಲ್ಲ.

ನಯನತಾರಾ ತಮ್ಮ ಸಿನಿಮಾಗಳ ಆಡಿಯೋ ಲಾಂಚ್‌ಗಳಿಗೆ ಬರಲ್ಲ. ಈಗ ಧನುಷ್ ಕೂಡ ಅದನ್ನೇ ಮಾಡ್ತಿದ್ದಾರಾ ಅಂತ ನೆಟ್ಟಿಗರು ಟೀಕಿಸಿದ್ದಾರೆ. ಆದರೆ ಧನುಷ್ ಬರದಿರಲು ಕಾರಣ ಶೂಟಿಂಗ್‌ನಲ್ಲಿ ಬ್ಯುಸಿ ಇದ್ದದ್ದು ಅಂತ ತಿಳಿದುಬಂದಿದೆ. ಇನ್ನೊಂದು ಸಿನಿಮಾವನ್ನು ಕೂಡ ನಿರ್ದೇಶಿಸಲಿದ್ದಾರೆ ಎಂಬ ಸುದ್ದಿ ಹೊರಬಿದ್ದಿದೆ.



# ತ್ರಿಷಾಗೆ ಶಾಕ್ ಕೊಟ್ಟ ಹ್ಯಾಕರ್ಸ್

ತ್ರಿಷಾ 20 ವರ್ಷಗಳಿಂದ ನಾಯಕಿಯಾಗಿ ಮಿಂಚುತ್ತಿದ್ದಾರೆ. ಇತ್ತೀಚೆಗೆ ಅಜಿತ್ ನಟಿಸಿದ್ದ ’ಪಟ್ಟುದಲ’ ಚಿತ್ರದಲ್ಲಿ ನಟಿಸಿದ್ದರು. ಈ ಚಿತ್ರದಲ್ಲಿ ಅಜಿತ್ ಪತ್ನಿಯಾಗಿ ತ್ರಿಷಾ ಅವರ ನಟನೆಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ.

ತ್ರಿಷಾ ಪ್ರಸ್ತುತ ಮಣಿರತ್ನಂ ನಿರ್ದೇಶನದ ’ದಕ್ ಲೈಫ್’ ಚಿತ್ರದಲ್ಲಿ ನಟಿಸುತ್ತಿದ್ದಾರೆ. ತೆಲುಗಿನಲ್ಲಿ ಚಿರಂಜೀವಿ ಜೊತೆ ’ವಿಶ್ವಂಭರ’ ಚಿತ್ರದಲ್ಲೂ ನಟಿಸುತ್ತಿದ್ದಾರೆ. ’ಗುಡ್ ಬ್ಯಾಡ್ ಅಗ್ಲಿ’, ’ಸೂರ್ಯ 45’ ಚಿತ್ರಗಳಲ್ಲಿಯೂ ನಟಿಸುತ್ತಿದ್ದಾರೆ. 41ನೇ ವಯಸ್ಸಿನಲ್ಲೂ ಬ್ಯುಸಿ ನಟಿ.

ತ್ರಿಷಾ ಟ್ವಿಟ್ಟರ್ ಖಾತೆಯಲ್ಲಿ ಕ್ರಿಪ್ಟೋಕರೆನ್ಸಿ ಜಾಹೀರಾತುಗಳು ಕಾಣಿಸಿಕೊಂಡವು. ಆ ಪೋಸ್ಟ್ ಕೆಲವೇ ನಿಮಿಷಗಳಲ್ಲಿ ಡಿಲೀಟ್ ಆಯಿತು. ತ್ರಿಷಾ ಟ್ವಿಟ್ಟರ್ ಖಾತೆ ಹ್ಯಾಕ್ ಆಗಿರಬಹುದು ಎಂದು ಅಭಿಮಾನಿಗಳು ಶಂಕಿಸಿದ್ದಾರೆ.

ನಟಿ ತ್ರಿಷಾ ತಮ್ಮ ಇನ್‌ಸ್ಟಾ ಖಾತೆಯಲ್ಲಿ ಸ್ಪಷ್ಟನೆ ನೀಡಿದ್ದಾರೆ. “ನನ್ನ ಎಕ್ಸ್ ಖಾತೆ ಹ್ಯಾಕ್ ಆಗಿದೆ. ಸರಿಪಡಿಸುವವರೆಗೂ ಅದರಲ್ಲಿ ಬರುವ ಪೋಸ್ಟ್‌ಗಳನ್ನು ನಂಬಬೇಡಿ” ಎಂದು ಬರೆದಿದ್ದಾರೆ.

ಪ್ರಕಾಶಕ– ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. **RNI.KAR/KAN/2009/31934,** ದೂರವಾಣಿ: **9448074878**
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
Email-mussanje2010@gmail.com, Phone: **9448074878**